ಸಂಪುಟ: 22, ಸಂಚಿಕೆ: 229, ಪುಟಗಳು: 8, ಗುರುವಾರ, 29 ಮೇ 2025 RNI NO. KARKAN/2002/08054
epaper: www.sanjemugilu.com



ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ವೇಣು ಸಾರಥ್ಯದಲ್ಲಿ...

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3

ಸುಭಾಷಿತ

ನಮಗೆ ಸಿಕ್ಕುವ ಬಹುತೇಕರು ಹೇಗೆಂದರೆ ಬಾಯಲ್ಲಿ ಬೆಲ್ಲ; ಎದೆಯಲ್ಲಿ ನೀಚತನ.

**ಪಂಚಾಂಗ**

(ಗುರುವಾರ 29 ಮೇ-2025)

- ಶ್ರೀ ವಿಶ್ವಾವಸುನಾಮ ಸಂವತ್ಸರ,
- ಉತ್ತರಾಯಣ, ವಸಂತ ಋತು,
- ವೈಶಾಖ ಮಾಸ,
- ಕೃಷ್ಣಪಕ್ಷ, ದಶಮಿ, ಗುರುವಾರ,
- ಪೂರ್ವಾಭಾದ್ರಪದ ನಕ್ಷತ್ರ
- ರಾಹುಕಾಲ - 01:55 ರಿಂದ 03:31
- ಗುಳಿಕಕಾಲ - 09:08 ರಿಂದ 10:44
- ಯಮಗಂಡಕಾಲ - 05:57 ರಿಂದ 07:32



ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of Newspapers | Tabloids | Magazines

## ಮೂರೇ ದಿನಕ್ಕೆ 9 ಅಡಿ ಭರ್ತಿಯಾದ ಕೆಆರ್‌ಎಸ್ ಡ್ಯಾಂ

# ಪ್ರವಾಹಕ್ಕೆ ತಲುಪಿದ ಜಲಾಶಯಗಳು

**ಬೆಂಗಳೂರು:** ಅವಧಿಗೂ ಮುನ್ನವೇ ಕರ್ನಾಟಕಕ್ಕೆ ಕಾಲಿಟ್ಟಿರುವ ಮುಂಗಾರು ಮಳೆ ರಾಜ್ಯದ ಅನೇಕ ಕಡೆಗಳಲ್ಲಿ ಅವಾಂತರಗಳನ್ನೇ ಸೃಷ್ಟಿಸಿದೆ. ಪಶ್ಚಿಮ ಘಟ್ಟ ಪ್ರದೇಶಗಳು ಸೇರಿದಂತೆ ಅನೇಕ ಕಡೆಗಳಲ್ಲಿ ವರ್ಷಧಾರೆ ಸುರಿಯುತ್ತಿದ್ದು, ನದಿಗಳ ಹರಿವಿನ ಮಟ್ಟ ಹೆಚ್ಚಾಗಿದೆ. ರಾಜ್ಯದ ಪ್ರಮುಖ ಜಲಾಶಯಗಳಲ್ಲಿ ಪವಾಹ ಸ್ಥಿತಿಗೆ ತಲುಪಿದೆ. ಕಾವೇರಿ ಜಲಾನಯನ ಪ್ರದೇಶದಲ್ಲಿ ಧಾರಾಕಾರ ಮಳೆಯಾಗುತ್ತಿರುವ ಕಾರಣ ಮಂಡ್ಯ ಜಿಲ್ಲೆ ಶ್ರೀರಂಗಪಟ್ಟ ತಾಲೂಕಿನಲ್ಲಿರುವ ಕೃಷ್ಣರಾಜಸಾಗರ ಜಲಾಶಯ ಮೂರೇ ದಿನಗಳಲ್ಲಿ 9 ಅಡಿ ಭರ್ತಿಯಾಗಿದೆ. ಸದ್ಯ ಜಲಾಶಯದ ನೀರಿನ ಮಟ್ಟ 98 ಅಡಿ ತಲುಪಿದೆ. ಇದು 124.80 ಅಡಿ ಗರಿಷ್ಠ ಸಾಮರ್ಥ್ಯವಿರುವ ಜಲಾಶಯವಾಗಿದೆ.

ಕೆಆರ್‌ಎಸ್ ಜಲಾಶಯಕ್ಕೆ ಸದ್ಯ 22 ಸಾವಿರ ಕ್ಯೂಸೆಕ್ ನೀರು ಒಳಹರಿವು ಇದೆ. ಡ್ಯಾಂನಿಂದ 630 ಕ್ಯೂಸೆಕ್ ನೀರು ಬಿಡುಗಡೆ ಮಾಡಲಾಗುತ್ತಿದೆ. ಕಾವೇರಿ ಜಲಾನಯನ ಪ್ರದೇಶಗಳಲ್ಲಿ ಇದೇ ರೀತಿ ಮಳೆ ಮುಂದುವರಿದರೆ, ಮುಂದಿನ ಮೂರ್ನಾಲ್ಕು ದಿನಗಳಲ್ಲಿ ನೀರಿನ ಮಟ್ಟ 100 ಅಡಿ ದಾಟುವ ನಿರೀಕ್ಷೆಯಿದೆ ಎಂದು ಅಧಿಕಾರಿಗಳು ಅಭಿಪ್ರಾಯಪಟ್ಟಿದ್ದಾರೆ.

**ಒಂದು ತಿಂಗಳು ಮೊದಲೇ ಡ್ಯಾಂನಲ್ಲಿ ಹೆಚ್ಚಾದ ಸಂಗ್ರಹ:** ಸಾಮಾನ್ಯವಾಗಿ ಜೂನ್ ಅಂತ್ಯ ಅಥವಾ ಜುಲೈನಲ್ಲಿ ಮಾತ್ರ ನೀರಿನ ಮಟ್ಟ 100 ಅಡಿ ದಾಟುತ್ತದೆ. ಕಳೆದ ಮೂರು ದಿನಗಳಲ್ಲಿ ಕೊಡಗು ಮತ್ತು ಮೈಸೂರಿನಲ್ಲಿ ಭಾರಿ ಮಳೆಯಾದ ಕಾರಣ ಅಣೆಕಟ್ಟೆಗೆ ಉತ್ತಮ ಪ್ರಮಾಣದ ನೀರು ಬಂದಿದ್ದು, ಒಟ್ಟಾರೆಯಾಗಿ 6 ಅಡಿಗಳಿಗಿಂತ ಹೆಚ್ಚು ಏರಿಕೆಯಾಗಿದೆ. ಶನಿವಾರ 150 ಕ್ಯೂಸೆಕ್ ಇದ್ದ ಒಳಹರಿವು ಬುಧವಾರ ಬೆಳಿಗ್ಗೆ 8 ಗಂಟೆಗೆ 26,424 ಕ್ಯೂಸೆಕ್‌ಗೆ ಏರಿತು ಎಂದು ಮೂಲಗಳು ತಿಳಿಸಿವೆ.

**ಆಲಮಟ್ಟಿ ಡ್ಯಾಂಗೆ ಒಳ ಹರಿವು ಹೆಚ್ಚಳ:** ವಿಜಯಪುರ ಜಿಲ್ಲೆ ನಿಡಗುಂದಿ ತಾಲೂಕಿನ ಆಲಮಟ್ಟಿ ಬಳಿಯ ಲಾಲ್ ಬಹಾದ್ದೂರ್ ಶಾಸ್ತ್ರೀ ಸಾಗರ ಡ್ಯಾಂಗೆ 60,379 ಕ್ಯೂಸೆಕ್ ಒಳ ಹರಿವು ದಾಖಲಾಗಿದೆ. ಸದ್ಯ ಡ್ಯಾಂನಿಂದ 530 ಕ್ಯೂಸೆಕ್ ನೀರಿನ ಹೊರ ಹರಿವು ಇದೆ. 519.60 ಮೀಟರ್ ಎತ್ತರದ ಡ್ಯಾಂನಲ್ಲಿ 512.78 ಮೀಟರ್ ನೀರು ಸಂಗ್ರಹವಾಗಿದೆ. ವಾಡಿಕೆಗಿಂತ ಮೊದಲೇ ಹೆಚ್ಚಿನ ಒಳ ಹರಿವು ಕಂಡುಬಂದಿರುವುದು ಡ್ಯಾಂ ಬೇಗನೆ ಗರಿಷ್ಠ ಮಟ್ಟ ತಲುಪುವ ಭರವಸೆ ನೀಡಿದೆ. ಇದರಿಂದ ರೈತರೂ ಖುಷಿಯಾಗಿದ್ದಾರೆ.

ಪುಟ 2



## ಹಾಸನದಲ್ಲಿ ತಗ್ಗಿದ ಮಳೆ ಅಬ್ಬರ ಹೇಮಾವತಿ ಒಳಹರಿವಿನಲ್ಲಿ ಇಳಿಕೆ

**ಹಾಸನ:** ಜಿಲ್ಲೆಯಲ್ಲಿ ಕಳೆದ ಕೆಲವು ದಿನಗಳಿಂದ ಸುರಿಯುತ್ತಿದ್ದ ಮಳೆಯ ಅಬ್ಬರ ತಗ್ಗಿದೆ. ಇದರ ಪರಿಣಾಮ ಇಂದು ಜಿಲ್ಲೆಯ ಜೀವನದಿ ಹೇಮಾವತಿ ನದಿಯ ಒಳಹರಿವು ಸಹ ಇಳಿಕೆಯಾಗಿದೆ.

ಸಕಲೇಶಪುರ, ಆಲೂರು, ಬೇಲೂರು ಹಾಗೂ ಅರಕಲಗೂಡು ಭಾಗದಲ್ಲಿ ಮಳೆ ಬಿಟ್ಟು ಬಿಟ್ಟು ಬರುತ್ತಿದೆ. 37.103 ಟಿಎಂಸಿ ನೀರು ಸಂಗ್ರಹ ಸಾಮರ್ಥ್ಯದ ಹೇಮಾವತಿ ಜಲಾಶಯದಲ್ಲಿ ಸದ್ಯ, 23.136 ಟಿಎಂಸಿ ನೀರು ಸಂಗ್ರಹವಾಗಿದೆ.

ಪುಟ 2



## ನದಿಗಿಳಿಯದಂತೆ ಜಿಲ್ಲಾಡಳಿತ ಸೂಚನೆ

**ಯಾದಗಿರಿ:** ಜಿಲ್ಲೆಯಲ್ಲಿ ಮುಂಗಾರು ಅಬ್ಬರ ಜೋರಾಗಿದ್ದು, ಭೀಮಾ ನದಿ ಅಪಾಯದಮಟ್ಟ ಮೀರಿ ಹರಿಯುತ್ತಿವೆ. ಹೀಗಾಗಿ ಪ್ರವಾಹದ ಆತಂಕ ಶುರುವಾಗಿದ್ದು, ಜಿಲ್ಲಾಡಳಿತ ನದಿಗಿಳಿಯದಂತೆ ಕಟ್ಟುನಿಟ್ಟಿನ ಸೂಚನೆ ನೀಡಿದೆ.

ಮಹಾರಾಷ್ಟ್ರ ಪಶ್ಚಿಮ ಘಟ್ಟಗಳಲ್ಲಿ ನಿರಂತರವಾಗಿ ಮಳೆಯಾಗುತ್ತಿರುವ ಕಾರಣಕ್ಕೆ ಹಲವು ಜಿಲ್ಲೆಗಳಲ್ಲಿ ಪ್ರವಾಹದ ಅತಂಕ ಶುರುವಾಗಿದೆ. ಹೀಗಾಗಿ ಯಾದಗಿರಿ ಜಿಲ್ಲೆಯ ಭೀಮಾ ನದಿಯ ತೀರದ ಗ್ರಾಮಸ್ಥರಿಗೆ ಎಚ್ಚರಿಕೆ ನೀಡಲಾಗಿದೆ. ಭತ್ತಿ ಹೋಗಿದ್ದ ನದಿಗೆ ಅಪಾರ ಪ್ರಮಾಣದ ನೀರು ಹರಿದು ಬರುತ್ತಿದ್ದು, ನದಿಯ ಭೋರ್ಗರೆತ ಹೆಚ್ಚಾಗಿದೆ.

ಕಳೆದ ಒಂದು ವಾರದ ಹಿಂದಷ್ಟೇ ಸಂಪೂರ್ಣವಾಗಿ ಬರಿದಾಗಿದ್ದ ಭೀಮೆಯ ಒಡಲು ಭರ್ತಿಯಾಗಿದೆ. ನದಿಗೆ ಹೆಚ್ಚಿನ ಪ್ರಮಾಣದಲ್ಲಿ ನೀರು ಹರಿದು ಬರುತ್ತಿದ್ದು ಭೋರ್ಗರೆತ ಹೆಚ್ಚಾಗಿದೆ. ಹೀಗಾಗಿ ಗ್ರಾಮಸ್ಥರಲ್ಲಿ ಪ್ರವಾಹದ ಆತಂಕ ಮನೆ ಮಾಡಿದೆ. ನದಿಯ ಎಡ ಭಾಗದಲ್ಲಿ ಯಾದಗಿರಿ ತಾಲೂಕಿನ ಹತ್ತಾರು ಹಳ್ಳಿಗಳಿವೆ. ನದಿಯ ಬಲ ಭಾಗದಲ್ಲಿ ವಡಗೇರ ತಾಲೂಕಿನ ಹತ್ತಾರು ಹಳ್ಳಿಗಳ ಜನರಲ್ಲಿ ಪ್ರವಾಹದ ಆತಂಕ ಮನೆ ಮಾಡಿದ್ದು, ಗ್ರಾಮಸ್ಥರು ಎಚ್ಚರದಿಂದ ಇರುವಂತೆ ಜಿಲ್ಲಾಡಳಿತ ಕಟ್ಟುನಿಟ್ಟಿನ ಸೂಚನೆ ನೀಡಿದೆ.

ನದಿ ತೀರದ ಗ್ರಾಮಸ್ಥರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಜಿಲ್ಲಾಡಳಿತ ಮತ್ತು ಜಿಲ್ಲಾ ಪೊಲೀಸ್ ಇಲಾಖೆ ಕಳೆದ ಎರಡು ದಿನಗಳಿಂದ ನದಿ ತೀರದ ಗ್ರಾಮಸ್ಥರಿಗೆ ಡಂಗೂರ ಹಾಗೂ ಮೈಕ್‌ಗಳ ಮೂಲಕ ಅನೌನ್ಸ್‌ಮೆಂಟ್ ಮಾಡಿ ನದಿ ದಡಕ್ಕೆ ತೆರಳದಂತೆ ಎಚ್ಚರಿಕೆ ನೀಡಲಾಗುತ್ತಿದೆ. ಸದ್ಯ ನದಿಗೆ ವಡಗೇರ ತಾಲೂಕಿನ ಗುರುಸಣಗಿ ಸೇತುವೆಯಿಂದ ಸುಮಾರು ಮೂರು ಸಾವಿರ ಕ್ಯುಸೆಕ್‌ನಷ್ಟು ನೀರು ಹರಿ ಬಿಡಲಾಗಿದೆ. ಹೀಗಾಗಿ ನದಿ ತೀರಕ್ಕೆ ಹೋಗದಂತೆ ಸೂಚನೆ ನೀಡಲಾಗಿದೆ. ಈ ಮಧ್ಯೆ, ಜಿಲ್ಲಾಡಳಿತ ಎಚ್ಚರಿಕೆ ನೀಡಿದ್ದರೂ ಸಹ ನದಿ ತೀರದಲ್ಲಿ ಮೀನು ಹಿಡಿಯುವ ಕೆಲಸಕ್ಕೆ ಮುಂದಾಗಿ ಹುಚ್ಚಾಟ ಮೆರೆಯುತ್ತಿದ್ದಾರೆ. ಕೆಲವು ದಿನಗಳ ಹಿಂದಷ್ಟೇ ಭೀಮಾ ನದಿಗೆ ಕಡಿಮೆ ನೀರಿದ್ದ ಸಮಯದಲ್ಲಿ ಮೀನು ಹಿಡಿಯಲು ಹೋಗಿ ಇಬ್ಬರು ಯುವಕರು ಪ್ರಾಣ ಕಳೆದುಕೊಂಡಿದ್ದರು.



## ಸಂಕ್ಷಿಪ್ತ ಸುದ್ದಿ

### ಪತ್ನಿಯನ್ನು ಕೊಂದು ನಾಪತ್ತೆಯಾಗಿದ್ದ ಪತಿ



**ಚಿಕ್ಕಮಗಳೂರು:** ಇಲ್ಲಿನ ಕೈಮರ ಚೆಕ್‌ಪೋಸ್ಟ್ ಬಳಿ ಪತ್ನಿಯನ್ನ ಕೊಂದು ನಾಪತ್ತೆಯಾಗಿದ್ದ ಪತಿಯನ್ನು ಗ್ರಾಮಾಂತರ ಪೊಲೀಸರು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ. ಅವಿನಾಶ್ (32) ಬಂಧಿತ ಆರೋಪಿ.

» **ಮುಳ್ಳಯ್ಯನಗಿರಿ ಕಾಡಿನಲ್ಲಿ ಬಂಧನ**

ಅವಿನಾಶ್, ಕೀರ್ತಿ(26)ಯನ್ನು 4 ವರ್ಷದ ಹಿಂದೆ ಪ್ರೀತಿಸಿ ಮದುವೆಯಾಗಿದ್ದ. ಬುಧವಾರ ಬೆಳಗ್ಗೆ ಇವರಿಬ್ಬರ ಮಧ್ಯೆ ಜಗಳ ಏರ್ಪಟ್ಟು, ಪತ್ನಿ ಕೀರ್ತಿಯನ್ನ ಅವಿನಾಶ್ ಚಾಕುವಿನಿಂದ ಹತ್ತಕ್ಕೂ ಹೆಚ್ಚು ಬಾರಿ ಇರಿದಿದ್ದ. ಪತಿಯಿಂದ ಚಾಕು ಇರಿತಕ್ಕೊಳಗಾದ ಕೀರ್ತಿ ರಕ್ತದ ಮಡುವಿನಲ್ಲೇ ಮನೆಯಿಂದ ಓಡಿ ಬಂದು ನಡು ರಸ್ತೆಯಲ್ಲಿ ಕೂಗಿಕೊಂಡು ಬಿದ್ದಿದ್ದಳು. ಕೂಡಲೇ ಆಕೆಯನ್ನು ಪೋಷಕರು ಹಾಗೂ ಸ್ಥಳೀಯರು ಆಸ್ಪತ್ರೆಗೆ ದಾಖಲಿಸುವ ಪ್ರಯತ್ನ ಮಾಡಿದ್ದರು.

ಪುಟ 2

### ಡ್ಯಾನ್ಸ್ ಮಾಸ್ಟರ್‌ನಿಂದ ಅಪ್ರಾಪ್ತೆಗೆ ಲೈಂಗಿಕ ಕಿರುಕುಳ

**ಬೆಂಗಳೂರು:** ಡ್ಯಾನ್ಸ್ ಕ್ಲಾಸ್ ಬಗ್ಗೆ ಮಾತನಾಡುವುದಾಗಿ ಪುಸಲಾಯಿಸಿ ಕಾರ್‌ಗೆ ಹತ್ತಿಸಿಕೊಂಡು ಡ್ಯಾನ್ಸ್ ಮಾಸ್ಟರ್‌ನಿಂದ ಅಪ್ರಾಪ್ತೆಗೆ ಲೈಂಗಿಕ ಕಿರುಕುಳ ಆರೋಪ ಕೇಳಿಬಂದಿರುವಂತಹ ಘಟನೆ ಮೇ 24ರ ಬೆಳಗ್ಗೆ ಕಾಡುಗೋಡಿಯಲ್ಲಿ ನಡೆದಿದ್ದು, ತಡವಾಗಿ ಬೆಳಕಿಗೆ ಬಂದಿದೆ. ಸದ್ಯ ಡ್ಯಾನ್ಸ್ ಮಾಸ್ಟರ್ ಭಾರತಿ ಕಣ್ಣನ್ (28)ನ್ನು ಬಂಧಿಸಿದ್ದು, ಕಾಡುಗೋಡಿ ಠಾಣೆಯಲ್ಲಿ ದೂರು ದಾಖಲಾಗಿದೆ.



» **ಆರೋಪಿ ಬಂಧನ**

**ನಡೆದದ್ದೇನು?:** ರಸ್ತೆಯಲ್ಲಿ ನಡೆದುಕೊಂಡು ಹೋಗುತ್ತಿದ್ದ ಅಪ್ರಾಪ್ತೆ ಬಳಿ ಕಾರ್ ನಿಲ್ಲಿಸಿದ್ದ ಆರೋಪಿ, ನಾನು ಡ್ಯಾನ್ಸ್ ಮಾಸ್ಟರ್ ಅಂತ ಪರಿಚಯ ಮಾಡಿಕೊಂಡಿದ್ದಾನೆ. ಬಳಿಕ ಡ್ಯಾನ್ಸ್ ಕ್ಲಾಸ್ ಬಗ್ಗೆ ತಿಳಿಸುವುದಾಗಿ ಪುಸಲಾಯಿಸಿ ಕಾರಿಗೆ ಹತ್ತಿಸಿಕೊಂಡಿದ್ದಾನೆ. ಅಪ್ರಾಪ್ತೆ ಕಾರಿನ ಒಳಗಡೆ ಕುಳಿತ್ತಿದ್ದು, ಕಾರ್ ಲಾಕ್ ಮಾಡಿ ಸ್ವಲ್ಪ ದೂರ ಹೋಗಿದ್ದಾನೆ. ಈ ವೇಳೆ ಕಾರ್‌ನಲ್ಲೇ ಅಪ್ರಾಪ್ತೆಗೆ ಲೈಂಗಿಕ ಕಿರುಕುಳ ನೀಡಿದ್ದಾನೆ. ನಂತರ ಹತ್ತಿಸಿಕೊಂಡ ಸ್ಥಳಕ್ಕೆ ವಾಪಸ್ ಕರೆತಂದು ಬಿಟ್ಟಿದ್ದಾನೆ. ಈ ಘಟನೆ ಬಗ್ಗೆ ಅಪ್ರಾಪ್ತೆ ಪೋಷಕರಿಗೆ ತಿಳಿಸಿದ್ದಾಳೆ. ಪೋಷಕರ ದೂರು ಆಧರಿಸಿ ಭಾರತಿ ಕಣ್ಣನ್‌ನ್ನು ಪೊಲೀಸರು ಬಂಧಿಸಿದ್ದಾರೆ.

## ವಾಯುಭಾರ ಕುಸಿತದ ಎಫೆಕ್ಟ್

# ಇನ್ನೆರಡು ದಿನ ಭಾರೀ ಮಳೆ!

**ಬೆಂಗಳೂರು:** ವಾಯುಭಾರ ಕುಸಿತದಿಂದ ರಾಜ್ಯದಲ್ಲಿ ವ್ಯಾಪಾಕ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ. ಇದರಿಂದ ಕರ್ನಾಟಕ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಹೇಳಿದೆ.

ಕರ್ನಾಟಕದ ಹಲವು ಜಿಲ್ಲೆಗಳಲ್ಲಿ ಮೇ 30ರ ವರೆಗೆ ವ್ಯಾಪಕವಾಗಿ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಮೇ 31 ರಿಂದ ಮಳೆ ತೀವ್ರತೆ ಕಡಿಮೆ ಆಗುವ ಸಾಧ್ಯತೆಯಿದೆ. ಹೀಗಾಗಿ ರಾಜ್ಯದ ಎಲ್ಲಾ ಜಿಲ್ಲೆಗಳಿಗೆ ಮಳೆಯ ಅಲರ್ಟ್ ನೀಡಿ ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ.

ಕರಾವಳಿ, ಮಲೆನಾಡಿನ ಜಿಲ್ಲೆಗಳಿಗೆ ಹವಾಮಾನ ಇಲಾಖೆ ರೆಡ್ ಅಲರ್ಟ್ ನೀಡಿದೆ. ಜೊತೆಗೆ ಇಂದು ಬೆಂಗಳೂರಿಗೆ ಯಲ್ಲೋ ಅಲರ್ಟ್ ನೀಡಲಾಗಿದೆ. ಮತ್ತು ಉತ್ತರಕನ್ನಡ, ಉಡುಪಿ, ದಕ್ಷಿಣ ಕನ್ನಡ, ಶಿವಮೊಗ್ಗ, ಚಿಕ್ಕಮಗಳೂರು, ಕೊಡಗಿನ ಕೆಲವು ಕಡೆಗಳಲ್ಲಿ ಭಾರಿ ಮಳೆಯಾಗಲಿದೆ ಎನ್ನಲಾಗಿದೆ. ಹೀಗಾಗಿ ಈ ಎಲ್ಲಾ ಜಿಲ್ಲೆಗಳಿಗೆ ಭಾರೀ ಮಳೆಯಾಗುವ ಮುನ್ಸೂಚನೆ ನೀಡಿ ಹವಾಮಾನ ಇಲಾಖೆ ರೆಡ್ ಅಲರ್ಟ್ ಘೋಷಣೆ ಮಾಡಿದೆ.

**ಬೆಳಗಾವಿ, ಧಾರವಾಡ, ಹಾಸನ ಜಿಲ್ಲೆಗಳಿಗೆ ಆರೆಂಜ್ ಅಲರ್ಟ್!:** ಇನ್ನು ಬೆಳಗಾವಿ, ಧಾರವಾಡ,



ಹಾಸನ ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ಘೋಷಣೆ ಮಾಡಲಾಗಿದೆ. ದಾವಣಗೆರೆ, ಮೈಸೂರು, ಚಾಮರಾಜನಗರ ಜಿಲ್ಲೆಗಳಿಗೆ ಹವಾಮಾನ ಇಲಾಖೆ ಯೆಲ್ಲೋ ಅಲರ್ಟ್ ನೀಡಲಾಗಿದೆ. ಹೀಗಾಗಿ ಎಲ್ಲರೂ ಸ್ವಲ್ಪ ಮಳೆ ಬಗ್ಗೆ ಜಾಗರೂಕರಾಗಿರಬೇಕೆಂದು ತಿಳಿಸಲಾಗಿದೆ.

**ಬೆಂಗಳೂರಿಗೆ ಯೆಲ್ಲೋ ಅಲರ್ಟ್ ಘೋಷಣೆ!:** ರಾಜ್ಯ ರಾಜಧಾನಿ ಬೆಂಗಳೂರಿನಲ್ಲಿ ಇನ್ನೆರಡು ದಿನ ಸಾಧಾರಣ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ವಾಯುಭಾರ ಕುಸಿತದಿಂದ ಬೆಂಗಳೂರಲ್ಲೂ ಜಿಟಿ ಜಿಟಿ ಮಳೆಯಾಗುವ ಸಾಧ್ಯತೆ ಇದೆ ಮತ್ತು ಮೋಡ ಕವಿಡ ವಾತಾವರಣ ಇರಲಿದೆ ಎಂದು ಹವಾಮಾನ ಇಲಾಖೆ ಯೆಲ್ಲೋ ಅಲರ್ಟ್ ಘೋಷಣೆ ಮಾಡಿ ಎಚ್ಚರಿಕೆ ನೀಡಿದೆ.

**ಶಾಲಾ-ಕಾಲೇಜಿಗೆ ರಜೆ!:** ಕೊಡಗಿನಲ್ಲಿ ಮಳೆಯ ಅಬ್ಬರ ಜೋರಾಗಿಯೇ ಇದ್ದು, ಇಂದಿನಿಂದ ಎರಡು ದಿನಗಳ ಕಾಲ ಶಾಲಾ ಕಾಲೇಜಿಗೆ ರಜೆ ಘೋಷಣೆ ಮಾಡಲಾಗಿದೆ. (ಮೇ 29 ಮತ್ತು 30) ಅಂಗನವಾಡಿ, ಪ್ರಾಥಮಿಕ ಮತ್ತು ಪ್ರೌಢಶಾಲೆ ಹಾಗೂ ಪದವಿ ಪೂರ್ವ ಕಾಲೇಜಿಗೆ ರಜೆ ಘೋಷಿಸಲಾಗಿದೆ. ಜಿಲ್ಲಾಧಿಕಾರಿ ವೆಂಕಟ್ ರಾಜಾ ಆದೇಶ ಹೊರಡಿಸಿದ್ದು, ಬಿರುಗಾಳಿ ಸಹಿತ ಭಾರೀ ಮಳೆ ಹಿನ್ನೆಲೆ ಮುನ್ನಚರಿಕಾ ಕ್ರಮವಾಗಿ ರಜೆ ಘೋಷಿಸಲಾಗಿದೆ ಎಂದು ಹೇಳಲಾಗಿದೆ.

ಉತ್ತರಕನ್ನಡ ಜಿಲ್ಲೆಯಲ್ಲಿ ಭಾರೀ ಮಳೆ ಹಿನ್ನಲೆ ಇಂದು ಅಂಗನವಾಡಿಗಳಿಗೆ ರಜೆ ಘೋಷಣೆ ಮಾಡಲಾಗಿದೆ. ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮಿ ಪ್ರಿಯಾ, ರಜೆ ನೀಡುವಂತೆ ಆದೇಶಿಸಿ ಘೋಷಣೆ ಮಾಡಿದ್ದಾರೆ.

## ದೊಡ್ಡಕಲ್ಲಸಂದ್ರ ರಸ್ತೆಯ ದುಸ್ಥಿತಿ ವಿಡಿಯೋ ಮಾಡಿ ತೋರಿಸಿದ ನಟ



**ಬೆಂಗಳೂರು:** ಬೆಂಗಳೂರಿನ ಕನಕಪುರ ರಸ್ಯೆಯ ದೊಡ್ಡಕಲ್ಲಸಂದ್ರದಲ್ಲಿ ರಸ್ತೆ ಅವಸ್ಥೆ ವಾಹನ ಸವಾರರಿಗೆ ಸಂಕಷ್ಟ ತಂದೊಡ್ಡಿದೆ. ಹೌದು ಮಳೆಯಿಂದಾಗಿ ಕನಕಪುರ ರಸ್ಯೆಯ ದೊಡ್ಡಕಲ್ಲಸಂದ್ರದ ರಸ್ತೆ ಸಂಪೂರ್ಣ ಹದಗೆಟ್ಟು ಹೋಗಿದೆ. ರಸ್ತೆ ತುಂಬೆಲ್ಲಾ ಗುಂಡಿ ಮಯವಾಗಿದೆ. ಇನ್ನು ನಟ ಅನಿರುದ್ಧ್ ಅವರು ವಿಡಿಯೋ ಮೂಲಕ ಈ ರಸ್ತೆಯ ದುಸ್ಥಿತಿಯನ್ನು ತೋರಿಸಿದ್ದಾರೆ. ಅಲ್ಲದೇ ಕೂಡಲೇ ಸಂಬಂಧಪಟ್ಟ ಇಲಾಖೆಯವರು ಇದನ್ನು ಸರಿಪಡಿಸಬೇಕೆಂದು ಮನವಿ ಮಾಡಿದ್ದಾರೆ.

## ಕಮಲ್ ಹಾಸನ್ ಬ್ಯಾನರ್‌ಗೆ ಬೆಂಕಿ ಹಚ್ಚಿ ಪ್ರತಿಭಟನೆ

**ಬೆಂಗಳೂರು:** ಕಮಲ್ ಹಾಸನ್ ಕನ್ನಡ ವಿವಾದಕ್ಕೆ ಸಂಬಂಧಿಸಿದಂತೆ ಇದೀಗ ಆಕ್ರೋಶದ ಕಟ್ಟೆಯೊಡೆದಿದೆ. ನಟ ಕ್ಷಮೆ ಕೇಳಲ್ಲ ಎಂದು ಹೇಳಿದ ಬೆನ್ನಲ್ಲೇ ಅವರ ಭಾವಚಿತ್ರದ ಬ್ಯಾನರ್‌ಗೆ ಬೆಂಕಿ ಹಚ್ಚಿ ಕನ್ನಡಾಭಿಮಾನಿ ಪ್ರತಿಭಟಿಸಿದ್ದಾರೆ.

ನಗರದ ಬಸವೇಶ್ವರನಗರ ಪೊಲೀಸ್ ಠಾಣಾ ವ್ಯಾಪ್ತಿಯ ಪವಿತ್ರ ಪ್ಯಾರಡೈಸ್ ಸಿಗ್ನಲ್ ಬಳಿ ಈ ಘಟನೆ ನಡೆದಿದ್ದು, ರಾತ್ರೋ ರಾತ್ರಿ ಓರ್ವ ಕನ್ನಡಾಭಿಮಾನಿ ಕಮಲ್ ಹಾಸನ್ ಹೇಳಿಕೆಗೆ ಧಿಕ್ಕಾರ ಕೂಗಿ ಆಕ್ರೋಶ ಹೊರಹಾಕಿದ್ದಾರೆ. ಜೊತೆಗೆ ಕಮಲ್ ಹಾಸನ್ ಅವರ ಭಾವಚಿತ್ರದ ಬ್ಯಾನರ್‌ಗೆ ಬೆಂಕಿ ಹಚ್ಚಿ ಕಿಡಿಕಾರಿದ್ದಾರೆ.

ಫೋಟೋಗೆ ಬೆಂಕಿ ಹಚ್ಚಿದ ಬೆನ್ನಲ್ಲೇ ಸ್ಥಳಕ್ಕೆ ಪೊಲೀಸರು ಆಗಮಿಸಿದ್ದು, ನೀರು ಹಾಕಿ ಬ್ಯಾನರ್‌ನ್ನು ರಸ್ತೆಯಿಂದ ತೆಗೆದು ಹಾಕಿದ್ದಾರೆ.

**ಏನಿದು ವಿವಾದ?:** ಮೇ 27ರಂದು 'ಥಗ್ ಲೈಫ್' ಸಿನಿಮಾದ ಪ್ರಚಾರಕ್ಕಾಗಿ ಚಿತ್ರತಂಡ ಬೆಂಗಳೂರಿಗೆ



ಆಗಮಿಸಿತ್ತು. ಸಿನಿಮಾದ ನಾಯಕ ಕಾಲಿವುಡ್ ನಟ ಕಮಲ್ ಹಾಸನ್ ಅವರು ಕೂಡ ಆಗಮಿಸಿದ್ದರು. ಈ ವೇಳೆ ಕಮಲ್ ಹಾಸನ್ 'ತಮಿಳಿನಿಂದ ಕನ್ನಡ ಹುಟ್ಟಿದ್ದು' ಎಂದು ಹೇಳಿಕೆ ನೀಡುವ ಮೂಲಕ ವಿವಾದ ಹುಟ್ಟುಹಾಕಿದ್ದರು.

## ಟ್ರಂಪ್ ನೀತಿಯನ್ನು ಟೀಕಿಸಿದ ಡಿಓಜಿಇ ಮುಖ್ಯಸ್ಥ

# ಪಟ್ಟದಿಂದ ಇಳಿದ ಮಸ್ಕ್

**ವಾಷಿಂಗ್ಟನ್:** ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ತೆರಿಗೆ ನೀತಿಯನ್ನು ಟೀಕಿಸಿದ ಒಂದು ದಿನದ ಬಳಿಕ ವಿಶ್ವದ ಶ್ರೀಮಂತ ವ್ಯಕ್ತಿ ಎಲೋನ್ ಮಸ್ಕ್ ಅವರು ಅಮೆರಿಕದ ಸರ್ಕಾರಿ ದಕ್ಷತೆ ಇಲಾಖೆಯ ಮುಖ್ಯಸ್ಥ ಹುದ್ದೆಯಿಂದ ಕೆಳಗೆ ಇಳಿದಿದಿದ್ದಾರೆ.

ಎಲಾನ್ ಮಸ್ಕ್ ಅವರು ಎಕ್ಸ್‌ನಲ್ಲಿ ನನ್ನ ಡಿಓಜಿಇ ಅವಧಿ ಕೊನೆಯಾಗಿದೆ ಎಂದು ಘೋಷಿಸಿದರು. ಸರ್ಕಾರದ ವ್ಯರ್ಥ ಖರ್ಚುಗಳನ್ನು ಕಡಿಮೆ ಮಾಡಲು ಅವಕಾಶ ನೀಡಿದ್ದಕ್ಕಾಗಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರಿಗೆ ನಾನು ಧನ್ಯವಾದ ಹೇಳಲು ಬಯಸುತ್ತೇನೆ ಎಂದು ಪೋಸ್ಟ್ ಮಾಡಿದ್ದಾರೆ. ಅಮೆರಿಕ ಸರ್ಕಾರದ ಕಾರ್ಯದಕ್ಷತಾ ಇಲಾಖೆ ಮುಂದೆ ಬಲಗೊಳ್ಳಲಿದ್ದು, ಸರ್ಕಾರದ ಕಾರ್ಯವಿಧಾನ ಭಾಗವಾಗಿದೆ ಎಂದು ಹೇಳಿದ್ದಾರೆ.

ತೆರಿಗೆ ಬಿಲ್‌ಗೆ ಸಂಬಂಧಿಸಿದಂತೆ ಟ್ರಂಪ್ ಜೊತೆ ಉಂಟಾಗಿರುವ ಭಿನ್ನಭಿಪ್ರಾಯದಿಂದ ಡಿಓಜಿಇ ಹುದ್ದೆಯನ್ನು ಮಸ್ಕ್ ತೊರೆದಿದ್ದಾರೆ. ಆದಾಯಕ್ಕಿಂತ ಖರ್ಚು ಹೆಚ್ಚಾದರೆ ಡಿಓಜಿಇ ದಕ್ಷತೆಯ ಮೇಲೆ ಪರಿಣಾಮ ಬೀರಲಿದ್ದು



ಇಲಾಖೆಯನ್ನು ದುರ್ಬಲಗೊಳಿಸಲಿದೆ ಎಂದು ಮಸ್ಕ್ ಅಸಮಾಧಾನ ವ್ಯಕ್ತಪಡಿಸಿದ್ದರು ಎನ್ನಲಾಗಿದೆ.

ಡೊನಾಲ್ಡ್ ಟ್ರಂಪ್ ಅವರು ವೆಚ್ಚ ಕಡಿತಗೊಳಿಸಲು ಬಿಗ್ ಬ್ಯುಟಿಫುಲ್ ಮಸೂದೆಯನ್ನು ಪರಿಚಯಿಸಿದ್ದರು. ಈ ಮಸೂದೆಯ ಬಗ್ಗೆ ಅಮೆರಿಕದ ಆರ್ಥಿಕ ತಜ್ಞರು ವಿರೋಧ ವ್ಯಕ್ತಪಡಿಸಿದ ಬೆನ್ನಲ್ಲೇ ಮಸ್ಕ್, ಈ ಮಸೂದೆ ಬಜೆಟ್ ಕೊರತೆಯನ್ನು ಹೆಚ್ಚಿಸುತ್ತದೆ.

ಪುಟ 2

## ಇಬ್ಬರು ಕನ್ನಡಿಗರು ಸೇರಿ 26 ಮೃತ ಪ್ರವಾಸಿಗರ ನೆನಪಿಗೆ

# ಪಹಲ್ಗಾಮ್‌ನಲ್ಲಿ ಸ್ಮಾರಕ

**ಶ್ರೀನಗರ:** ಬೈಸರನ್ ಕಣಿವೆಯಲ್ಲಿ ನಡೆದ ದಾಳಿಯಲ್ಲಿ ಮೃತರಾದ 26 ಪ್ರವಾಸಿಗರ ನೆನಪಿಗಾಗಿ ಪಹಲ್ಗಾಮ್‌ನಲ್ಲಿ ಸ್ಮಾರಕ ನಿರ್ಮಿಸಲಾಗುವುದು ಎಂದು ಜಮ್ಮು ಮತ್ತು ಕಾಶ್ಮೀರದ ಸಿಎಂ ಒಮರ್ ಅಬ್ದುಲ್ಲಾ ಘೋಷಿಸಿದ್ದಾರೆ.



ಪಹಲ್ಗಾಮ್‌ನಲ್ಲಿ ನಡೆದ ಸಂಪುಟ ಸಭೆಯಲ್ಲಿ ಮಾತನಾಡಿದ ಅವರು, ಏ.22 ರಂದು ಪಹಲ್ಗಾಮ್‌ನ ಬೈಸರನ್ ಕಣಿವೆಯಲ್ಲಿ ನಡೆದ ಹಿಂದೂಗಳ ನರಮೇಧದಲ್ಲಿ 26 ನಾಗರಿಕರು ಬಲಿಯಾಗಿದ್ದರು. ಈ 26 ಜನರಿಗೆ ಶಾಶ್ವತ ಗೌರವ ಸಲ್ಲಿಸುವ ಸ್ಮರಣಾರ್ಥ ಸ್ಮಾರಕವನ್ನು ಸ್ಥಾಪಿಸುವುದಾಗಿ ತಿಳಿಸಿದ್ದಾರೆ. ಜೊತೆಗೆ ಸಂಪುಟ ಸಭೆ ಬಳಿಕ ನಿರ್ಮಾಣದ ಕೆಲಸ ಪ್ರಾರಂಭಿಸುವಂತೆ ಲೋಕೋಪಯೋಗಿ ಇಲಾಖೆಗೆ ಸೂಚಿಸಿದ್ದಾರೆ.

ಉಗ್ರರ ದಾಳಿಯಲ್ಲಿ ಪಾಣತೆತ್ತ 26 ಮುಗ್ಧ ಪ್ರವಾಸಿಗರಿಗೆ ಬೈಸರನ್‌ನಲ್ಲಿ ಸ್ಮಾರಕವನ್ನು ಸ್ಥಾಪಿಸಲಾಗುವುದು. ಇದು ಅವರಿಗೆ ನಾವು ಸಲ್ಲಿಸುತ್ತಿರುವ ಶಾಶ್ವತ ಗೌರವ ಎಂದು ಒತ್ತಿಹೇಳಿದರು. ಭವ್ಯವಾಗಿರುವ ಸ್ಮಾರಕವನ್ನು ನಿರ್ಮಿಸುವ ಮೂಲಕ ಕುಸಿದು ಹೋಗಿರುವ ಕಾಶ್ಮೀರದ ಪ್ರವಾಸೋದ್ಯಮವನ್ನು ಪುನಃ ಮೇಲೆತ್ತಲು ಪ್ರಯತ್ನಿಸುತ್ತೇವೆ ಎಂದರು.

ಸದ್ಯ ಈ ಸ್ಮಾರಕದ ನಿರ್ಮಾಣ ಕೆಲಸಕ್ಕೆ ತಾತ್ವಿಕ ಅನುಮೋದನೆ ನೀಡಲು ಲೋಕೋಪಯೋಗಿ ಇಲಾಖೆಗೆ ಅಧಿಕಾರ ನೀಡಲಾಗಿದೆ ಎಂದು ತಿಳಿಸಿದರು.

## ಅಬ್ದುಲ್ ರಹೀಂ ಹತ್ಯೆ



**ಮಂಗಳೂರು:** ಅಬ್ದುಲ್ ರಹೀಂ ಬರ್ಬರ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ 15 ಮಂದಿಯ ವಿರುದ್ದ ಬಂಟ್ವಾಳ ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಗಾಯಗೊಂಡ ಕಲಂದರ್ ಶಫಿ ಮಾಹಿತಿ ಅನ್ವಯ ನಿಸಾರ್ ಎಂಬವರ ದೂರಿನಡಿ ರಹೀಂ ಪರಿಚಯಸ್ಥರೇ ಆಗಿರುವ ದೀಪಕ್, ಸುಮಿತ್ ಸೇರಿ 15 ಜನರ ವಿರುದ್ದ ಬಿಎನ್‌ಎಸ್ 103, 109, 118(1), 118(2), 190, 191(1), 191(2), 191(3) ಅಡಿ ಎಫ್‌ಐಆರ್ ದಾಖಲಾಗಿದೆ. ಹಲ್ಲೆಗೈದವರ ಪೈಕಿ ಇಬ್ಬರು ಪರಿಚಯಸ್ಥರು ಎಂದು ಹಲ್ಲೆಗೊಳಗಾಗಿ ಅಂಬುಲೆನ್ಸ್‌ನಲ್ಲಿ ಆಸ್ಪತ್ರೆಗೆ ಸಾಗಿಸುತ್ತಿದ್ದ ವೇಳೆ ಕಲಂದರ್ ಶಾಫಿ ಮಾಹಿತಿ ನೀಡಿದ್ದರು.

» **ಇಬ್ಬರು ಪರಿಚಯಸ್ಥರು ಸೇರಿ 15 ಮಂದಿ ವಿರುದ್ಧ ಎಫ್‌ಐಆರ್**

**ದೂರಿನಲ್ಲಿ ಏನಿದೆ?:** ಅಬ್ದುಲ್ ರಹೀಂ ಮತ್ತು ಕಲಂದರ್ ಶಾಫಿ ಅವರು ಹೊಳೆ ಬದಿಯಿಂದ ಪಿಕ್ ಅಪ್ ವಾಹನದಲ್ಲಿ ಮರಳು ಲೋಡ್ ಮಾಡಿ ಕುರಿಯಾಳ ಗ್ರಾಮದ ಈರಾ ಕೋಡಿಯ ರಾಜೀವಿ ಎಂಬವರ ಮನೆ ಬಳಿ ಇಳಿಸುತ್ತಿದ್ದರು. ಈ ವೇಳೆ ಪರಿಚಯಸ್ಥರಾದ ದೀಪಕ್, ಸುಮಿತ್ ಮತ್ತು 15 ಮಂದಿ ಏಕಾಏಕಿ ದಾಳಿ ನಡೆಸಿದ್ದಾರೆ. ಚಾಲಕನ ಸೀಟಿನಲ್ಲಿದ್ದ ಅಬ್ದುಲ್ ರಹಿಮಾನ್ ಅವರನ್ನು ಹೊರಗೆ ಎಳೆದು ತಲವಾರು, ಚೂರಿ, ರಾಡ್ ಗಳೊಂದಿಗೆ ಯದ್ವಾ- ತದ್ವಾ ದಾಳಿ ನಡೆಸಿದ್ದಾರೆ. ಅಲ್ಲಿದ್ದವರು ಕೂಗಾಡಿದ್ದರಿಂದ ಹಲ್ಲೆ ಮಾಡಿದ ಆರೋಪಿಗಳು ಮಾರಕಾಸ್ತ್ರಗಳೊಂದಿಗೆ ಪರಾರಿಯಾಗಿದ್ದಾರೆ.

## ಪರಿಶಿಷ್ಟ ಜಾತಿಯ ಸಮಗ್ರ ಸಮೀಕ್ಷೆ ಕಾರ್ಯ ಪರಿಶೀಲನೆ



**ಬೆಂಗಳೂರು:** ಪರಿಶಿಷ್ಟ ಜಾತಿಯ ಸಮಗ್ರ ಸಮೀಕ್ಷೆ ಕಾರ್ಯವನ್ನು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವ ಕೆ.ಹೆಚ್.ಮುನಿಯಪ್ಪ ಅವರು ಪರಿಶೀಲಿಸಿದರು. ಬೆಂಗಳೂರು ನಗರದ ಗೆದ್ದಲಹಳ್ಳಿ, ಸಂಜಯನಗರ ಸೇರಿದಂತೆ ಇತರೆ ಸ್ಥಳಗಳಲ್ಲಿ ಮನೆಗಳಿಗೆ ಭೇಟಿ ನೀಡಿ, ಪರಿಶಿಷ್ಟ ಜಾತಿಯ ಸಮಗ್ರ ಸಮೀಕ್ಷೆಯ ಕಾರ್ಯವಿಧಾನಗಳನ್ನು ಪರಿಶೀಲನೆ ನಡೆಸಿದರು. ಈ ವೇಳೆ ನಾಗರಿಕರೊಂದಿಗೆ ಮಾತನಾಡಿದ ಸಚಿವರು, ಪರಿಶಿಷ್ಟ ಜಾತಿಯ ಸಮಗ್ರ ಸಮೀಕ್ಷೆಯ ಸಂದರ್ಭದಲ್ಲಿ, ತಮ್ಮ ಮೂಲ ಜಾತಿಯನ್ನು ನೋಂದಣಿ ಮಾಡಲು ತಿಳಿಸಿದರು.

## ಲೋಕಸಭಾ ಚುನಾವಣೆ ವೇಳೆ ಹಣ ದುರ್ಬಳಕೆ ಹರಿಹರ ನಗರಸಭೆ ವ್ಯವಸ್ಥಾಪಕಿ ಸಸ್ಪೆಂಡ್

**ದಾವಣಗೆರೆ:** ಕಳೆದ ಲೋಕಸಭಾ ಚುನಾವಣೆ ವೇಳೆ ಹಣ ದುರುಪಯೋಗ ಮಾಡಿಕೊಂಡ ಆರೋಪದ ಮೇಲೆ ಹರಿಹರ ನಗರಸಭೆ ವ್ಯವಸ್ಥಾಪಕಿಯನ್ನು ಅಮಾನತುಗೊಳಿಸಲಾಗಿದೆ.



ಹೆಚ್.ನಿರಂಜನಿ ಅಮಾನತಾದ ಅಧಿಕಾರಿಯಾಗಿದ್ದಾರೆ. ಇವರ ಮೇಲೆ ಕಳೆದ ಲೋಕಸಭಾ ಚುನಾವಣೆಯಲ್ಲಿ ಹಣ ದುರುಪಯೋಗ ಮಾಡಿರುವ ಆರೋಪವಿದೆ. ಅಲ್ಲದೇ ಕರ್ತವ್ಯಕ್ಕೆ ಸರಿಯಾಗಿ ಹಾಜರಾಗದೇ ಇರುವುದು, ಸಾರ್ವಜನಿಕರ ಕೆಲಸ ಮಾಡದಿರುವುದು ಹಾಗೂ ಇನ್ನಿತರೆ ಕರ್ತವ್ಯ ಲೋಪ ಹಿನ್ನೆಲೆ ಜಿಲ್ಲಾಧಿಕಾರಿ ಜಿ.ಎಂ ಗಂಗಾಧರಸ್ವಾಮಿಯವರು ಅಮಾನತು ಮಾಡಿ ಆದೇಶ ಹೊರಡಿಸಿದ್ದಾರೆ. ಹೊನ್ನಾಳಿಯ ಪುರಸಭೆಯ ಪ್ರಭಾರಿ ಮುಖ್ಯಾಧಿಕಾರಿಯಾಗಿದ್ದ ಅವಧಿಯಲ್ಲಿ ನಡೆದ ಲೋಕಸಭಾ ಚುನಾವಣೆಯ ವೇಳೆ ಹಣ ದುರುಪಯೋಗವಾಗಿದೆ. ಹರಿಹರ ನಗರಸಭೆಯ ವ್ಯವಸ್ಥಾಪಕರಾಗಿ ವರ್ಗಾವಣೆಗೊಂಡ ಅವಧಿಯಲ್ಲಿಯೂ ಪ್ರಭಾರಿ ಕಂದಾಯ ಅಧಿಕಾರಿಯಾಗಿ ಬಿ ಖಾತಾ ವಿತರಣೆಯಲ್ಲಿ, ದಾಖಲೆ ಕೊಠಡಿ ನಿರ್ವಹಣೆಯಲ್ಲಿನ ಕರ್ತವ್ಯ ಲೋಪದ ಮೇಲೆ ಅಮಾನತುಗೊಳಿಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿಗಳು ತಮ್ಮ ಆದೇಶದಲ್ಲಿ ತಿಳಿಸಿದ್ದಾರೆ.

## ತನಿಖಾಧಿಕಾರಿ ಬದಲಾವಣೆಗೆ ನ್ಯಾಯಾಲಯಕ್ಕೆ ಅರ್ಜಿ

**ಮೈಸೂರು:** ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ಹಗರಣದ ತನಿಖಾಧಿಕಾರಿ ಬದಲಾಯಿಸುವಂತೆ ನಾನು ಅರ್ಜಿ ಹಾಕುತ್ತೇನೆ ಎಂದು ದೂರುದಾರ ಸ್ನೇಹಮಯಿ ಕೃಷ್ಣ ಹೇಳಿದ್ದಾರೆ. ಮೂಡಾ ಹಗರಣ ಪ್ರಕರಣದಲ್ಲಿ ಜನ ಪ್ರತಿನಿಧಿ ನ್ಯಾಯಾಲಯದ ಆದೇಶದಂತೆ ಇಂದು ಮೈಸೂರು ಲೋಕಾಯುಕ್ತರು ನ್ಯಾಯಾಲಯಕ್ಕೆ ಅಂತಿಮ ವರದಿ ಸಲ್ಲಿಸಬೇಕಿದೆ. ಈ ವರದಿಯ ಅಂಶಗಳು ಖುದ್ದು ಸಿಎಂ ಸಿದ್ದರಾಮಯ್ಯ ಅವರ ಮೇಲೆಯೇ ಪ್ರಭಾವ ಬೀರುವ ಸಾಧ್ಯತೆ ಇದೆ. ಈ ಬಗ್ಗೆ ದೂರದಾರ ಸ್ನೇಹಮಯಿ ಕೃಷ್ಣ ಈ ಬಗ್ಗೆ ಪ್ರತಿಕ್ರಿಯಿಸಿ ಲೋಕಾಯುಕ್ತ ಇಂದು ಕೂಡ ಅಂತಿಮ ವರದಿ ಸಲ್ಲಿಸುವುದು ಅನುಮಾನ ಇದೆ. ಅವರು ಮತ್ತೆ ಸಮಯವನ್ನು ಕೇಳುತ್ತಾರೆ. ನನಗೆ ಲೋಕಾಯುಕ್ತ ಎಸ್‌ಪಿ ಬಗ್ಗೆ ಬಹಳಷ್ಟು ಅನುಮಾನವಿದ್ದು ತನಿಖಾಧಿಕಾರಿ ಬದಲಾಯಿಸುವಂತೆ ನ್ಯಾಯಾಲಯಕ್ಕೆ ಅರ್ಜಿ ಹಾಕುತ್ತೇನೆ ಎಂದು ಹೇಳಿದ್ದಾರೆ.

## ಕರ್ನಾಟಕದಲ್ಲಿ 15,441 ಕೋಟಿ ರೂ. ಬಂಡವಾಳ ಹೂಡಿಕೆಗೆ ಅನುಮೋದನೆ

# 5,277 ಉದ್ಯೋಗ ಸೃಷ್ಟಿ: ಸಿಎಂ ಭರವಸೆ

**ಬೆಂಗಳೂರು :** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ನಡೆದ ರಾಜ್ಯ ಉನ್ನತ ಮಟ್ಟದ ಸಮಿತಿ ಸಭೆಯಲ್ಲಿ 15,441.17 ಕೋಟಿ ರೂ.ಗಳ ಬಂಡವಾಳ ಹೂಡಿಕೆಯ 6 ಯೋಜನೆಗಳಿಗೆ ಅನುಮೋದನೆ ನೀಡಲಾಗಿದೆ. ಈ ಯೋಜನೆಗಳಿಂದಾಗಿ ರಾಜ್ಯದಲ್ಲಿ 5,277 ಜನರಿಗೆ ಉದ್ಯೋಗಾವಕಾಶಗಳು ಸೃಷ್ಟಿಯಾಗಲಿದ್ದು, ಕೈಗಾರಿಕಾ ಅಭಿವೃದ್ಧಿಗೆ ಉತ್ತೇಜನ ದೊರೆಯಲಿದೆ. ಹೆಚ್ಚುವರಿಯಾಗಿ ಕೆಲವು ಯೋಜನೆಗಳ ಅನುಷ್ಠಾನಕ್ಕೆ ಸಮಯ ವಿಸ್ತರಣೆ ಮತ್ತು ಭೂಮಿ ಸ್ವಾಧೀನಕ್ಕೆ ಅನುಮತಿ ನೀಡಲಾಗಿದೆ.




**ಯಾವುದರಿಂದ ಎಷ್ಟು ಉದ್ಯೋಗ:** ಶ್ರೀ ಸಿಮೆಂಟ್ ಲಿಮಿಟೆಡ್ ಸಂಸ್ಥೆಯ 2406 ಕೋಟಿ ರೂ.ಗಳ ಹೊಸ ಬಂಡವಾಳ ಹೂಡಿಕೆಯ ಯೋಜನೆಯಿಂದ 300 ಉದ್ಯೋಗ, ದಾಲ್ಮಿಯಾ ಸಿಮೆಂಟ್ (ಭಾರತ್) ಲಿ.ನ 3,000 ಕೋಟಿ ರೂ.ಹೂಡಿಕೆಯಿಂದ 570 ಉದ್ಯೋಗ, ದಾಲ್ಮಿಯಾ(ಭಾರತ್) ಲಿ. ಸಂಸ್ಥೆಯ 3020 ಕೋಟಿ ರೂ. ಹೂಡಿಕೆಯಿಂದ 570 ಉದ್ಯೋಗ ಸೃಷ್ಟಿಯಾಗಲಿವೆ. ಇನ್ನು ಎಂವೀ ಎನರ್ಜಿ ಪ್ರೈ.ಲಿ ಸಂಸ್ಥೆಯ 5495 ಕೋಟಿ ರೂ. ಹೂಡಿಕೆಯಿಂದ 2508 ಉದ್ಯೋಗ ಸೃಷ್ಟಿಯಾಗಲಿವೆ. ಒಟ್ಟಾರೆ 13,921 ಕೋಟಿ ಮೊತ್ತದ ಹೊಸ ಬಂಡವಾಳ ಹೂಡಿಕೆಯ ಪ್ರಸ್ತಾವನೆಗಳಿಗೆ ಒಪ್ಪಿಗೆ ನೀಡಲಾಗಿದೆ. ಇವುಗಳಿಂದ ರಾಜ್ಯದಲ್ಲಿ ಒಟ್ಟಾರೆ 3,948 ಹೊಸ ಉದ್ಯೋಗ ಅವಕಾಶಗಳು ಸೃಷ್ಟಿಯಾಗಲಿವೆ.

**ಹೆಚ್ಚುವರಿ ಬಂಡವಾಳ ಹೂಡಿಕೆ ಪ್ರಸ್ತಾವನೆಗಳು:** ಕಲರ್‌ಟೋನ್ ಟೆಕ್ಸ್‌ಟೈಲ್ಸ್ ಪ್ರೈ. ಲಿ.ನ 190.17 ಕೋಟಿ ರೂ., ಬಾಷ್ ಅಟೋಮೋಟಿವ್ ಎಲೆಕ್ಟ್ರಾನಿಕ್ಸ್ ಇಂಡಿಯಾ ಪ್ರೈ. ಲಿ.ನ 1,330 ಕೋಟಿ ರೂ. ಸೇರಿದಂತೆ ಒಟ್ಟು 1,520.17 ಕೋಟಿ ರೂ. ಮೊತ್ತದ ಹೆಚ್ಚುವರಿ ಬಂಡವಾಳ ಹೂಡಿಕೆ ಪ್ರಸ್ತಾವನೆಗಳಿಗೂ ಸಭೆಯಲ್ಲಿ ಅನುಮೋದನೆ ನೀಡಲಾಗಿದೆ. ಇದರಿಂದ 1,329 ಜನರಿಗೆ ಉದ್ಯೋಗ ಅವಕಾಶಗಳು ದೊರೆಯಲಿವೆ.

- **ತಿದ್ದುಪಡಿ ಯೋಜನೆಗಳ ಪ್ರಸ್ತಾವನೆಗಳನ್ನು ಕಾರ್ಯಗತಗೊಳಿಸಲು ಸಮಯ ವಿಸ್ತರಣೆಗೆ ಮತ್ತು ಹೆಚ್ಚುವರಿ ಭೂಮಿ ಸ್ವಾಧೀನಪಡಿಸಿಕೊಳ್ಳುವುದಕ್ಕೆ ಸಮಿತಿಯು ಒಪ್ಪಿಗೆ ನೀಡಿದೆ.**
- **ಜೆಎಸ್‌ಡಬ್ಲ್ಯು ನಿಯೊ ಎನರ್ಜಿ ಲಿಮಿಟೆಡ್ 300 ಮೆಗಾವಾಟ್ ಸಾಮರ್ಥ್ಯದ ಪಂಪ್ಡ್ ಸ್ಟೋರೇಜ್ ಯೋಜನೆ.**
- **ಎಕ್ಸೈಡ್ ಇಂಡಸ್ಟ್ರೀಸ್ ಲಿಮಿಟೆಡ್ -ಅತ್ಯಾಧುನಿಕ ಡಿಫೆನ್ಸ್ ಮತ್ತು ಏರೋಸ್ಪೇಸ್ ಪಾರ್ಕ್- ಹಂತ-2 ರಲ್ಲಿ 20 ಎಕರೆ ಹೆಚ್ಚುವರಿ ಭೂಮಿ ಹಂಚಿಕೆ.**
- **ಎಸ್‌ಎಲ್‌ಆರ್ ಮೆಟಾಲಿಕ್ಸ್ ಲಿಮಿಟೆಡ್ 2027-28 ರವರೆಗೆ 2 ಹಂತಗಳಲ್ಲಿ ಯೋಜನೆಯ ಅನುಷ್ಠಾನ ರಸಶ್ರೀ ಟೆಕ್ ಪಾರ್ಕ್ ಎಲ್‌ಎಲ್‌ಪಿ ಇಂಟಿಗ್ರೇಟೆಡ್ ಟೌನ್ ಶಿಪ್ ಸ್ಥಾಪನೆ.**
- **ವನ್ಯಾ ಸ್ಟೀಲ್ಸ್ ಪ್ರೈವೇಟ್ ಲಿಮಿಟೆಡ್ ಮೃದು ಕಬ್ಬಿಣ, ರೋಲಿಂಗ್ ಮಿಲ್, 34 ಮೆಗಾವಾಟ್ ಸಾಮರ್ಥ್ಯದ ವಿದ್ಯುತ್ ಉತ್ಪಾದನಾ ಸ್ಥಾವರ ಸ್ಥಾಪನೆ.**
- **ಇಂಡಿಯನ್ ಕೇನ್ ಪವರ್ ಲಿಮಿಟೆಡ್- ಸಕ್ಕರೆ ಕಾರ್ಖಾನೆ ಹಾಗೂ 70 ಮೆಗಾವಾಟ್ ಸಾಮರ್ಥ್ಯದ ವಿದ್ಯುತ್ ಉತ್ಪಾದನಾ ಸ್ಥಾವರ ಸ್ಥಾಪನೆ.**
- **ಖಯಾತಿ ಪೈಪ್ಸ್ ಆ ಯಂಡ್ ಪವರ್ ಪ್ರೈವೇಟ್ ಲಿಮಿಟೆಡ್‌ನ ಸಮಗ್ರ ಉಕ್ಕು ಸ್ಥಾವರ ಜಿಎಂ ಶುಗರ್ ಆ ಯಂಡ್ ಎನರ್ಜಿ ಲಿಮಿಟೆಡ್‌ನ ಉತ್ಪಾದನಾ ಸಾಮರ್ಥ್ಯ ಹೆಚ್ಚಳ.**
- **ಅಲ್ಟ್ರಾಟೆಕ್ ಸಿಮೆಂಟ್ ಲಿಮಿಟೆಡ್‌ನ ಲೈಮ್ ಸ್ಟೋನ್ ಉತ್ಪಾದನಾ ಘಟಕ ಸ್ಥಾಪನೆ.**
- **ಯುಫ್ಲೆಕ್ಸ್ ಲಿಮಿಟೆಡ್‌ನ ಪಾಲಿಯೆಸ್ಟರ್ ಫಿಲ್ಮ್ ತಯಾರಿಕಾ ಘಟಕ ಸ್ಥಾಪನೆ.**

ಸಭೆಯಲ್ಲಿ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಕೈಗಾರಿಕಾ ಸಚಿವ ಎಂ. ಬಿ. ಪಾಟೀಲ, ಇಂಧನ ಸಚಿವ ಕೆ. ಜೆ. ಜಾರ್ಜ್, ಐಟಿಬಿಟಿ ಸಚಿವ ಪ್ರಿಯಾಂಕ್ ಖರ್ಗೆ, ಕೃಷಿ ಸಚಿವ ಎನ್. ಚಲುವರಾಯಸ್ವಾಮಿ, ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಮಾಲಿನ್ಯ ನಿಯಂತ್ರಣ ಮಂಡಳಿಯ ಅಧ್ಯಕ್ಷ ಪಿ.ಎಂ.ನರೇಂದ್ರ ಸ್ವಾಮಿ, ಮುಖ್ಯಮಂತ್ರಿಗಳ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಎಲ್. ಕೆ.ಅತೀಕ್, ಹಣಕಾಸು ಇಲಾಖೆ ಪ್ರಧಾನ ಕಾರ್ಯದರ್ಶಿ ರಿತೇಶ ಸಿಂಗ್, ಕೈಗಾರಿಕಾ ಇಲಾಖೆ ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ್ ಸೇರಿದಂತೆ ಇತರ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## ರಾಜ್ಯದಲ್ಲಿ ಕೊರೊನಾ ಕೇಸ್ ಹೆಚ್ಚಳ

# ಶಿಕ್ಷಣ ಸಚಿವರಿಂದ ಖಡಕ್ ಎಚ್ಚರಿಕೆ

**ಬೆಂಗಳೂರು:** ದೇಶಾದ್ಯಂತ ಕೊರೊನಾ ಸೋಂಕಿನ ಪ್ರಕರಣಗಳು ಗಣನೀಯವಾಗಿ ಏರಿಕೆಯಾಗುತ್ತಿದೆ. ಇದರಿಂದ ಜನರಲ್ಲಿ ಮತ್ತೆ ಆತಂಕ ಶುರುವಾಗಿದೆ. ಮೂರ್ನಾಲ್ಕು ವರ್ಷಗಳ ಹಿಂದೆ ಬಂದಿದ್ದ ಕೊರೊನಾ ಅಲೆ ಮತ್ತೆ ವಕ್ಕರಿಸುತ್ತಾ ಎಂದು ಜನರು ಭಯಗೊಂಡಿದ್ದಾರೆ. ಈ ಮಧ್ಯೆ ರಾಜ್ಯದಲ್ಲಿ ಕೊರೊನಾ ಪಾಸಿಟಿವ್ ಸಂಖ್ಯೆ ಹೆಚ್ಚಾಗುತ್ತಿದ್ದು, ಸರ್ಕಾರದಿಂದ ಸಭೆಗಳು ನಡೆಯುತ್ತಲೇ ಇದೆ. ಇದರ ಬೆನ್ನಲ್ಲೇ ಶಿಕ್ಷಣ ಸಚಿವ ಮಧುಬಂಗಾರಪ್ಪ ಜನರಿಗೆ ಎಚ್ಚರಿಕೆ ಸಂದೇಶ ಕೊಟ್ಟಿದ್ದಾರೆ.



ಜಿಲ್ಲಾ ಉಸ್ತುವಾರಿ ಸಚಿವ ಹಾಗೂ ಶಿಕ್ಷಣ ಸಚಿವ ಮಧು ಬಂಗಾರಪ್ಪ ರಾಜ್ಯದ ಜನರಿಗೆ ಎಚ್ಚರಿಕೆ ಸಂದೇಶ ನೀಡಿದ್ದಾರೆ. ದಿನೇ ದಿನೇ ಕೊರೊನಾ ಪಾಸಿಟಿವ್ ಸಂಖ್ಯೆಗಳು ಹೆಚ್ಚಾಗುತ್ತಿದೆ. ಹೀಗಾಗಿ ಜನರು ಎಚ್ಚರಿಕೆಯಿಂದಿರುವುದು ಮುಖ್ಯ. ಇದು ಎಲ್ಲರ ಜವಾಬ್ದಾರಿ, ಎಚ್ಚರಿಕೆಯಿಂದಿರಿ ಎಂದು ಸಲಹೆ ನೀಡಿದ್ದಾರೆ.

ಕೊರೊನಾ ರಾಜ್ಯದಲ್ಲಷ್ಟೇ ಅಲ್ಲ ದೇಶದಲ್ಲಿ ಹೆಚ್ಚಾಗುತ್ತಿದೆ. ಈ ಬಗ್ಗೆ ಯಾರೂ ಗಾಬರಿ ಪಡಬೇಕಾಗಿಲ್ಲ, ಆದರೆ ಜವಾಬ್ದಾರಿ ಮರೆಯಬಾರದು. ಎಚ್ಚರಿಕೆಯಿಂದಿರುವುದು ಎಲ್ಲರ ಜವಾಬ್ದಾರಿ. ಏಕೆಂದರೆ ನಾವೆಲ್ಲ ಅದರ ಪರಿಣಾಮವನ್ನು ಎರಡು ವರ್ಷ ಅನುಭವಿಸಿದ್ದೇವೆ. ಮೂರ್ನಾಲ್ಕು ವರ್ಷಗಳ ಹಿಂದೆ ಬಂದ ಕೊರೊನಾ ಮಹಾಮಾರಿ ಏನೆಲ್ಲಾ ಅವಾಂತರ ಸೃಷ್ಟಿಸಿತ್ತು ಎಂಬುದು ನಿಮಗೆಲ್ಲಾ ಗೊತ್ತೇ ಇದೆ. ಅನೇಕ ಸಾವು ನೋವುಗಳು ಸಂಭವಿಸಿದ್ದವು. ಅನೇಕರು ತಮ್ಮ ಪ್ರೀತಿಪಾತ್ರರನ್ನು ಕುಟುಂಬಸ್ಥರನ್ನು ಕಳೆದುಕೊಂಡರು. ಜೊತೆಗೆ ಲಾಕ್‌ಡೌನ್ ಆಗಿ ಎಷ್ಟೋ ಆರ್ಥಿಕ ವ್ಯವಸ್ಥೆ ಕುಸಿದಿತ್ತು. ಹೀಗಾಗಿ ಈ ಬಾರೀ ಕೂಡ ಎಲ್ಲರೂ ಎಚ್ಚರಿಕೆಯಿಂದಿರಬೇಕಿರುವುದು ಮುಖ್ಯ.

ಮೊನ್ನೆಯ ಒಂದು ಸಾವು ವಯಸ್ಸು ಮತ್ತು ಕೋವಿಡ್ ಕಾರಣಕ್ಕೆ ಸಂಭವಿಸಿದೆ ಎಂದು ಆರೋಗ್ಯ ಸಚಿವರು ಹೇಳಿದ್ದಾರೆ. ಹಾಗಾಗಿ ಎಲ್ಲರೂ ಜವಾಬ್ದಾರಿಯಿಂದ ಇರಬೇಕು. ಕೇಂದ್ರ ಮತ್ತು ರಾಜ್ಯ ಸರ್ಕಾರ ಯಾವ ಮಾರ್ಗ ಸೂಚನೆ ನೀಡುತ್ತದೆ ಅದನ್ನು ಪಾಲಿಸಬೇಕು. ನಾವು ಕೂಡ ಸರ್ಕಾರದ ಆದೇಶಗಳನ್ನು ಪಾಲಿಸುವ ಕೆಲಸ ಮಾಡುತ್ತೇವೆ, ನೀವು ಕೂಡ ನಿಮ್ಮೆ ಎಚ್ಚರಿಕೆಯಿಂದ ನೀವಿರಿ ಎಂದು ಹೇಳಿದ್ದಾರೆ.

**ಸರ್ಕಾರದ ಮಾರ್ಗಸೂಚಿಗಳನ್ನು ಪಾಲಿಸಿ ಎಂದು ಸೂಚನೆ!:** ಸದ್ಯ ಕೊರೊನಾ ಸಂಬಂಧ ಆರೋಗ್ಯ ಸಚಿವರು ಈ ಬಗ್ಗೆ ಮುಂದಿನ ದಿನಗಳಲ್ಲಿ ತಿಳಿಸಲಿದ್ದಾರೆ. ಈ ಬಗ್ಗೆ ಹೆಚ್ಚು ಚರ್ಚೆ ನಡೆಸಿದಷ್ಟು ಜನ ಗಾಬರಿಯಾಗುತ್ತಾರೆ. ಮಾರ್ಗಸೂಚಿಯನ್ನು ಪ್ರತಿಯೊಬ್ಬರು ಪಾಲಿಸಬೇಕು, ಕಳೆದ ಸಲ ಎರಡನೇ ಹಂತದ ಕೋವಿಡ್ ಗೆ ಸಂಬಂಧಿಸಿದ ಮಾರ್ಗಸೂಚಿಯನ್ನು ಪಾಲನೆ ಮಾಡದ ಕಾರಣ ಸಾಕಷ್ಟು ಸಾವು ನೋವುಗಳಾಗಿದೆ. ಹೀಗಾಗಿ ಮುನ್ನೆಚ್ಚರಿಕೆಯಿಂದ ನೀವೇ ಎಚ್ಚೆತ್ತುಕೊಳ್ಳಬೇಕು. ಎಲ್ಲರೂ ಮಾಸ್ಕ್, ಸಾಮಾಜಿಕ ಅಂತರ ಕಾಯ್ದುಕೊಂಡರೆ ನಿಮ್ಮ ಆರೋಗ್ಯಕ್ಕೆ ಒಳ್ಳೆಯದು ಎಂದು ಹೇಳಿದ್ದಾರೆ.

ಇತ್ತರಾಜಧಾನಿ ಬೆಂಗಳೂರಿನಲ್ಲಿ ಕೊರೊನಾ ಕೇಸ್ ಹೆಚ್ಚಳವಾಗುತ್ತಿರುವುದರಿಂದ ಮಕ್ಕಳ ಮೇಲೆ ಹೆಚ್ಚಿನ ನಿಗಾ ವಹಿಸಲಾಗಿದೆ. ಎಲ್ಲಾ ಶಾಲಾ ಕಾಲೇಜುಗಳಲ್ಲಿ ಪ್ರತ್ಯೇಕವಾಗಿ ಮಾರ್ಗಸೂಚಿ ಸಿದ್ಧಪಡಿಸಲಾಗಿದೆ. ಕೋವಿಡ್ ಪ್ರಕರಣಗಳನ್ನು ನಿಯಂತ್ರಣದಲ್ಲಿಡುವ ದೃಷ್ಟಿಯಿಂದ ಸರ್ಕಾರ ನಿರಂತರ ಸಭೆ ನಡೆಸುತ್ತಲೇ ಇದೆ. ಇನ್ನೂ ಅಧಿಕೃತ ಘೋಷಣೆಯಷ್ಟೇ ಬಾಕಿ ಇದೆ.

ಆರೋಗ್ಯ ಇಲಾಖೆಗೆ ಸಿಎಂ ಸಿದ್ದರಾಮಯ್ಯ ಸೂಚನೆ!

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಆರೋಗ್ಯ ಇಲಾಖೆಗೆ ಕೋವಿಡ್ ಸಂಬಂಧಿತ ಎಲ್ಲಾ ಸವಲತ್ತುಗಳನ್ನು ಸಜ್ಜುಗೊಳಿಸಲು ಆದೇಶಿಸಿದ್ದಾರೆ. ಐಸಿಯು (ತೀವ್ರ ನಿಗಾ ಘಟಕ), ಆಕ್ಸಿಜನ್, ವೆಂಟಿಲೇಟರ್, ಔಷಧಗಳು ಮತ್ತು ಇತರ ಅಗತ್ಯ ಸಲಕರಣೆಗಳನ್ನು ಸಿದ್ಧವಾಗಿಟ್ಟುಕೊಳ್ಳುವಂತೆ ಸಚಿವ ದಿನೇಶ್ ಗುಂಡೂರಾವ್ ಅವರಿಗೆ ಮತ್ತು ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಕೇಸ್‌ಗಳ ಸಂಖ್ಯೆ ಏರಿಕೆಯಾದರೆ ಯಾವುದೇ ಸಂದರ್ಭವನ್ನು ಎದುರಿಸಲು ರಾಜ್ಯ ಸರ್ಕಾರ ಸಂಪೂರ್ಣ ಸನ್ನದ್ಧವಾಗಿರಬೇಕು ಎಂದು ಸಿಎಂ ಸೂಚನೆ ನೀಡಿದ್ದಾರೆ.

## ಬೆಂಗಳೂರಿನಲ್ಲಿ 3 ಕೋಟಿ ರೂ. ಮೌಲ್ಯದ ಡ್ರಗ್ಸ್, ಗಾಂಜಾ ಜಪ್ತಿ



**ಬೆಂಗಳೂರು:** ಬೆಂಗಳೂರು ಪೊಲೀಸರು ಡ್ರಗ್ಸ್ ಮಾರಾಟ ಮತ್ತು ಸೇವನೆ ವಿರುದ್ಧ ಸಮರ ಸಾರಿದ್ದಾರೆ. ಡ್ರಗ್ಸ್ ಮುಕ್ತ ಬೆಂಗಳೂರು ಮಾಡಲು ಪಣ ತೊಟ್ಟಿದ್ದಾರೆ. ಈ ಹಿನ್ನೆಲೆಯಲ್ಲಿ ಬೆಂಗಳೂರಿನ ಅಮೃತಹಳ್ಳಿ ಭಾಗದಲ್ಲಿ ಎಂಡಿಎಂಎ ಕ್ರಿಸ್ಟಲ್, ಗಾಂಜಾ ಮಾರುತ್ತಿದ್ದ ನೈಜೀರಿಯಾ ಮೂಲದ ಪ್ರಜೆ ಪೆಪೆಯನ್ನು ಪೊಲೀಸರು ಬಂಧಿಸಿದ್ದಾರೆ. ಅಮೃತಹಳ್ಳಿ ಠಾಣೆ ಪೊಲೀಸರು ಆರೋಪಿ ಬಳಿ ಇದ್ದ 3 ಕೋಟಿ ಮೌಲ್ಯದ 3 ಕೆಜಿ ಡ್ರಗ್ಸ್ ಮತ್ತು ಗಾಂಜಾವನ್ನು ಜಪ್ತಿ ಮಾಡಿದ್ದಾರೆ.

ಬೆಂಗಳೂರಿನಲ್ಲಿ ಡ್ರಗ್ಸ್ ಕಂಟ್ರೋಲ್ ಮಾಡಿದ್ದೇವೆ. ಇನ್ನೂ ಅನೇಕ ಕಡೆ ಡ್ರಗ್ಸ್ ಸಿಗುತ್ತಿದೆ. ಈ ಬಗ್ಗೆ ಮಾಹಿತಿ ಇದೆ. ಡ್ರಗ್ಸ್ ಮಾರಾಟ ಸಂಬಂಧ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಆಯಾ ಇನ್ಸ್‌ಪೆಕ್ಟರ್‌ಗಳು ಜವಾಬ್ದಾರಿಯಾಗಿರುತ್ತಾರೆ. ಡ್ರಗ್ಸ್ ಮಾರಾಟ ಮತ್ತು ಸೇವನೆಯನ್ನು ಸಂಪೂರ್ಣವಾಗಿ ನಿರ್ನಾಮ ಮಾಡಲು ಕೆಲವು ಸೂಚನೆ ನೀಡಿದ್ದೇನೆ ಎಂದು ಗೃಹ ಸಚಿವ ಜಿ. ಪರಮೇಶ್ವರ್ ಹೇಳಿದ್ದರು.

**11 ಕೋಟಿ ರೂ. ಮೌಲ್ಯದ ಡ್ರಗ್ಸ್ ಸಾಗಿಸುತ್ತಿದ್ದ ಯುವಕ ಅರೆಸ್ಟ್:** 11.6ಕೋಟಿ ರೂ. ಮೌಲ್ಯದ ಡ್ರಗ್ಸ್ ಸಾಗಿಸುತ್ತಿದ್ದ ಆರೋಪದ ಮೇಲೆ ಬೆಂಗಳೂರು ಮೂಲದ 23 ವರ್ಷದ ಯುವಕನನ್ನು ಗೋವಾ ಪೊಲೀಸರು ಬಂಧಿಸಿದ್ದರು. ಯುವಕನ ಬಳಿ ಇದ್ದ 11 ಕೆಜಿಗಿಂತ ಹೆಚ್ಚು ಗಾಂಜಾವನ್ನು ಪೊಲೀಸರು ಜಪ್ತಿ ಮಾಡಿದ್ದರು ಎಂದು ವರದಿಯಾಗಿತ್ತು. ಯುವಕ ನೇಪಾಳದಿಂದ ಭಾರತಕ್ಕೆ ಮಾದಕ ದ್ರವ್ಯಗಳನ್ನು ಸಾಗಿಸುತ್ತಿದ್ದನು. ಈತನ ಚಲನವಲನದ ಮೇಲೆ ರಾಜ್ಯ ಗುಪ್ತಚರ ಇಲಾಖೆ ಕಳೆದೊಂದು ತಿಂಗಳಿನಿಂದ ನಿಗಾ ಇಟ್ಟಿತ್ತು. ಮಾದಕ ದ್ರವ್ಯ ತೆಗೆದುಕೊಂಡು ಗೋವಾಕ್ಕೆ ಬಂದಿದ್ದ ಯುವಕನ ಬಗ್ಗೆ ರಾಜ್ಯ ಗುಪ್ತರಚರ ಇಲಾಖೆ ನೀಡಿದ ಖಚಿತ ಮಾಹಿತಿ ಆಧರಿಸಿ, ಗುಯಿರಿಮ್‌ನಲ್ಲಿ ಯುವಕನನ್ನು ಬಂಧಿಸಿದ್ದೇವೆ ಎಂದು ಪೊಲೀಸರು ತಿಳಿಸಿದ್ದರು.

**ಶಾಲಾ ಕಾಲೇಜುಗಳನ್ನೇ ಗುರಿಯಾಗಿಸಿ ಚರಸ್ ಚಾಕೊಲೇಟ್ ದಂಧೆ, ಆರೋಪಿಗಳ ಬಂಧನ:** ಪ್ರಕರಣ ಸಂಬಂಧ ಪೊಲೀಸ್ ವರಿಷ್ಠಾಧಿಕಾರಿ ರಾಹುಲ್ ಗುಪ್ತಾ ಮಾತನಾಡಿ, ಮಾದಕ ದ್ರವ್ಯ ವಿರುದ್ಧ ನಡೆಸಿದ್ದ ಕಾರ್ಯಾಚರಣೆ ಇತಿಹಾಸದಲ್ಲೇ ಇದುವರೆಗಿನ ಅತಿದೊಡ್ಡ ಮಾದಕ ದ್ರವ್ಯ ಜಪ್ತಿ ಇದಾಗಿದೆ. ಯುವಕನ ವಿರುದ್ಧ ಎನ್‌ಡಿಪಿಎಸ್ ಕಾಯ್ದೆ ಅಡಿಯಲ್ಲಿ ಪ್ರಕರಣ ದಾಖಲಿಲಾಗಿದ್ದು, ಹೆಚ್ಚಿನ ತನಿಖೆ ನಡೆಯುತ್ತಿದೆ ಎಂದು ಹೇಳಿದ್ದರು.

ಪ್ರಕರಣ ಸಂಬಂಧ ಮುಖ್ಯಮಂತ್ರಿ ಪ್ರಮೋದ್ ಸಾವಂತ್ ಮಾತನಾಡಿ, ಗೋವಾ ಸರ್ಕಾರವು ಮಾದಕ ದ್ರವ್ಯ ಸರಬರಾಜು ಮತ್ತು ಸೇವಿಸುವರ ವಿರುದ್ಧ ನಿರಂತರವಾಗಿ ಕಾರ್ಯಾಚರಣೆ ನಡೆಸುತ್ತಿದೆ. ಮಾದಕ ದ್ರವ್ಯ ಕಳ್ಳಸಾಗಣಿಕೆದಾರರ ವಿರುದ್ಧ ಕ್ರಮ ಕೈಗೊಳ್ಳಲಾಗುತ್ತಿದೆ. ಮತ್ತು ಎನ್‌ಡಿಪಿಎಸ್ ಕಾಯ್ದೆಯಡಿ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಹೇಳಿದ್ದರು.

# ವಾಮಾಚಾರ ಮಾಡಿ ರಾಷ್ಟ್ರೀಕೃತ ಕೆನರಾ ಬ್ಯಾಂಕ್ ಕಳ್ಳತನ

**ವಿಜಯಪುರ:** ವಿಜಯಪುರ ಜಿಲ್ಲೆಯ ಬಸವನಬಾಗೇವಾಡಿ ತಾಲೂಕಿನ ಮನಗೂಳಿ ಪಟ್ಟಣದಲ್ಲಿರುವ ರಾಷ್ಟ್ರೀಕೃತ ಕೆನರಾ ಬ್ಯಾಂಕ್‌ನಲ್ಲಿ ಕಳ್ಳತನವಾಗಿದೆ. ಬ್ಯಾಂಕ್ ಬಾಗಲಿನ ಬೀಗ ಮುರಿದು, ಕಿಟಕಿಯ ಬಾರ್‌ಗಳನ್ನು ಕಟ್ ಮಾಡಿ ಒಳಗೆ ನುಗ್ಗಿದ ಕಳ್ಳರು ಮೊದಲು ವಾಮಾಚಾರ ಮಾಡಿದ್ದಾರೆ. ಬಳಿಕ, ಬ್ಯಾಂಕ್‌ನಲ್ಲಿದ್ದ ಹಣ ಮತ್ತು ಚಿನ್ನಾಭರಣ ದೋಚಿದ್ದಾರೆ. ಇಷ್ಟೇ ಅಲ್ಲದೇ, ಬ್ಯಾಂಕ್‌ನಲ್ಲಿ ಸಿಸಿ ಕ್ಯಾಮೆರಾಗಳ ಹಾರ್ಡ್ ಡ್ರೈವ್ ಕೂಡ ಕದ್ದು ಪರಾರಿಯಾಗಿದ್ದಾರೆ. ಕಳ್ಳರ ಈ ಚಾಲಾಕಿತನ ಪೊಲೀಸರ ನಿದ್ದೆಗೆಡಸಿದೆ.



ಸ್ಥಳಕ್ಕೆ ಮನಗೂಳಿ ಠಾಣೆ ಪೊಲೀಸರು, ಬ್ಯಾಂಕ್‌ನ ವ್ಯವಸ್ಥಾಪಕ ನಿರ್ದೇಶಕ ಹಾಗೂ ಸಿಬ್ಬಂದಿ ಆಗಮಿಸಿ ಪರಿಶೀಲನೆ ನಡೆಸಿದ್ದಾರೆ. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ಸ್ಥಳಕ್ಕೆ ಭೇಟಿ ನೀಡಿ ಮಾಹಿತಿ ಪಡೆದುಕೊಂಡಿದ್ದಾರೆ. ಬೆರಳಚ್ಚು ತಂಡ ಪರಿಶೀಲನೆ ನಡೆಸಿದೆ. ಕೆನರಾ ಬ್ಯಾಂಕ್ ಸಿಬ್ಬಂದಿ ಲೆಕ್ಕಪತ್ರಗಳನ್ನು ತಿರುವಿ ಹಾಕುತ್ತಿದ್ದಾರೆ. ಕೆನರಾ ಬ್ಯಾಂಕ್‌ನ ಹಿರಿಯ ಅಧಿಕಾರಿಗಳು ಸಹ ಆಗಮಿಸಿ ಪರಿಶೀಲನೆಯಲ್ಲಿ ತೊಡಗಿದ್ದಾರೆ. ಆದರೆ, ಎಷ್ಟು ಹಣ ಮತ್ತು ಚಿನ್ನಾಭರಣ ಕಳ್ಳತನವಾಗಿದೆ ಎಂಬುವುದಕ್ಕೆ ನಿಖರವಾದ ಅಂಕಿ-ಸಂಖ್ಯೆಗಳು ಇನ್ನೂ ಬಹಿರಂಗವಾಗಿಲ್ಲ.

ಬ್ಯಾಂಕ್ ಒಳಗೆ ನುಗ್ಗಿರುವ ಕಳ್ಳರು ಸೈರನ್ ಮೊಳಗದಂತೆ ನೋಡಿಕೊಂಡಿದ್ದಾರೆ. ಸಿಸಿ ಕ್ಯಾಮೆರಾಗಳ ಹಾರ್ಡ್ ಡ್ರೈವ್ ತೆಗೆದುಕೊಂಡು ಹೋಗಿದ್ದಾರೆ. ಇನ್ನು, ಮನಗೂಳಿ ಪಟ್ಟಣ ಪಂಚಾಯತಿಯಿಂದ ಪ್ರಮುಖ ಭಾಗಗಳಲ್ಲಿ 35 ಸಿಸಿ ಕ್ಯಾಮೆರಾಮಗಳನ್ನು ಅಳವಡಿಕೆ ಮಾಡಲಾಗಿದ್ದು, ತನಿಖಾಧಿಕಾರಿಗಳು ಅವುಗಳನ್ನು ಪರಿಶೀಲಿಸುತ್ತಿದ್ದಾರೆ. ಇನ್ನು ರಾಷ್ಟ್ರೀಯ ಹೆದ್ದಾರಿ ಹಾಗೂ ಇತರೆ ರಸ್ತೆಗಳಲ್ಲಿನ ಸಿಸಿ ಕ್ಯಾಮೆರಾಗಳ ದೃಶ್ಯಾವಳಿಗಳ ಪರಿಶೀಲನಾ ಕಾರ್ಯ ಕೂಡ ನಡೆದಿದೆ. ಮೂಲಗಳ ಪ್ರಕಾರ ಅಪಾರ ಪ್ರಮಾಣದ ಚಿನ್ನಾಭರಣ ಹಾಗೂ ನಗದು ಕಳ್ಳತನವಾಗಿದೆ ಎನ್ನಲಾಗಿದೆ. ಆದರೆ, ಬ್ಯಾಂಕ್ ಅಧಿಕಾರಿಗಳು ಹಾಗೂ ಪೊಲೀಸರು ಯಾವುದೇ ಮಾಹಿತಿ ನೀಡದೆ ಇರುವುದು ಗ್ರಾಹಕರಲ್ಲಿ ಭಯ ಹುಟ್ಟಿಸಿದೆ.

ಇತ್ತೀಚೆಗೆ ಜಿಲ್ಲೆಯಲ್ಲಿ ಕಳ್ಳರ ಹಾವಳಿ ಹೆಚ್ಚಾದ ಹಿನ್ನೆಲೆಯಲ್ಲಿ ಮನೆಯಲ್ಲಿದ್ದ ಹಣ ಹಾಗೂ ಚಿನ್ನಾಭರಣಗಳನ್ನು ಬ್ಯಾಂಕ್‌ನಲ್ಲಿಟ್ಟಿದ್ದೇವೆ. ಈಗ ಕೆನರಾ ಬ್ಯಾಂಕ್ ಕಳ್ಳತನವಾಗಿ ಸಮಸ್ಯೆಯಾಗಿದೆ. ನಮ್ಮ ಚಿನ್ನಾಭರಣ ಹಾಗೂ ನಗದು ಹಣಕ್ಕೆ ಬ್ಯಾಂಕ್‌ನವರೇ ಹೊಣೆ. ನಮ್ಮ ಹಣ ಹಾಗೂ ಚಿನ್ನಾಭರಣಗಳನ್ನು ಬ್ಯಾಂಕ್‌ನವರೇ ನಮಗೆ ವಾಪಸ್ ನೀಡಬೇಕು. ಇಲ್ಲವಾದರೆ ಉಗ್ರ ಹೋರಾಟ ಮಾಡುತ್ತೇವೆಂದು ಗ್ರಾಹಕರು ಎಚ್ಚರಿಕೆ ನೀಡಿದ್ದಾರೆ.

ವಿಜಯಪುರದಲ್ಲಿ 10 ವರ್ಷಗಳ ಹಿಂದೆ ಸಿದ್ದೇಶ್ವರ ಸಹಕಾರಿ ಬ್ಯಾಂಕ್‌ನಲ್ಲಿ ಕಳ್ಳತನವಾಗಿತ್ತು. ಇದೀಗ ರಾಷ್ಟ್ರೀಕೃತ ಕೆನರಾ ಬ್ಯಾಂಕ್‌ನಲ್ಲಿ ಕಳ್ಳತನವಾಗಿದೆ.

## ರಹೀಂ ಹತ್ಯೆ। ಸಾಮೂಹಿಕ ರಾಜೀನಾಮೆ

# ಕಾಂಗ್ರೆಸ್ ವಿರುದ್ಧ ಮುಸ್ಲಿಮರ ಆಕ್ರೋಶ

**ಮಂಗಳೂರು:** ಅಬ್ದುಲ್ ರಹೀಂ ಹತ್ಯೆಯಾದ ಬೆನ್ನಲ್ಲೇ ಮುಸ್ಲಿಂ ಮುಖಂಡರು ಕಾಂಗ್ರೆಸ್ ನಾಯಕರ ವಿರುದ್ಧ ಆಕ್ರೋಶ ಹೊರಹಾಕಿದ್ದಾರೆ. ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ ಹಾಳಾಗುತ್ತಿದೆ. ಆದರೆ ಪೊಲೀಸರು ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ. ಹೀಗಾಗಿ ಕಾಂಗ್ರೆಸ್ ಪಕ್ಷದಲ್ಲಿರುವ ಸಮುದಾಯದ ನಾಯಕರು ಸಾಮೂಹಿಕ ರಾಜೀನಾಮೆ ನೀಡಬೇಕೆಂದು ಆಗ್ರಹಿಸಿದ್ದಾರೆ.



ನಮಗೆ ನಿಮ್ಮ ರಾಜಕೀಯ ಬೇಡ. ಜಿಲ್ಲೆಯಲ್ಲಿ ನಮ್ಮವರ ಕೊಲೆ ಎಷ್ಟಾಗಿದೆ? ಜಿಲ್ಲೆಗೆ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್ ಆಗಮಿಸಬೇಕು. ಅಮಾಯಕರ ಸಾವಿಗೆ ನ್ಯಾಯ ಕೊಡಿಬೇಕೆಂದು ಪಟ್ಟು ಹಿಡಿದಿದ್ದಾರೆ. ಮುಸ್ಲಿಂ ಮುಖಂಡರು ಕಾಂಗ್ರೆಸ್ ನಾಯಕರನ್ನು ತರಾಟೆಗೆ ತೆಗೆದುಕೊಳ್ಳುತ್ತಿರುವ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿದೆ.

ದುಷ್ಕರ್ಮಿಗಳಿಂದ ಕೊಲೆಯಾದ ಅಬ್ದುಲ್ ರಹೀಂ ಅವರ ಮೃತದೇಹವನ್ನು ಕೊಳತ್ತಮಜಲಿಗೆ ಇಂದು ಬೆಳಗ್ಗೆ ಸಾಗಿಸಲಾಯಿತು. ಕುತ್ತಾರ್ ಮದನಿ ನಗರ ಮಸೀದಿಯಲ್ಲಿ ರಹೀಂ ಅವರ ಮಯ್ಯತ್ ಸ್ನಾನ ಮಾಡಲಾಯಿತು. ನಂತರ ಮಯ್ಯತ್ ನಮಾಝ್ ಬಳಿಕ ಪೊಲೀಸ್ ಬಂದೋಬಸ್ತ್‌ನಲ್ಲಿ ಮೃತದೇಹವನ್ನು ಮೆರವಣಿಗೆಯ ಮೂಲಕ ಸಾಗಿಸಲಾಯಿತು.

# ಮೇ 30, 31 ರಂದು ಡಿಸಿ, ಸಿಇಓ ಸಭೆ ಕರೆದ ಸಿಎಂ

**ಬೆಂಗಳೂರು:** ರಾಜ್ಯಾದ್ಯಂತ ಭಾರಿ ಮಳೆ ಆಗುತ್ತಿರುವ ಹಿನ್ನೆಲೆಯಲ್ಲಿ ತಕ್ಷಣ ಪ್ರವಾಹ ಪೀಡಿತ ಪ್ರದೇಶಗಳಿಗೆ ತೆರಳಿ ಪರಿಹಾರ ಕಾರ್ಯದ ಉಸ್ತುವಾರಿ ನೋಡಿಕೊಳ್ಳುವಂತೆ ಜಿಲ್ಲಾ ಮಂತ್ರಿಗಳು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೂಚನೆ ನೀಡಿದ್ದಾರೆ.



ಮಳೆಯಿಂದ ಆಗಿರುವ ಅನಾಹುತದ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡ ಮುಖ್ಯಮಂತ್ರಿಗಳು ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ಆದೇಶಿಸಿದರು.

ಜೋರು ಮಳೆಯಿಂದ ಹಾನಿಗೆ ಒಳಗಾಗಿರುವ ಮತ್ತು ಪ್ರವಾಹ ಪೀಡಿತ ಪ್ರದೇಶಗಳಿಗೆ ತಕ್ಷಣ ಭೇಟಿ ನೀಡಿ ಪರಿಸ್ಥಿತಿಯನ್ನು ಸಮಗ್ರವಾಗಿ ಅವಲೋಕಿಸುವಂತೆ ಜಿಲ್ಲಾ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಿಗೆ ಸೂಚನೆ ನೀಡಿದ್ದಾರೆ.

ಹಾಗೂ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಈ ಬಗ್ಗೆ ಕಟ್ಟೆಚ್ಚರ ಮತ್ತು ತೀವ್ರ ನಿಗಾ ವಹಿಸಿ ತಕ್ಷಣ ತಕ್ಷಣ ಪರಿಹಾರ ಕಾರ್ಯಗಳನ್ನು ಸಮರೋಪಾದಿಯಲ್ಲಿ ನಿರ್ವಹಿಸಲು ಸೂಚನೆ ನೀಡಿದ್ದಾರೆ.

ಈ ಬಗ್ಗೆ ಸಮಗ್ರ ಅವಲೋಕನ ನಡೆಸಲು , ಮೇ 30, 31 ರಂದು ಡಿಸಿ, ಸಿಇಓ ಮತ್ತು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳ ಸಭೆಯನ್ನು ಕರೆಯುವಂತೆ ಮುಖ್ಯಮಂತ್ರಿಗಳು ಸರ್ಕಾರದ ಮುಖ್ಯ ಕಾರ್ಯದರ್ಶಿ ಅವರಿಗೆ ಸೂಚನೆ ನೀಡಿದ್ದಾರೆ.

**ಏನೇನು ಕ್ರಮ ತೆಗೆದುಕೊಳ್ಳಲಾಗಿದೆ?:** ರಾಜ್ಯದಲ್ಲಿ 170 ತಾಲ್ಲೂಕುಗಳನ್ನು ಪ್ರವಾಹ/ಭೂಕುಸಿತಕ್ಕೆ ಗುರಿಯಾಗುವ ತಾಲ್ಲೂಕುಗಳೆಂದು ಗುರುತಿಸಲಾಗಿದ್ದು, ಮುಂಜಾಗ್ರತೆಯಾಗಿ 2,296 ಕಾಳಜಿ/ಆಶ್ರಯ ತಾಣಗಳನ್ನು ಗುರುತಿಸಲಾಗಿದೆ.

ಬಿಬಿಎಂಪಿ ವ್ಯಾಪ್ತಿಯಲ್ಲಿ 201 ಸ್ಥಳಗಳನ್ನು ಪ್ರವಾಹ ಪೀಡಿತ ಸ್ಥಳಗನ್ನು ಗುರುತಿಸಲಾಗಿದೆ. ಮೇ 26, 2025 ರವರೆಗೆ ರಾಜ್ಯದಲ್ಲಿ 45 ಮನೆಗಳು ಸಂಪೂರ್ಣವಾಗಿ ಹಾನಿಯಾಗಿದೆ. 1,385 ಮನೆಗಳು ಭಾಗಶಃ ಹಾನಿಯಾಗಿದ್ದು, ಅದರಲ್ಲಿ ಶೇ.99% ರಷ್ಟು ಆರ್ಥಿಕ ಸಹಾಯ ಧನವನ್ನು ಪಾವತಿ ಮಾಡಲಾಗಿದೆ.

## ಪ್ರವಾಹಕ್ಕೆ ತಲುಪಿದ ಜಲಾಶಯಗಳು

**ಉಳಿದ ಡ್ಯಾಂಗಳಲ್ಲಿ ಹೇಗಿದೆ ನೀರಿನ ಮಟ್ಟ :** ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಮೇಲ್ವಿಚಾರಣಾ ಕೇಂದ್ರ, ಹಂಚಿಕೊಂಡ ಮಾಹಿತಿಯ ಪ್ರಕಾರ, ಲಿಂಗನಮಕ್ಕಿ ಜಲಾಶಯದ ಒಳಹರಿವು ಹೆಚ್ಚಾಗಿದ್ದು ಮಂಗಳವಾರವೇ 33.39 ಟಿಎಂಸಿಯಷ್ಟು ನೀರು ಸಂಗ್ರಹವಾಗಿತ್ತು. ಇದು ಒಟ್ಟು ಸಂಗ್ರಹ ಸಾಮರ್ಥ್ಯದ ಶೇ 22 ಆಗಿದೆ. ಕಳೆದ ವರ್ಷ ಇದೇ ಸಮಯದಲ್ಲಿ 15.63 ಟಿಎಂಸಿ ನೀರು ಸಂಗ್ರಹವಾಗಿತ್ತು.

ಭದ್ರಾ ಜಲಾಶಯವು ಗರಿಷ್ಠ ಸಾಮರ್ಥ್ಯದ ಶೇ 35, ಅಂದರೆ 71.54 ಟಿಎಂಸಿಗಿಂತಲೂ ಹೆಚ್ಚಿನ ಮಟ್ಟವನ್ನು ತಲುಪಿದೆ. ತುಂಗಭದ್ರಾ ಜಲಾಶಯದ ಗರಿಷ್ಠ ಸಾಮರ್ಥ್ಯ 105.79 ಟಿಎಂಸಿ ಆಗಿದ್ದು, ಶೇ 11 ರಷ್ಟು ಅಂದರೆ 11.24 ಟಿಎಂಸಿಯಷ್ಟು ನೀರು ಸಂಗ್ರಹವಾಗಿದೆ.

**ಶಹಾಪುರ ಪಟ್ಟಣದ ರಸ್ತೆಗಳು ಜಲಾವೃತ:** ಯಾದಗಿರಿ ಜಿಲ್ಲೆಯ ನಾಲ್ಕು ತಾಲೂಕುಗಳಲ್ಲಿ ಧಾರಾಕಾರವಾಗಿ ಸುರಿದ ಮಳೆಯಿಂದ ಶಹಾಪುರ ಪಟ್ಟಣ ಜಲಾವೃತವಾಗಿದೆ. ಮುಖ್ಯರಸ್ತೆಯಲ್ಲಿ ಮೊಣಕಾಲು ಮಟ್ಟ ನೀರು ಹರಿಯುತ್ತಿದೆ ಮತ್ತು ಆಗಸದಿಂದ ಜಿಟಿಜಿಟಿ ಮಳೆ ಬೇರೆ ಸುರಿಯುತ್ತಿದೆ. ಆದರೂ ಜನರ ಮತ್ತು ದ್ವಿಚಕ್ರವಾಹನಗಳ ಓಡಾಟ ನಿಂತಿಲ್ಲ, ಮಳೆಯಲ್ಲೂ ಓಡಾಡುತ್ತಿದ್ದಾರೆ. ಇದೊಂದು ವ್ಯಾಪಾರ ಕೇಂದ್ರವಾಗಿರುವುದರಿಂದ ಸುತ್ತಮುತ್ತಲಿನ ಹಳ್ಳಿಗಳ ಜನಕ್ಕೆ ಇಲ್ಲಿಗೆ ಬರೋದು ಅನಿವಾರ್ಯ.

## ಮೊದಲನೇ ಪುಟದಿಂದ...

### ಒಳಹರಿವಿನಲ್ಲಿ ಇಳಿಕೆ

ಇದೀಗ ಹೇಮಾವತಿ ಜಲಾಶಯಕ್ಕೆ 11,252 ಕ್ಯೂಸೆಕ್ ಒಳಹರಿವಿದ್ದು, ನದಿಯಿಂದ 3,575 ಕ್ಯೂಸೆಕ್ ಹೊರಹರಿವಿದೆ. ಈ ಹೇಮಾವತಿ ಜಲಾಶಯದ ಗರಿಷ್ಠ ಮಟ್ಟ 2,922.00 ಅಡಿಯಾಗಿದ್ದು, ಇಂದಿನ ನೀರಿನ ಮಟ್ಟ 2,905.10 ಅಡಿಗಳಷ್ಟಿದೆ.

### ಪಟ್ಟದಿಂದ ಇಳಿದ ಮಸ್ಕ್

ಮಸೂದೆ ದೊಡ್ಡದಾಗಿರಬಹುದು ಅಥವಾ ಸುಂದರವಾಗಿರಬಹುದು. ಆದರೆ ಅದು ಎರಡೂ ಆಗಬಹುದೇ ಎಂದು ನನಗೆ ತಿಳಿದಿಲ್ಲ. ನನ್ನ ವೈಯಕ್ತಿಕ ಅಭಿಪ್ರಾಯ ಎಂದಿದ್ದರು.

ಅಮೆರಿಕದ ಅಧ್ಯಕ್ಷೀಯ ಚುನಾವಣೆಯಲ್ಲಿ ಮಸ್ಕ್ ಅವರು ಡೊನಾಲ್ಡ್ ಟ್ರಂಪ್ ಪರ ಮತಯಾಚನೆ ಮಾಡಿದ್ದರು. ನಂತರ ಟ್ರಂಪ್ ಡಿಓಜಿಇ ಮುಖ್ಯಸ್ಥರನ್ನಾಗಿ ಮಸ್ಕ್ ಅವರನ್ನು ನೇಮಿಸಿದ್ದರು. ನೇಮಿಸಿದ ನಂತರ ಹಲವಾರು ಸರ್ಕಾರಿ ಇಲಾಖೆಗಳನ್ನು ಮುಚ್ಚಿದ್ದರು. ಉದ್ಯೋಗಿಗಳನ್ನು ಮನೆಗೆ ಕಳುಹಿಸಿದರು. ಅಮೆರಿಕದ ಹಲವು ದೇಶಗಳಿಗೆ ನೀಡುತ್ತಿದ್ದ ಯುಎಸ್‌ಎಐಡಿ ನಿಲ್ಲಿಸಿದ್ದರು. ಇದರಿಂದಾಗಿ ಸರ್ಕಾರಿ ಇಲಾಖೆಯ ಕೆಂಗಣ್ಣಿಗೆ ಮಸ್ಕ್ ಗುರಿಯಾಗಿದ್ದರು. ಟ್ರಂಪ್ ಆಡಳಿತದಲ್ಲಿ ಮಸ್ಕ್ ಅವರ ಪಾತ್ರ ಹೆಚ್ಚಾಗುತ್ತಿದ್ದಂತೆ ಅಮೆರಿಕದ ಹಲವು ಕಡೆ ಟೆಸ್ಲಾ ಶೋರೂಂ ಮೇಲೆ ದಾಳಿಗಳು ಆಗುತ್ತಿತ್ತು. ಇದರಿಂದಾಗಿ ಟೆಸ್ಲಾ ಕಂಪನಿಗೆ ಭಾರೀ ನಷ್ಟವಾಗಿತ್ತು.

### ಪತಿ

ಆದರೆ ಅವಿನಾಶ್, ಮನಸೋ ಇಚ್ಛೆ ಚಾಕುವಿನಿಂದ ಹಲ್ಲೆ ಮಾಡಿದ ಪರಿಣಾಮ ತೀವ್ರ ರಕ್ತಸ್ರಾವವಾಗಿ ಆಸ್ಪತ್ರೆಗೆ ಕರೆದೊಯ್ಯುವಷ್ಟರಲ್ಲಿ ಆಕೆ ಸಾವನ್ನಪ್ಪಿದ್ದಳು.

ಕೀರ್ತಿಗೆ ಚಾಕುವಿನಿಂದ ಇರಿದ ಅವಿನಾಶ್, ಬಳಿಕ ಮುಳ್ಳಯ್ಯನಗಿರಿ ಕಾಡಿನಲ್ಲಿ ನಾಪತ್ತೆಯಾಗಿದ್ದ. ಆತನ ಬಂಧನಕ್ಕಾಗಿ ಚಿಕ್ಕಮಗಳೂರು ಎಸ್ಪಿ ವಿಕ್ರಂ ಆಮ್ಟೆ ಗ್ರಾಮಾಂತರ ಪೊಲೀಸ್ ಇನ್ಸ್ಪೆಕ್ಟರ್ ಸಚಿನ್ ಹಾಗೂ ಸಬ್ ಇನ್ಸ್ಪೆಕ್ಟರ್, ರಾಜೇಶ್ ನೇತೃತ್ವದಲ್ಲಿ ವಿಶೇಷ ತಂಡ ರಚನೆ ಮಾಡಿದ್ದರು.

ಘಟನೆ ನಡೆದ ಏಳರಿಂದ ಎಂಟು ಗಂಟೆಗಳ ಕಾಲ ಮುಳ್ಳಯ್ಯನಗಿರಿ ಕಾಡಿನಲ್ಲಿ ಅವಿತು ಕೂತಿದ್ದ ಆರೋಪಿ ಅವಿನಾಶ್‌ನನ್ನ ಪೊಲೀಸರು ಬಂಧಿಸಿದ್ದಾರೆ. ಚಿಕ್ಕಮಗಳೂರು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ತ್ಯಾಜ್ಯದಿಂದ ವಿದ್ಯುತ್ ಘಟಕಕ್ಕೆ ಸಚಿವ ಕೆ.ಜೆ.ಜಾರ್ಜ್ ಭೇಟಿ

**ರಾಮನಗರ:** ಬಿಡದಿಯಲ್ಲಿರುವ ತ್ಯಾಜ್ಯದಿಂದ ವಿದ್ಯುತ್ ಉತ್ಪಾದನಾ ಘಟಕದಲ್ಲಿ ಸ್ವಚ್ಛತೆ ಜತೆಗೆ ನಿರ್ವಹಣೆಗೂ ಆದ್ಯತೆ ನೀಡುವ ದೃಷ್ಟಿಯಿಂದ ಬಿಬಿಎಂಪಿ ಹಾಗೂ ಇಂಧನ ಇಲಾಖೆಯ ಉನ್ನತ ಅಧಿಕಾರಿಗಳ ಸಭೆ ಕರೆಯಲಾಗುವುದು ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ಹೇಳಿದ್ದಾರೆ.

ಮಂಗಳವಾರ ಬಿಡದಿಯ ತ್ಯಾಜ್ಯದಿಂದ ವಿದ್ಯುತ್ ಉತ್ಪಾದನಾ ಘಟಕಕ್ಕೆ ಭೇಟಿ ನೀಡಿ ಪರಿಶೀಲಿಸಿದ ಸಚಿವರು, ಇಲ್ಲಿ ದುರ್ವಾಸನೆ ಬಂದು ಸುತ್ತಲಿನ ನಿವಾಸಿಗಳಿಗೆ ತೊಂದರೆಯಾಗದಂತೆ ನೋಡಿಕೊಳ್ಳಬೇಕು. ಅದಕ್ಕಾಗಿ ಪ್ರತಿ ನಿತ್ಯ ವಾಸನೆ ನಿಯಂತ್ರಣ ರಾಸಾಯನಿಕ ಬಳಸಬೇಕು, ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ತ್ಯಾಜ್ಯದಿಂದ ವಿದ್ಯುತ್ ಉತ್ಪಾದನಾ ಘಟಕಕ್ಕೆ ನಗರದ ವಿವಿಧ ಭಾಗಗಳಿಂದ ಲಾರಿಗಳಲ್ಲಿ ತ್ಯಾಜ್ಯ ತರಲಾಗುತ್ತದೆ. ಇಲ್ಲಿ ತ್ಯಾಜ್ಯ ಖಾಲಿ ಮಾಡಿ ವಾಪಸಾಗುವಾಗ ದುರ್ವಾಸನೆ ಬರುತ್ತದೆ ಎಂಬ ದೂರುಗಳಿವೆ. ಹೀಗಾಗಿ ತ್ಯಾಜ್ಯ ಖಾಲಿ ಮಾಡಿದ ಲಾರಿಗಳು ವಾಪಸ್ ಹೋಗುವ ಮುನ್ನ ಅವುಗಳನ್ನು ಸ್ವಚ್ಛಗೊಳಿಸಲು ಆವರಣದಲ್ಲಿಯೇ ಸ್ವಚ್ಛತಾ ವ್ಯವಸ್ಥೆ ಕಲ್ಪಿಸಬೇಕು, ಎಂದು ಸಚಿವರು ಅಧಿಕಾರಿಗಳಿಗೆ ಸೂಚಿಸಿದರು.

ವಿದ್ಯುತ್ ಉತ್ಪಾದನಾ ಘಟಕಕ್ಕೆ ಬರುವ ತ್ಯಾಜ್ಯದಲ್ಲಿ ಕೆಲವೊಂದು ಸಮಸ್ಯೆಗಳಿವೆ. ಅದೇ ರೀತಿ ಖಾಸಗಿಯವರು ಘಟಕ ನಿರ್ವಹಿಸುವ ವಿಚಾರದಲ್ಲೂ ಕೆಲವು ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಬೇಕಾಗುತ್ತದೆ. ಜತೆಗೆ ಸ್ವಚ್ಛತೆಯ ಬಗ್ಗೆಯೂ ಗಮನ ಹರಿಸಬೇಕಾಗಿದೆ. ಈ ಎಲ್ಲಾ ವಿಚಾರಗಳ ಬಗ್ಗೆ ಬಿಬಿಎಂಪಿ ಹಾಗೂ ಇಂಧನ ಇಲಾಖೆಯ ಉನ್ನತ



ಅಧಿಕಾರಿಗಳು, ಘಟಕ ನಿರ್ವಹಣೆ ಮಾಡುತ್ತಿರುವ ಖಾಸಗಿ ಕಂಪನಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಲಾಗುವುದು, ಎಂದು ಹೇಳಿದರು.

ಶೀಘ್ರ ಪರಿಹಾರ ವಿತರಣೆ : ವಿದ್ಯುತ್ ಉತ್ಪಾದನಾ ಘಟಕದಲ್ಲಿ ಇತ್ತೀಚೆಗೆ ದುರಂತ ಸಂಭವಿಸಿ 5 ಮಂದಿ ಮೃತಪಟ್ಟಿದ್ದು, ಅವರ ಕುಟುಂಬದವರಿಗೆ ಕೆಪಿಸಿಎಲ್ ವತಿಯಿಂದ ತಲಾ 5 ಲಕ್ಷ ರೂ. ಪರಿಹಾವನ್ನು ಶೀಘ್ರವೇ ವಿತರಿಸಲಾಗುವುದು. ಜತೆಗೆ ಘಟಕ ನಿರ್ವಹಿಸುವ ಕಂಪನಿಯಿಂದಲೂ ಸೂಕ್ತ ಪರಿಹಾರ ಒದಗಿಸಲಾಗುವುದು, ಎಂದು ಸಚಿವರು ತಿಳಿಸಿದರು.

ಪರಿಶಿ?ಟ ಜಾತಿಯ ಒಳ ಮೀಸಲಾತಿ ವರ್ಗೀಕರಣ: ಸಮೀಕ್ಷಾ ಕಾರ್ಯ ವಿಸ್ತರಣೆ

ರಾಮನಗರ, ನ್ಯಾಯಮೂರ್ತಿ ಡಾ. ಎಚ್.ಎನ್. ನಾಗಮೋಹನ್ ದಾಸ್ ಅವರ ಏಕ ಸದಸ್ಯ ವಿಚಾರಣಾ ಆಯೋಗದ ವತಿಯಿಂದ ಪರಿಶಿ?ಟ ಜಾತಿಗಳ ವಿವಿಧ ಅಂಶಗಳ ಬಗ್ಗೆ ದತ್ತಾಂಶಗಳನ್ನು ಸಂಗ್ರಹಿಸುವ ಸಲುವಾಗಿ ಸಮೀಕ್ಷಾ ಕಾರ್ಯವನ್ನು ನಡೆಸಲು ತೀರ್ಮಾನಿಸಿ, ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ಸಮನ್ವಯ ಸಮಿತಿಯನ್ನು ರಚಿಸಿ ಆದೇಶಿಸಲಾಗಿದೆ.

ಈ ಸಮೀಕ್ಷಾ ಕಾರ್ಯದ ಹಿನ್ನೆಲೆಯಲ್ಲಿ ಮನೆ ಮನೆ ಭೇಟಿ ನೀಡಿ, ಸಮೀಕ್ಷೆ ನಡೆಯುವ ಕಾರ್ಯವು ಮೇ 5 ರಿಂದ 17ರ ವರೆಗೆ ನಿಗಧಿಪಡಿಸಲಾಗಿತ್ತು, ಸಮೀಕ್ಷೆ ವೇಳೆ ಉದ್ಭವಿಸಿರುವ ಕೆಲವೊಂದು ಸಮಸ್ಯೆಗಳನ್ನು ಸರಿಪಡಿಸಲು ಸಮೀಕ್ಷಾ ಕಾರ್ಯದ ದಿನಾಂಕವನ್ನು ವಿಸ್ತರಿಸುವಂತೆ ಏಕ ಸದಸ್ಯ ವಿಚಾರಣಾ ಆಯೋಗ ತಿಳಿಸಿರುತ್ತದೆ.

ಈ ಹಿನ್ನೆಲೆಯಲ್ಲಿ ಮೇ 29ರ ವರೆಗೆ ಸಮೀಕ್ಷೆದಾರರು ಮನೆ–ಮನೆ ಭೇಟಿ ನೀಡಿ ಸಮೀಕ್ಷೆ ಕೈಗೊಳ್ಳುವರು. ಮೇ 30 ರಿಂದ ಜೂನ್ 1ರ ವರೆಗೆ ವಿಶೇ? ಶಿಬಿರಗಳನ್ನು (ಸಮೀಕ್ಷಾ ಬ್ಲಾಕ್ ವ್ಯಾಪ್ತಿಯಲ್ಲಿ) ಕೈಗೊಂಡು ಮನೆ ಮನೆ ಭೇಟಿಯ ಅವಧಿಯಲ್ಲಿ ಬಿಟ್ಟುಹೋದ ಪರಿಶಿ?ಟ ಜಾತಿ ಕುಟುಂಬಗಳ ಮಾಹಿತಿಯನ್ನು ಸಂಗ್ರಹಿಸುವರು ಹಾಗೂ ಮೇ 19 ರಿಂದ ಜೂನ್ 1ರ ವರೆಗೆ ಆನ್‌ಲೈನ್ ಮೂಲಕ ಸ್ವಯಂ ಘೋ?ಣೆಯನ್ನು ಸಲ್ಲಿಸಬೇಕು ಎಂದು ರಾಮನಗರ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಂವಿಧಾನ ಜಾಗೃತಿ ಸಮಾವೇಶದಲ್ಲಿ ಭಾಗವಹಿಸಲು ಮನವಿ

**ಮಂಡ್ಯ:** ಆದಿಜಾಂಬವ ಮಾದಿಗ ಮತ್ತು ಪೌರಕಾರ್ಮಿಕ ಸಂಘಟನೆಗಳ ಒಕ್ಕೂಟದ?ಕರ್ನಾಟಕದ ವತಿಯಿಂದ ಮೇ 31 ರಂದು ಬೆಳಿಗ್ಗೆ 10 ಗಂಟೆಗೆ ಬೆಂಗಳೂರಿನ ಡಾ.ಬಾಬು ಜಗಜೀವನ್ರಾಮ್ ಭವನದಲ್ಲಿ ಸಂವಿಧಾನ ಜಾಗೃತಿ ಸಮಾವೇಶ ಹಮ್ಮಿಕೊಂಡಿದ್ದು, ಇದರ ಭಾಗವಾಗಿ ಜಿಲ್ಲಾಧಿಕಾರಿ ಕಚೇರಿ ಎದುರಿನ ಉದ್ಯಾನವನದಲ್ಲಿ ಕಾರ್ಯಕ್ರಮದ ಪೋಸ್ಟರ್ ಬಿಡುಗಡೆ ಮಾಡಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಒಕ್ಕೂಟದ ರಾಜ್ಯಕಾರ್ಯಾಧ್ಯಕ್ಷ ಜಂಬೂದ್ವೀಪ ಸಿದ್ದರಾಜು, ಮಾದಿಗರ ಸಮುದಾಯದವರು ರಾಜ್ಯದ ಎಲ್ಲ ಕಡೆಯಿಂದಲೂ ಬರುತ್ತಿದ್ದು, ನಮ್ಮ ಮಂಡ್ಯ ಜಿಲ್ಲೆಯಲ್ಲಿಯೂ ಹೆಚ್ಚಿನ ಸಂಖ್ಯೆಯಲ್ಲಿ ನಮ್ಮ ಸಮುದಾಯದವರು ಭಾಗವಹಿಸುವ ಮೂಲಕ ಸರ್ಕಾರಕ್ಕೆ ನಮ್ಮ ಬೇಡಿಕೆಗಳಿಗಾಗಿ ಒತ್ತಾಯಿಸಬೇಕು ಎಂದು ಮನವಿ ಮಾಡಿದರು. ಕರ್ನಾಟಕದಲ್ಲಿ ಆದಿಜಾಂಬವ ಸಂಘ ಮತ್ತು ಇತರೆ ಮಾದಿಗ ಸಂಘಟನೆಗಳ ಹೋರಾಟದ ಫಲವಾಗಿ ನ್ಯಾಯಮೂರ್ತಿ ಎ.ಜೆ.ಸದಾಶಿವ ಆಯೋಗವು ಆರು ವರ್ಷಗಳಿಗೂ ಹೆಚ್ಚಿನ ಕಾಲ ರಾಜ್ಯದ ಪರಿಶಿಷ್ಟಜಾತಿ ಪಟ್ಟಿಯಲ್ಲಿರುವ 101 ಉಪಜಾತಿಯವರ ಔದ್ಯೋಗಿಕ ರಾಜಕೀಯ, ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ನಡೆಸಿ ಇವರ ಅಭಿವೃದ್ಧಿಯ ಬಗ್ಗೆ ಮಾಡಿದ ಅಧ್ಯಯನದ ಮೇರೆಗೆ ಇದರಲ್ಲಿ ಅಸ್ಪೃಶ್ಯತೆ ಸಮುದಾಯಕ್ಕೆ ಸೇರಿದ ಭೋವಿ, ಲಂಬಾಣಿ, ಕೊರಚ, ಕೊರಮ, ಉಪ ಜಾತಿಯವರಿಗೆ ಶೇ.3 ರಷ್ಟು ಮತ್ತು ಇತರೆ ಉಪಜಾತಿಯವರಿಗೆ ಶೇ.1 ರಷ್ಟು ಒಳ ಮೀಸಲಾತಿಯನ್ನು ನೀಡಬೇಕೆಂದು ಶಿಫಾರಸ್ಸು ಮಾಡಿದೆ, ಮಾದಿಗ ಸಮುದಾಯಕ್ಕೆ ಶೇ.6,75 ರಷ್ಟು ಮೀಸಲಾತಿಯನ್ನು ತಕ್ಷಣ ಜಾರಿ ಮಾಡಬೇಕೆಂದು ಸಂಘವು ಒತ್ತಾಯಿಸುತ್ತದೆ ಎಂದರು. ಜಿಲ್ಲಾ ಮಾದಿಗ ಒಳಮೀಸಲಾತಿ ಜಿಲ್ಲಾಧ್ಯಕ್ಷ ಸಿ.ಕೆ.ಪಾಪಣ್ಣ, ಪೌರ ಚಾಲಕರ ರಾಜ್ಯ ಕಾರ್ಯದರ್ಶಿ ಮದ್ದೂರು ಶ್ರೀನಿವಾಸ್, ಮುಖಂಡರಾದ ಶಂಕರ್ ನಿಡಘಟ್ಟ, ಕನ್ನಲಿ ಪುಟ್ಟಸ್ವಾಮಿ ಭಾಗವಹಿಸಿದ್ದರು.



### ಭಾರತ್ ಹಾಸ್ಪಿಟಲ್ ಅಂಡ್ ಇನ್ಸ್ಟಿಟ್ಯೂಟ್ ಆಫ್ ಆಂಕಾಲಜಿಯಿಂದ ಅಭಿಯಾನ

## ಬಾಯಿ ಕ್ಯಾನ್ಸರ್‌ನಿಂದ ರಕ್ಷಣೆಗೆ 2 ನಿಮಿಷ ಕ್ರಮ

**ಮೈಸೂರು:** ಸಕಾಲಿಕ ಮತ್ತು ಪರಿಣಾಮಕಾರಿ ಉಪಕ್ರಮದಲ್ಲಿ ಭಾರತ್ ಹಾಸ್ಪಿಟಲ್ ಅಂಡ್ ಇನ್ಸ್ಟಿಟ್ಯೂಟ್ ಆಫ್ ಆಂಕಾಲಜಿಯು, ಮರ್ಕ್ ಸ್ಪೆಷಾಲಿಟೀಸ್ ಪ್ರೈವೇಟ್ ಲಿಮಿಟೆಡ್ ಸಹಯೋಗದಲ್ಲಿ ವಿಶ್ವ ತಂಬಾಕು ರಹಿತ ದಿನದ ಅಂಗವಾಗಿ 'ಬಾಯಿ ಕ್ಯಾನ್ಸರ್ ರಕ್ಷಣೆಗೆ ಎರಡು ನಿಮಿಷಗಳ ಕ್ರಮ'ವನ್ನು ಆಕ್ಟ್ ಎಗೇನ್ಸ್ಟ್ ಓರಲ್ ಕ್ಯಾನ್ಸರ್ ಹ್ಯಾಷ್ ಟ್ಯಾಗ್ ನಲ್ಲಿಪ್ರಕಟಿಸಿದೆ.

ಈ ದೇಶವ್ಯಾಪಿ ಅಭಿಯಾನವು ವ್ಯಕ್ತಿಗಳಿಗೆ ಸದಾ ಲಭ್ಯವಿರುವ ಕನ್ನಡಿ ಬಳಸಿ ತ್ವರಿತ ಸ್ವಯಂ–ಪರೀಕ್ಷೆ ಮಾಡಿಕೊಳ್ಳಲು ಉತ್ತೇಜಿಸುತ್ತದೆ. ಜನರಿಗೆ ಬಿಳಿ ಅಥವಾ ಕೆಂಪು ಕಲೆಗಳು, ಗುಣವಾಗದ ಅಲ್ಸರ್ ಗಳು, ಸತತ ಊತ ಧ್ವನಿ ಬದಲಾವಣೆಗಳು ಅಥವಾ ವಿವರಿಸಲಾಗದ ರಕ್ತಸ್ರಾವದ ಮುನ್ನೆಚ್ಚರಿಕೆ ಸೂಚನೆಗಳನ್ನು ಗಮನಿಸಲು ಉತ್ತೇಜಿಸಲಾಗುತ್ತದೆ. ಇದರ ಪ್ರಮುಖ ಸಂದೇಶವೆಂದರೆ: ಭಾವಿಸಿ, ನೋಡಿರಿ ಮತ್ತು ಕ್ರಮ ತೆಗೆದುಕೊಳ್ಳಿರಿ. ಕನ್ನಡಿಯ ಮುಂದೆ ಕೇವಲ ಎರಡು ನಿಮಿಷಗಳು ಜೀವ ಉಳಿಸಬಲ್ಲದು. ಆಸ್ಪತ್ರೆಗಳ ಕಾಯುವ ಸ್ಥಳಗಳಲ್ಲಿ ಕನ್ನಡಿಗಳನ್ನು ಇರಿಸುವುದು ಕೂಡಾ ಅರಿವು ಹೆಚ್ಚಿಸಬಲ್ಲದು ಮತ್ತು ರೋಗಿಗಳು ಹಾಗೂ ಸಂದರ್ಶಕರಲ್ಲಿ ಸ್ವಯಂ–ಪರೀಕ್ಷೆ ಉತ್ತೇಜಿಸಬಲ್ಲದು.

ಈ ಅಭಿಯಾನ ಪ್ರಾರಂಭದ ಸಮಯದಲ್ಲಿ ಡಾ.ವೈ.ಎಸ್. ಮಾಧವಿ (ಕನ್ಸಲ್ಟೆಂಟ್ ರೇಡಿಯೇಷನ್ ಆಂಕಾಲಜಿಸ್ಟ್ ಅಂಡ್ ಮೆಡಿಕಲ್ ಸೂಪರಿಂಟೆಂಡೆಂಟ್), ಡಾ.ವಿಜಯ್ ಕುಮಾರ್ ಎಂ (ಸೀನಿಯರ್ ಸರ್ಜಿಕಲ್ ಆಂಕಾಲಜಿಸ್ಟ್ ಮತ್ತು ರೊಬಿಟಿಕ್ ಸರ್ಜನ್), ಡಾ.ಶ್ರೀನಿವಾಸ್ ಕೆ.ಜಿ. (ಸೀನಿಯರ್ ಕನ್ಸಲ್ಟೆಂಟ್ ಮೆಡಿಕಲ್ ಆಂಕಾಲಜಿಸ್ಟ್), ಡಾ.ವಿನಯ್ ಕುಮಾರ್ ಮುತ್ತಗಿ (ಸೀನಿಯರ್ ಕನ್ಸಲ್ಟೆಂಟ್ ರೇಡಿಯೇಷನ್ ಆಂಕಾಲಜಿಸ್ಟ್), ಡಾ.ರಕ್ಷಿತ್ ಶೃಂಗೇರಿ (ಸರ್ಜಿಕಲ್ ಆಂಕಾಲಜಿಸ್ಟ್ ಅಂಡ್ ರೊಬೊಟಿಕ್ ಸರ್ಜನ್), ಡಾ. ಅಭಿಲಾಷ್ ಜಿ.ಎಚ್. (ಕನ್ಸಲ್ಟೆಂಟ್ ಮೆಡಿಕಲ್ ಆಂಕಾಲಜಿಸ್ಟ್) ಮತ್ತು ಶ್ರೀ ಗೌತಮ್ ಧಮೇರಿಯಾ (ಚೀಫ್ ಆಪರೇಟಿಂಗ್ ಆಫೀಸರ್) ಉಪಸ್ಥಿತರಿದ್ದರು.

''ನಾವುತಡವಾಗಿಪತ್ತೆಯಾಗುವುದುಮತ್ತುತಂಬಾಕು ಹಾಗೂ ಮದ್ಯಪಾನದಿಂದ ಕ್ಯಾನ್ಸರ್ ಪ್ರಕರಣಗಳಲ್ಲಿ ಮುಖ್ಯವಾಗಿ ಬಾಯಿ ಕ್ಯಾನ್ಸರ್ ಹೆಚ್ಚಳ ಕಾಣುತ್ತಿದ್ ಏವೆ. ಸರಳ, ನಿಯಮಿತ ಸ್ವಯಂ–ಪರೀಕ್ಷೆಯುಈ




ರೋಗಲಕ್ಷಣಗಳನ್ನು ಮುಂಚೆಯೇ ಕಂಡುಕೊಳ್ಳಲು ಮತ್ತು ಫಲಿತಾಂಶಗಳನ್ನು ಸುಧಾರಿಸಲು ನೆರವಾಗುತ್ತದೆ'' ಎಂದು ಭಾರತ್ ಹಾಸ್ಪಿಟಲ್ ಅಂಡ್ ಇನ್ಸ್ಟಿಟ್ಯೂಟ್ ಆಫ್ ಆಂಕಾಲಜಿಯ ಕನ್ಸಲ್ಟೆಂಟ್ ರೇಡಿಯೇಷನ್ ಆಂಕಾಲಜಿಸ್ಟ್ ಅಂಡ್ ಮೆಡಿಕಲ್ ಸೂಪರಿಂಟೆಂಡೆಂಟ್ ಡಾ.ವೈ.ಎಸ್. ಮಾಧವಿ ಹೇಳಿದರು.

ಭಾರತದಲ್ಲಿ ಸುಮಾರು 2 ಲಕ್ಷ ಹೊಸ ತಲೆ ಮತ್ತು ಕುತ್ತಿಗೆಯ ಕ್ಯಾನ್ಸರ್ ಪ್ರಕರಣಗಳನ್ನು ಪ್ರತಿ ವರ್ಷ ಪತ್ತೆ ಮಾಡಲಾಗುತ್ತಿದ್ದು ಅವು ಜಾಗತಿಕವಾಗಿ ಅತ್ಯಂತ ಹೆಚ್ಚಾಗಿವೆ. ಈ ರೋಗ ಪತ್ತೆಯಾದ ಶೇ.60–70 ಪ್ರಕರಣಗಳು 3 ಅಥವಾ 4ನೇ ಹಂತದಲ್ಲಿರುತ್ತವೆ. ಬಾಯಿ ಕ್ಯಾನ್ಸರ್ ಮಾತ್ರವೇ ಶೇ.65ಕ್ಕಿಂತ ತುಟಿ ಮತ್ತು ಬಾಯಿಕುಹರದ ಕ್ಯಾನ್ಸರ್ ಪ್ರಕರಣಗಳಲ್ಲಿ ಹೆಚ್ಚಾಗಿದ್ದು ಮುಂಚೆಯೇ ಪತ್ತೆ ಮಾಡುವುದು ಬಹಳ ಮುಖ್ಯ.

''ಭಾರತದಲ್ಲಿ ತಲೆ ಮತ್ತು ಕುತ್ತಿಗೆ ಕ್ಯಾನ್ಸರ್ ಗಳು ಒಟ್ಟು ಕ್ಯಾನ್ಸರ್ ಗಳ ಗಮನಾರ್ಹ ಪ್ರಮಾಣ ಹೊಂದಿವೆ. ದುಃಖದ ವಿಷಯವೆಂದರೆ ಬಹಳ ಮುಂದುವರಿದ ಹಂತದಲ್ಲಿ ಬಹಳಷ್ಟು ರೋಗಿಗಳಲ್ಲಿ ರೋಗಪತ್ತೆಯಾಗುತ್ತದೆ. ಅರಿವು ಮತ್ತು ಪ್ರಾರಂಭಿಕ ಪತ್ತೆ ನಮ್ಮ ಅತ್ಯಂತ ಸದೃಢ ಸಾಧನಗಳು'' ಎಂದು ಸೀನಿಯರ್ ಸರ್ಜಿಕಲ್ ಆಂಕಾಲಜಿಸ್ಟ್ ಅಂಡ್ ರೊಬೊಟಿಕ್ ಸರ್ಜನ್ ಡಾ.ವಿನಯ್ ಕುಮಾರ್ ಎಂ. ಹೇಳಿದರು.

''ಬಾಯಿ ಕ್ಯಾನ್ಸರ್ ಭಾರತೀಯರಲ್ಲಿ ಅತ್ಯಂತ ಸಾಮಾನ್ಯವಾಗಿ ಕಾಣುವ ಕ್ಯಾನ್ಸರ್ ಗಳಲ್ಲಿ ಒಂದಾಗಿದೆ. ಜನರು ಸಾಮಾನ್ಯವಾಗಿ ಗುಣವಾಗದ ಬಾಯಿಹುಣ್ಣು ಅಥವಾ ಧ್ವನಿ ಬದಲಾವಣೆಗಳನ್ನು ನಿರ್ಲಕ್ಷಿಸುತ್ತಾರೆ. ಈ ಉಪಕ್ರಮವು ಪ್ರತಿಯೊಬ್ಬರಿಗೂ ಕನ್ನಡಿಯ ಮೂಲಕ ಪರೀಕ್ಷೆ ತ್ವರಿತ ಮತ್ತು ಮುಖ್ಯ ಎಂದು ನೆನಪಿಸುತ್ತದೆ'' ಎಂದು ಸೀನಿಯರ್ ಕನ್ಸಲ್ಟೆಂಟ್ ಮೆಡಿಕಲ್ ಆಂಕಾಲಜಿಸ್ಟ್ ಡಾ.ಶ್ರೀನಿವಾಸ್ ಕೆ.ಜಿ. ಹೇಳಿದರು.

''ಕ್ಯಾನ್ಸರ್ ಮುಂಚೆಯೇ ಪತ್ತೆಯಾದರೆ ರೇಡಿಯೇಷನ್ ಥೆರಪಿಯು ಅತ್ಯಂತ ಪರಿಣಾಮಕಾರಿ. ಈ ಅಭಿಯಾನವು ಸಕಾಲಿಕವಾಗಿ ಕ್ರಮ ಕೈಗೊಳ್ಳುವ ಪ್ರಾಮುಖ್ಯತೆಯನ್ನು ಎತ್ತಿ ತೋರುತ್ತದೆ'' ಎಂದು ಸೀನಿಯರ್ ಕನ್ಸಲ್ಟೆಂಟ್ ರೇಡಿಯೇಷನ್ ಆಂಕಾಲಜಿಸ್ಟ್ ಡಾ.ವಿನಯ್ ಕುಮಾರ್ ಮುತ್ತಗಿ ಹೇಳಿದರು.

''ಬಾಯಿ ಕ್ಯಾನ್ಸರ್ ಬಹಳ ಸಣ್ಣದಾಗಿ, ಕಾಣಿಸುವ ಸೂಚನೆಗಳಿಂದ ಪ್ರಾರಂಭವಾಗುತ್ತದೆ. ಕನ್ನಡಿಯು ಶಕ್ತಿಯುತ ಸಹವರ್ತಿಯಾಗಿದೆ. ಪ್ರತಿ ತಿಂಗಳು ಕೇವಲ ಎರಡು ನಿಮಿಷ ಗಮನಿಸುವುದು ಈ ಸೂಚನೆಗಳನ್ನು ತಡವಾಗುವ ಮುನ್ನ ಕಂಡುಕೊಳ್ಳಲು ನೆರವಾಗುತ್ತದೆ'' ಎಂದು ಸರ್ಜಿಕಲ್ ಆಂಕಾಲಜಿಸ್ಟ್ ಅಂಡ್ ರೊಬೊಟಿಕ್ ಸರ್ಜನ್ ಡಾ.ರಕ್ಷಿತ್ ಶೃಂಗೇರಿ ಹೇಳಿದರು.

''ಈ ಉಪಕ್ರಮವು ಕ್ಯಾನ್ಸರ್ ತಡೆಯುವುದನ್ನು ಸರಳೀಕರಿಸುತ್ತದೆ. ಮಾಸಿಕ ಕನ್ನಡಿಯ ಪರೀಕ್ಷೆಯು ಜನರಿಗೆ ಅವರ ಆರೋಗ್ಯವನ್ನು ಸರಳವಾಗಿ ನಿಯಂತ್ರಿಸಲು ನೆರವಾಗುತ್ತದೆ'' ಎಂದು ಕನ್ಸಲ್ಟೆಂಟ್ ಮೆಡಿಕಲ್ ಆಂಕಾಲಜಿಸ್ಟ್ ಡಾ.ಅಭಿಲಾಷ್ ಜಿ.ಎಚ್. ಹೇಳಿದರು.

''ಭಾರತದ ಹಾಸ್ಪಿಟಲ್ ಅಂಡ್ ಇನ್ಸ್ಟಿಟ್ಯೂಟ್ ಆಫ್ ಆಂಕಾಲಜಿಯು ಸದಾ ರೋಗಿಯ ಶಿಕ್ಷಣ ಮತ್ತು ಪ್ರಾರಂಭಿಕ ಮಧ್ಯಪ್ರವೇಶದಲ್ಲಿ ನಂಬಿಕೆ ಇರಿಸಿದೆ. ಈ ಅಭಿಯಾನದ ಮೂಲಕ ನಾವು ರೋಗಪರೀಕ್ಷೆಯ ತಡವಾಗುವುದನ್ನು ಕಡಿಮೆ ಮಾಡುವ ಮತ್ತು ರಕ್ಷಣಾತ್ಮಕ ಆರೋಗ್ಯದ ರೂಢಿಗಳನ್ನು ಉತ್ತೇಜಿಸಲು ಸಾಧ್ಯವಾಗುತ್ತದೆ ಎಂಬ ಭರವಸೆ ಹೊಂದಿದ್ದೇವೆ'' ಎಂದು ಚೀಫ್ ಆಪರೇಟಿಂಗ್ ಆಫೀಸರ್ ಶ್ರೀ ಗೌತಮ್ ಧಮೇರ್ಲಾ ಹೇಳಿದರು.



**ಮೈಸೂರಿನ ವಿಜಯನಗರದಲ್ಲಿರುವ ಶ್ರೀ ಯೋಗಾನರಸಿಂಹ ಸ್ವಾಮಿ ದೇವಾಲಯದಲ್ಲಿ ಮೇ.27ರ ಮಂಗಳವಾರ ನಡೆದ ಶ್ರೀ ಸ್ವಾಮಿಯ ಕುಂಭಾಭಿಷೇಕ ಮಹೋತ್ಸವದ ಅಖಂಡ ಮಹಾ ಸುದರ್ಶನ ಹೋಮ ಸೇರಿದಂತೆ ಇನ್ನಿತರ ಪೂಜಾ ಕೈಂಕರ್ಯದಲ್ಲಿ ರಘುಲಾಲ್ ಅಂಡ್ ಕಂಪನಿ ಮುಖ್ಯಸ್ಥರಾದ ರಘುಲಾಲ್ ರಾಘವನ್ ದಂಪತಿ ಪಾಲ್ಗೊಂಡರು.ಈ ವೇಳೆ ದೇವಾಲಯದ ಸಂಸ್ಥಾಪಕರಾದ ಪ್ರೊ. ಡಾ.ಭಾಷ್ಯಂ ಸ್ವಾಮೀಜಿ, ಆಡಳಿತಾಧಿಕಾರಿ ಎನ್.ಶ್ರೀನಿವಾಸನ್ ಇನ್ನಿತರರು ಉಪಸ್ಥಿತರಿದ್ದರು.**

## ತಿಮ್ಲಾಪುರ ಗ್ರಾಪಂಗೆ ದಾಕ್ಷಾಯಿಣಮ್ಮ ನೂತನ ಅಧ್ಯಕ್ಷೆ

**ಹುಳಿಯಾರು:** ಹುಳಿಯಾರು ಹೋಬಳಿಯ ತಿಮ್ಲಾಪುರ ಗ್ರಾಮ ಪಂಚಾಯ್ತಿಗೆ ನೂತನ ಅಧ್ಯಕ್ಷೆಯಾಗಿ ಹೊಸಹಳ್ಳಿಪಾಳ್ಯದ ದ್ರಾಕ್ಷಾಯಿಣಮ್ಮ ಅವರು ಆಯ್ಕೆಯಾಗಿದ್ದಾರೆ.

17 ಮಂದಿ ಸದಸ್ಯ ಬಲವುಳ್ಳ ಈ ಪಂಚಾಯ್ತಿಗೆ ನೂತನ ಅಧ್ಯಕ್ಷರ ಸ್ಥಾನಕ್ಕೆ ಚುನಾವಣೆ ನಡೆಸಿದ್ದು ದ್ರಾಕ್ಷಾಯಿಣಮ್ಮ ಹಾಗೂ ಟಿ.ಕೆ.ಪ್ರಕಾಶ್ ಸ್ಪರ್ಧಿಸಿದ್ದರು. ದ್ರಾಕ್ಷಾಯಿಣಮ್ಮ ಅವರು 12 ಮತಗಳನ್ನು ಪಡೆಯುವ ಮೂಲಕ ಅಧ್ಯಕ್ಷೆ ಗಾದಿ ಅಲಂಕರಿಸಿದರು.

ಚುನಾವಣಾಧಿಕಾರಿಯಾಗಿ ಕೃಷಿ ಇಲಾಖೆಯ ಶಿವರಾಜಕುಮಾರ್ ಇದ್ದರು, ಪಿಡಿಒ ಚಿಕ್ಕಣ್ಣ, ಗ್ರಾಪಂ ಸದಸ್ಯರುಗಳಾದ ಎನ್ .ಬಿ.ದೇವರಾಜು, ಪುಟ್ಟಸ್ವಾಮಿ, ಗಂಗಾಧರ್, ಚಂದ್ರಮ್ಮ, ಕಲ್ಪನಾ, ಮಂಜುನಾಥ್, ಗೌರಮ್ಮ, ಸಾಕಮ್ಮ, ಈಶ್ವರಯ್ಯ, ತಿಮ್ಮಯ್ಯ, ಲೀಲಾ, ಲಕ್ಷ್ಮಮ್ಮ, ರಮ್ಯ, ಗವೀರಂಗಯ್ಯ ಉಪಸ್ಥಿತರಿದ್ದರು.



### ಮೀನು ಪಾಶುವಾರು ಹರಾಜು ಪ್ರಕಟಣೆ

**ಹುಳಿಯಾರು:** ಹುಳಿಯಾರು ಹೋಬಳಿಯ ಕೋರಗೆರೆ ಗ್ರಾಮ ಪಂಚಾಯ್ತಿಯಿಂದ ಜೂನ್ 16 ರ ಸೋಮವಾರ ಬೆಳಗ್ಗೆ 11 ಗಂಟೆಗೆ ಪಂಚಾಯ್ತಿ ಆವರಣದಲ್ಲಿ ಮೀನು ಪಾಶುವಾರು ಹರಾಜು ಪ್ರಕ್ರಿಯೆ ನಡೆಯಲಿದೆ. ಕೋರಗೆರೆ ಗ್ರಾಪಂ ವ್ಯಾಪ್ತಿಯ ಕೋರಗೆರೆ ದೊಡ್ಡಕೆರೆ, ಕೋರಗೆರೆ ವಡ್ಡಗಟ್ಟೆ, ಉಪ್ಪಾರಹಳ್ಳಿ ಕೆರೆ, ಉಪ್ಪಾರಹಳ್ಳಿ ಗುಂಡಪ್ಪನಕಟ್ಟೆ, ಬರಗಿಹಳ್ಳಿ ದೊಡ್ಡಕೆರೆ, ಬರಗಿಹಳ್ಳಿ ಸಣ್ಣಕೆರೆ, ಎಂ.ವಿ.ಹಟ್ಟಿ ಲೆಕ್ಕಮಣಿಕಟ್ಟೆಗಳ ಮೀನು ಪಾಶುವಾರು ಹಕ್ಕನ್ನು 1 ಜುಲೈ 2025 ರಿಂದ 30 ಜೂನ್ 2028 ರ ವರೆವಿಗೆ (3 ವರ್ಷದ ಅವಧಿಗೆ) ಹರಾಜು ಮೂಲಕ ವಿಲೇವಾರಿ ಮಾಡಲಾಗುವುದು. ಹರಾಜಿನಲ್ಲಿ ಭಾಗವಹಿಸುವವರು ಕೋರಗೆರೆ ದೊಡ್ಡಕೆರೆ, ಉಪ್ಪಾರಹಳ್ಳಿ ಕೆರೆ ಹಾಗೂ ಬರಗಿಹಳ್ಳಿ ದೊಡ್ಡಕೆರೆಗಳಿಗೆ 2 ಸಾವಿರ ರೂ. ಠೇವಣಿ, ಇತರೆ ಕೆರೆಕಟ್ಟೆಗಳಿಗೆ 1 ಸಾವಿರ ರೂ. ಠೇವಣಿ ಇಡಬೇಕಿದ್ದು ಹರಾಜು ಮುಗಿದ ಕೂಡಲೆ ಅತಿ ಹೆಚ್ಚಿನ ಮೊತ್ತಕ್ಕೆ ಹರಾಜು ಕೂಗಿದವರು ಸ್ಥಳದಲ್ಲೇ ಹರಾಜು ಹಣ ಕಟ್ಟಿ ರಸೀಧಿ ಪಡೆಯಬೇಕಿದೆ.

## ಅಂತರಾಷ್ಟ್ರೀಯ ಶುಶ್ರೂಷಕರ ದಿನಾಚರಣೆ

**ಮೈಸೂರು:** ನಗರದ ಶ್ರೀ ಗುರು ರೆಸಿಡೆನ್ಸಿ ಹೋಟೆಲ್ ಸಭಾಂಗಣದಲ್ಲಿ ಆಯೋಜಿಸಿದ ನಿವೃತ್ತ ಶುಶ್ರೂಷಾಧಿಕಾರಿಗಳ ಸಂಘ ಹಾಗೂ ಫ್ಲಾರೆನ್ಸ್ ನೈಟಿಂಗೇಲ್ ರವರ ಜಯಂತಿ ವಾರ್ಷಿಕೋತ್ಸವ ಮತ್ತು ಅಂತರಾಷ್ಟ್ರೀಯ ಶುಶ್ರೂಷಕರ ದಿನಾಚರಣೆ ಕಾರ್ಯಕ್ರಮದ ಜೊತೆಗೆ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಉದ್ಘಾಟಿಸಿ ಮಾತನಾಡಿದ ಅವರು ಫ್ಲಾರೆನ್ಸ್ ನೈಟಿಂಗೇಲ್ ರವರ ಸೇವೆ ಇಡೀ ದೇಶಕ್ಕೆ ಮಾದರಿ ಎಂದು ಸರ್ಕಾರಿ ಶುಶ್ರೂಷಾಕರ ಸಂಘದ ಮಾಜಿ ಅಧ್ಯಕ್ಷ ಜಿ.ಸಿದ್ದಯ್ಯ ಅವರ ಸೇವೆಗೆ ಶ್ಲಾಘಿಸಿದರು.

ನಂತರ ನಿವೃತ್ತರಾದ ಶುಶ್ರೂಷಾಧಿಕಾರಿಗಳಾದ 12ಮಂದಿಯನ್ನು ಅಭಿನಂದಿಸಿ ಸನ್ಮಾನಿಸಿ ಗೌರವಿಸಿದರು ಜೊತೆಗೆ ಪ್ರತಿಭಾವಂತ ವಿದ್ಯಾರ್ಥಿನಿಯರಿಗೆ ಸಹ ಸನ್ಮಾನಿಸಿದ್ದರು ಹಾಗೂ ಈ ಸಂಘದ ಸಂಘಟನಾ ಕಾರ್ಯದರ್ಶಿ ಗೋವಿಂದ ಚಾರ್ ಅವರಿಗೂ ಸಹ ಸನ್ಮಾನಿಸಲಾಯಿತು.

ನಮ್ಮ ದೇಶದ ಗಡಿ ಕಾಯುವ ಯೋಧರ ಬಗ್ಗೆ ಗುಣಗಾನ ಮಾಡಿ ಅವರು ನಮ್ಮ ದೇಶ ಕಾಯುತ್ತಿದ್ದು ಅವರಿಗೂ ಸಹ ಗೌರವವನ್ನು



ಸಲ್ಲಿಸುತ್ತಾ ಅವರಿಗೋಸ್ಕರ ನಾವು ದುಡಿದಂತಹ ಹಣದಲ್ಲಿ ಅಲ್ಪ ಪ್ರಮಾಣದ ಹಣವನ್ನು ಅವರಿಗೋಸ್ಕರ ಸಹಾಯವನ್ನು ನೀಡುತ್ತಿದ್ದೇವೆ ಎಂದು ಮಾಜಿ ಅಧ್ಯಕ್ಷರು ಜಿ.ಸಿದ್ದಯ್ಯ ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ನಿವೃತ್ತ ಶುಶ್ರೂಷಾಧಿಕಾರಿಗಳ ಸಂಘದ ಅಧ್ಯಕ್ಷೆ ಶಿವಮ್ಮ, ಸಂಸ್ಥಾಪಕ ಅಧ್ಯಕ್ಷರು ಡಾ ರಂಗಸ್ವಾಮಿ ಪಿ, ಗೌರವಾಧ್ಯಕ್ಷ ಕುಶಾಲಪ್ಪ ಕೆ ಕೆ, ಪ್ರಧಾನ ಕಾರ್ಯದರ್ಶಿ ಹೇಮಲತಾ, ಖಜಾಂಚಿ ಆಲೀಸ್ ಫ್ಲಾರೆನ್ಸ್ ಕ್ರಾಸ್ಟ್, ಸಂಘಟನಾ ಕಾರ್ಯದರ್ಶಿ ಕಣ್ಣೂರ್ ಗೋವಿಂದಾಚಾರ್ ಸೇರಿದಂತೆ ನಿವೃತ ಸಂಘದ ಎಲ್ಲಾ ಸದಸ್ಯರುಗಳು ಭಾಗಿಯಾಗಿದ್ದರು.

### ನಾಳೆ ಬಹಿರಂಗ ಹರಾಜು

**ರಾಮನಗರ:** ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡಿರುವ ವಿವಿಧ ವಾಹನಗಳನ್ನು ಈಗಿರುವ ಯಥಾಸ್ಥಿತಿಯಲ್ಲಿಯೇ ಮೇ 30ರಂದು ಬೆಳಿಗ್ಗೆ 11 ಗಂಟೆಗೆ ಚನ್ನಪಟ್ಟಣ ಟೌನಿನ ಕುವೆಂಪು ನಗರದ (ಉತ್ತರ) 8ನೇ ಅಡ್ಡರಸ್ತೆಯಲ್ಲಿರುವ ಕಟ್ಟಡ ಸಂಖ್ಯೆ: 2459ರಲ್ಲಿರುವ ಚನ್ನಪಟ್ಟಣ ವಲಯದ ಅಬಕಾರಿ ನಿರೀಕ್ಷಕರ ಕಚೇರಿಯಲ್ಲಿ ಟೆಂಡರ್ ಕಂಗ ಬಹಿರಂಗ ಹರಾಜು ಮೂಲಕ ವಿಲೇಗೊಳಿಸಲಾಗುವುದು. ಹೆಚ್ಚಿನ ಮಾಹಿತಿಗೆ ಅಬಕಾರಿ ಆಯುಕ್ತರ ಕಚೇರಿ, ಕಟ್ಟಡ ಸಂಖ್ಯೆ: 27–4–8–582–376ಎ, ಒಂದನೇ ಮಹಡಿ, ಜಿ.ವಿ.ಆರ್. ಕಾಂಪ್ಲೆಕ್ಸ್, ವಿವೇಕಾನಂದನಗರ, ರಾಮನಗರ ಟೌನ್ ಈ ಕಚೇರಿಯನ್ನು ಸಂಪರ್ಕಿಸುವಂತೆ ಜಿಲ್ಲಾ ಅಬಕಾರಿ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

**ರಾಮನಗರ:**2025–26ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ 2024–25ನೇ ಸಾಲಿಗೆ ಮಂಜೂರಾದ ರಾಜ್ಯದ ಬೆಳಗಾವಿ/ಮೈಸೂರು ಕಂದಾಯ ವಿಭಾಗಗಳಲ್ಲಿ ಅಲ್ಪಸಂಖ್ಯಾತರ ಸಮುದಾದಯದ ಯುವ ಜನರಿಗೆ 90 ದಿನಗಳ ವಸತಿಯುತ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ (ಪಿಎಸ್‌ಐ) ನೇಮಕಾತಿ ಪರೀಕ್ಷಾ ಪೂರ್ವ ತರಬೇತಿಯನ್ನು ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳಿಗೆ ಪ್ರತಿಷ್ಠಿತ ಸಂಸ್ಥೆಯ ಮೂಲಕ ಪ್ರಾರಂಭಿಸಲು ಸೇವಾಸಿಂಧು ಪೋರ್ಟಲ್ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸಲು ಜೂನ್ 5ರ ವರೆಗೆ ಅವಧಿ ವಿಸ್ತರಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಕೊಠಡಿ ಸಂ: 308, 2ನೇ ಮಹಡಿ, ಕಂದಾಯ ಭವನ, ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿಗಳ ಕಚೇರಿ ಅಥವಾ ದೂ.ಸಂಖ್ಯೆ: 8310935776, 9886558821, 9880297132, 8197514161 ಅಥವಾ ಸಹಾಯವಾಣಿ ಸಂಖ್ಯೆ: 8277799990 ಅನ್ನು ಸಂಪರ್ಕಿಸುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ನಾಳೆ ನೇರ ಸಂದರ್ಶನ

**ರಾಮನಗರ:** ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಮೇ 30ರ ಶುಕ್ರವಾರ ಉಚಿತ ನೇರ ಸಂದರ್ಶನ ಆಯೋಜಿಸಲಾಗಿದೆ.ನೇರ ಸಂದರ್ಶನದಲ್ಲಿ ಕ್ರೆಡಿಟ್ ಅಕ್ಸಸ್ ಗ್ರಾಮೀಣ ಲಿಮಿಟೆಡ್ ಖಾಸಗಿ ಸಂಸ್ಥೆಯವರು ಭಾಗವಹಿಸುತ್ತಿದ್ದು, ಉದ್ಯೋಗಾಂಕ್ಷಿಗಳನ್ನು ನೇಮಕ ಮಾಡಿಕೊಳ್ಳಲಿರುವುದರಿಂದ ಖಾಸಗಿ ವಲಯದಲ್ಲಿನ ಉದ್ಯೋಗಕ್ಕೆ ಆಸಕ್ತರಿರುವ ಪಿ.ಯು.ಸಿ, ಐ.ಟಿ.ಐ ಹಾಗೂ ಯಾವುದೇ ಪದವಿ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತೆ/ ರೆಸ್ಯೂಮ್ (ಬಯೋಡೇಟಾ), ಇತ್ಯಾದಿ ದಾಖಲೆಗಳೊಂದಿಗೆ ಮೇ 30ರ ಶುಕ್ರವಾರ ಬೆಳಿಗ್ಗೆ 10 ಗಂಟೆಗೆ ಕ್ರೆಡಿಡ್ ಅಕ್ಸಸ್ ಗ್ರಾಮೀಣ ಲಿಮಿಟೆಡ್, ಶಿವನಾಂಕೇಶ್ವರ ಕಾಂಪ್ಲೆಕ್ಸ್, ಕೆ.ಎನ್.ಎಸ್. ಸರ್ಕಲ್ ಹತ್ತಿರ, ಎಕ್ಸಿಸ್ ಬ್ಯಾಂಕ್ ಪಕ್ಕ, ಕನಕಪುರ ಟೌನ್, ರಾಮನಗರ ಜಿಲ್ಲೆ. ಈ ಕಚೇರಿಗೆ ಭೇಟಿ ನೀಡಬಹುದಾಗಿದೆ. ಹೆಚ್ಚಿನ ಮಾಹಿತಿಗೆ ದೂ.ಸಂಖ್ಯೆ: 9686110476 ಅಥವಾ 9606543743 ಅನ್ನು ಸಂಪರ್ಕಿಸುವಂತೆ ಜಿಲ್ಲಾ ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅರ್ಜಿ ಆಹ್ವಾನ

**ರಾಮನಗರ:** ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್‌ನ ಸಹಯೋಗದಲ್ಲಿ ನಡೆಸುತ್ತಿರುವ ರುಡ್‌ಸೆಟ್ ಸಂಸ್ಥೆಯ ವತಿಯಿಂದ ಸಿಸಿ ಟಿ.ವಿ. ಕ್ಯಾಮೆರಾ, ಸೆಕ್ಯೂರಿಟಿ ಅಲಾರಾಂ ಮತ್ತು ಸ್ಮೋಕ್ ಡಿಟೆಕ್ಟರ್‌ನ ಅಳವಡಿಕೆ ಮತ್ತು ಸೇವೆ ಕುರಿತ 13 ದಿನಗಳ ಉಚಿತ ತರಬೇತಿಯನ್ನು ಜೂನ್ 23 ರಿಂದ ಹಮ್ಮಿಕೊಳ್ಳಲಾಗಿದ್ದು, ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವಕ–ಯುವತಿಯರು ಅರ್ಜಿ ಸಲ್ಲಿಸಬಹುದಾಗಿದೆ. ಆಸಕ್ತರು 18 ರಿಂದ 45 ವ?ರ್ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಗ್ರಾಮೀಣ ಭಾಗದ ಬಿಪಿಎಲ್ ಕಾರ್ಡ್ ಹಾಗೂ ಆಧಾರ್ ಕಾರ್ಡ್ ಅನ್ನು ಕಡ್ಡಾಯವಾಗಿ ಹೊಂದಿರಬೇಕು. ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿಯ ಅವಧಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು. ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಅಥವಾ ಮೊಬೈಲ್ ಸಂಖ್ಯೆ: 9380162042, 9380220884, 9113880324 ಅನ್ನು ಸಂಪರ್ಕಿಸಬಹುದಾಗಿದೆ ಎಂದು ರುಡ್‌ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕ ರವಿಕುಮಾರ ತಿಳಿಸಿದ್ದಾರೆ.

### ಪ್ರಸ್ತಾವನೆ ಆಹ್ವಾನ

**ರಾಮನಗರ;** ಜಿಲ್ಲೆಯಲ್ಲಿ ಖೇಲೋ ಇಂಡಿಯಾ ಯೋಜನೆಯಡಿ ಕಬಡ್ಡಿ ಮತ್ತು ಫುಟ್‌ಬಾಲ್ ಕ್ರೀಡೆಯ ಅರ್ಹ ತರಬೇತುದಾರರನ್ನು ನೇಮಿಸಿಕೊಳ್ಳಲು ಪ್ರಸ್ತಾವನೆಯನ್ನು ಆಹ್ವಾನಿಸಲಾಗಿದೆ. ಆಸಕ್ತ ಕಬಡ್ಡಿ ಮತ್ತು ಫುಟ್‌ಬಾಲ್ ತರಬೇತಿ ಪಡೆದ (ಸಟಿಫೈಡ್ ಕೋರ್ಸ್ ಆಗಿರುವವರು) ಜಿಲ್ಲಾ, ರಾಜ್ಯ, ರಾಷ್ಟ್ರ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ಸರ್ಟಿಫಿಕೇಟ್ ಪಡೆದ ಅಭ್ಯರ್ಥಿಗಳು ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಗೆ ಜೂನ್ 5ರಂದು ಸಂಜೆ 5.30ರೊಳಗೆ ತಮ್ಮ ಪ್ರಸ್ತಾವನೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ರಾಮನಗರ ಜಿಲ್ಲೆ ಇವರನ್ನು ಖುದ್ದಾಗಿ ಭೇಟಿ ಮೂಲಕ ಅಥವಾ ಅಥ್ಲೇಟಿಕ್ಸ್ ತರಬೇತುದಾರರ ದೂ. ಸಂಖ್ಯೆ: 8494830078 ಅನ್ನು ಸಂಪರ್ಕಿಸುವಂತೆ ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### 31ರಂದು ಬಹಿರಂಗ ಹರಾಜು

**ರಾಮನಗರ:** ಮಾಗಡಿ ತಾಲ್ಲೂಕಿನಲ್ಲಿ ಅಗತ್ಯ ವಸ್ತುಗಳ ಕಾಯ್ದೆಯಡಿ ವಶಪಡಿಸಿಕೊಂಡಿರುವ 526 ಗೋಣಿ ಚೀಲಗಳಲ್ಲಿದ್ದ 267.75 ಕ್ವಿಂಟಾಲ್ ರಾಗಿ ದಾಸ್ತಾನನ್ನು ಮೇ 31ರಂದು ಮಧ್ಯಾಹ್ನ 12.30ಕ್ಕೆ ಮಾಗಡಿಯ ಸೋಮೇಶ್ವರ ಕಾಲೋನಿಯ ಕೆ.ಎಸ್.ಆರ್.ಟಿ.ಸಿ ಡಿಪೋ ಹಿಂಭಾಗದಲ್ಲಿರುವ ಟಿಎಪಿಸಿಎಂಎಸ್ ಸಗಟು ಮಳಿಗೆಯಲ್ಲಿ ಬಹಿರಂಗ ಹರಾಜು ಪ್ರಕ್ರಿಯೆ ನಿಗಧಿಪಡಿಸಲಾಗಿದೆ. ಆಸಕ್ತಿದಾರರು ಹರಾಜಿನಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬಹುದಾಗಿದೆ. ಹೆಚ್ಚಿನ ಮಾಹಿತಿಗೆ ಮಾಗಡಿ ತಾಲ್ಲೂಕು ಕಚೇರಿಯನ್ನು ಸಂಪರ್ಕಿಸುವಂತೆ ಮಾಗಡಿ ತಾಲ್ಲೂಕಿನ ತಹಶೀಲ್ದಾರರು ತಿಳಿಸಿದ್ದಾರೆ.

**ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ**

ನಂ. 333/1, 1ನೇ ಮಹಡಿ, ವಿ.ಜಿ. ಕಾಂಪ್ಲೆಕ್ಸ್, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ–562 110.

ಸಂ: ಬಿಐಎಎಪಿಎ/ಟಿಪಿ/ಭೂಉಬ/04/2025–26/431 ದಿನಾಂಕ: 21.05.2025

**ಪ್ರಕಟಣೆ**

ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 14 (ಎ) ರ ಅಡಿಯಲ್ಲಿ ಈ ಕೆಳಕಂಡ ಅರ್ಜಿದಾರರು **ವ್ಯವಸಾಯ** ಭೂಉಪಯೋಗ ವಲಯದಿಂದ **ವಾಣಿಜ್ಯ** ಭೂಉಪಯೋಗ ವಲಯಕ್ಕೆ ಭೂಉಪಯೋಗ ಬದಲಾವಣೆ ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಭೂಉಪಯೋಗ ಬದಲಾವಣೆಯ ಪ್ರಸ್ತಾವನೆಯ ವಿವರಗಳು ಈ ಕೆಳಕಂಡಂತೆ ಇರುತ್ತದೆ. ಸದರಿ ಭೂಉಪಯೋಗ ಬದಲಾವಣೆ ಪ್ರಸ್ತಾವನೆ ಬಗ್ಗೆ ಯಾವುದೇ ಆಕ್ಷೇಪಣೆಗಳಿದ್ದರೆ, ಈ ಪ್ರಕಟಣೆ ಪ್ರಕಟವಾದ ದಿನಾಂಕದಿಂದ 15 ದಿವಸಗಳೊಳಗಾಗಿ ಆಕ್ಷೇಪಣೆಗಳನ್ನು ಲಿಖಿತವಾಗಿ ಸದಸ್ಯ ಕಾರ್ಯದರ್ಶಿಗಳು, ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ ಕಛೇರಿಗೆ ಸಲ್ಲಿಸಲು ತಿಳಿಸಲಾಗಿದೆ. ನಿಗಧಿತ ಅವಧಿಯ ನಂತರ ಬರುವ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸುವುದಿಲ್ಲ.

| ಕ್ರ. ಸಂ | ಅರ್ಜಿದಾರರ ಹೆಸರು | ತಾಲ್ಲೂಕು | ಹೋಬಳಿ | ಗ್ರಾಮದ ವಿವರ | ಸರ್ವೆ ನಂ. | ವಿಸ್ತೀರ್ಣ ಎ–ಗು | ಮಹಾ ಯೋಜನೆಯ ಪ್ರಕಾರ ಭೂ ಉಪಯೋಗ | ಬದಲಾವಣೆ ಕೋರಿರುವ ಭೂ ಉಪಯೋಗ |
|---|---|---|---|---|---|---|---|---|
| 1 | ಶ್ರೀ ಪುಟ್ಟಣ್ಣ–ಮುನಿಶಾಮಪ್ಪ | ದೇವನಹಳ್ಳಿ | ಕಸಬಾ | ಮಾಳಿಗೇನಹಳ್ಳಿ | 17/1 | 1–11 | ವ್ಯವಸಾಯ | ವಾಣಿಜ್ಯ |

**ಷರಾ :–** ಪ್ರಸ್ತಾವನೆಯಲ್ಲಿನ ಅರ್ಜಿದಾರರುಗಳು ಪ್ರಶ್ನಿತ ಜಮೀನುಗಳನ್ನು ವ್ಯವಸಾಯ ಉಪಯೋಗಕ್ಕೆ ಬಳಸಿಕೊಳ್ಳಲು ಸಾಧ್ಯವಾಗುತ್ತಿಲ್ಲವೆಂದೂ. ಸದರಿ ಜಮೀನಿನ ಪರಿಸರದಲ್ಲಿ ವಸತಿ / ವಸತಿಯೇತರ ಅಭಿವೃದ್ಧಿ ಬೆಳವಣಿಗೆಗಳು ಬರುತ್ತಿದ್ದು, ಈ ಜಮೀನಿನ ಪರಿಸರದಲ್ಲಿ ವಾಣಿಜ್ಯ ಉದ್ದೇಶಕ್ಕೆ ಸಾರ್ವಜನಿಕರಿಂದ ತುಂಬಾ ಬೇಡಿಕೆಯಿದ್ದು, ಭವಿಷ್ಯದಲ್ಲಿ ವಾಣಿಜ್ಯ ಉದ್ದೇಶಕ್ಕೆ ಹೆಚ್ಚಿನ ಬೇಡಿಕೆ ಬರುವುದರಿಂದ ಪ್ರಸ್ತಾಪಿತ ಪ್ರದೇಶದಲ್ಲಿ ವಾಣಿಜ್ಯ ಬೆಳವಣಿಗೆಗಳನ್ನು ಅಭಿವೃದ್ಧಿಪಡಿಸಲು ಉದ್ದೇಶಿಸಿರುತ್ತೇವೆ ಅಲ್ಲದೇ, ಪ್ರಸ್ತಾಪಿತ ಜಮೀನಿನಲ್ಲಿ ವಾಣಿಜ್ಯ ಬೆಳವಣಿಗೆಗಳನ್ನು ಅಭಿವೃದ್ಧಿಪಡಿಸುವುದರಿಂದ ಸುತ್ತಮುತ್ತಲಿನ ಸಾರ್ವಜನಿಕರಿಗೆ ಉದ್ಯೋಗಾವಕಾಶ ಸೃಷ್ಟಿಯಾಗುವುದರಿಂದ ಸಾರ್ವಜನಿಕ ಹಿತಾಸಕ್ತಿ ಅಂಶ ಅಡಗಿದೆ ಎಂದು ತಿಳಿಸುತ್ತಾ ಸದರಿ ಜಮೀನನ್ನು **ವ್ಯವಸಾಯ** ಭೂ ಉಪಯೋಗ ವಲಯ ದಿಂದ **ವಾಣಿಜ್ಯ** ಭೂಉಪಯೋಗ ವಲಯಕ್ಕೆ ಭೂ ಉಪಯೋಗ ಬದಲಾವಣೆ ಮಾಡಿಕೊಳ್ಳಲು ಇಚ್ಛಿಸಿರುವುದಾಗಿ ತಿಳಿಸಿರುತ್ತಾರೆ.

ಸಹಿ/– ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು
ಹಾಗೂ ಸದಸ್ಯ ಕಾರ್ಯದರ್ಶಿಗಳು, ಬಿ.ಐ.ಎ.ಎ.ಪಿ.ಎ, ದೇವನಹಳ್ಳಿ.

ವಾಸಾಸಂಇ/ವಾಪ್ರ/ಜಿಎ/885/2025–26

## ಡೇ ಕೇರ್ ಸೆಂಟರ್ ಗೆ ಸ್ವಯಂ ಸೇವಾ ಸಂಸ್ಥೆಗಳಿಂದ ಅರ್ಜಿ

**ಬೆಂಗಳೂರು ಗ್ರಾಮಾಂತರ:** ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ತೀವ್ರತರವಾದ ಮಾನಸಿಕ ರೋಗಿಗಳ ಪುನಶ್ವೇತನಕ್ಕೆ ಡೇ ಕೇರ್ ಸೆಂಟರ್ (ಮಾನಸದಾರ) ಕೇಂದ್ರವನ್ನು ನಿರ್ದಿಷ್ಟ ಗೊತ್ತುಪಡಿಸಿದ ಸರ್ಕಾರಿ ಆಸ್ಪತ್ರೆಯ ಆವರಣದಲ್ಲಿ ಸ್ಥಾಪಿಸಿ ನಿರ್ವಹಿಸಲು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಸರ್ಕಾರೇತರ ಸಂಸ್ಥೆ/ ಸ್ವಯಂ ಸೇವಾ ಸಂಸ್ಥೆಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಸ್ವಯಂ ಸೇವಾ ಸಂಸ್ಥೆಗಳು ಅರ್ಜಿಗಳನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು, ಕೊಠಡಿ ಸಂಖ್ಯೆ:207, 2ನೇ ಮಹಡಿ, ಜಿಲ್ಲಾಡಳಿತ ಭವನ, ಬೀರಸಂದ್ರ, ಗ್ರಾಮ. ಕುಂದಾಣ ಹೋಬಳಿ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಪಡೆದು ಅಗತ್ಯ ದಾಖಲೆಗಳೊಂದಿಗೆ ಜೂನ್-26 ರೊಳಗೆ ಅರ್ಜಿಯನ್ನು ಭರ್ತಿ ಮಾಡಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮಾಧಿಕಾರಿಗಳ ಕಛೇರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಕೊಠಡಿ ಸಂಖ್ಯೆ:207, 2ನೇ ಮಹಡಿ, ಜಿಲ್ಲಾಡಳಿತ ಭವನ, ಬೀರಸಂದ್ರ, ಗ್ರಾಮ, ಕುಂದಾಣ ಹೋಬಳಿ,ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ದೂರವಾಣಿ ಸಂಖ್ಯೆ:080-29787452 ಸಂಪರ್ಕಿಸಬಹುದು ಎಂದು ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪರಿಶಿಷ್ಟ ಜಾತಿ ಸಮಗ್ರ ಸಮೀಕ್ಷೆ ಕಾರ್ಯ ಪರಿಶೀಲನೆ

**ಬೆಂಗಳೂರು:** ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವ ಕೆ.ಹೆಚ್.ಮುನಿಯಪ್ಪ ಅವರು ಮೇ 28 ರಂದು ರಾಜ್ಯಾದ್ಯಂತ ನಡೆಯುತ್ತಿರುವ ಪರಿಶಿಷ್ಟ ಜಾತಿ ಸಮಗ್ರ ಸಮೀಕ್ಷೆಯ ಕಾರ್ಯವಿಧಾನಗಳನ್ನು ಬೆಂಗಳೂರು ನಗರದ ಪ್ರಮುಖ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲಿಸಲಿದ್ದಾರೆ.

ಪರಿಶಿಷ್ಟ ಜಾತಿ ಸಮಗ್ರ ಸಮೀಕ್ಷೆ ಕಾರ್ಯವು ಮೇ 5ರಿಂದ ರಾಜ್ಯಾದ್ಯಂತ ನಡೆಯುತ್ತಿದ್ದು, ಸಮೀಕ್ಷೆಯ ಕಾರ್ಯವಿಧಾನಗಳನ್ನು ಖುದ್ದು ಪರಿಶೀಲನೆ ಮಾಡಲು, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವ ಕೆ.ಹೆಚ್.ಮುನಿಯಪ್ಪ ಅವರು ಮೇ 28 ರಂದು ಬೆಳಿಗ್ಗೆ 9.00 ಗಂಟೆಯಿಂದ ಬೆಂಗಳೂರು ನಗರದ ಗೆದ್ದಲಹಳ್ಳಿ (ಸಂಜಯನಗರ), ಬ್ಯಾಟರಾಯಣಪುರ, ಯಲಹಂಕ, ಯಶವಂತಪುರ, ಮಲ್ಲೇಶ್ವರಂ, ಪ್ಯಾಲೆಸ್ ಗುಟ್ಟಹಳ್ಳಿ ಭೇಟಿ ನೀಡಲಿದ್ದಾರೆ ಎಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವಾಲಯದ ಪ್ರಕಟಣೆ ತಿಳಿಸಿದೆ.

## ವ್ಯಕ್ತಿ ಪತ್ತೆಗೆ ಮನವಿ

**ರಾಮನಗರ:** ಚನ್ನಪಟ್ಟಣ ಟೌನಿನ ಎಲೆಕೇರಿಯ ರಾಮಮಂದಿರ ಬೀದಿಯ ನಿವಾಸಿ ಪುಟ್ಟಸ್ವಾಮಿ (58 ವ?ರ್ಗ) ಕಾಣೆಯಾಗಿದ್ದಾರೆ ಎಂದು ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ. ಚಹರೆ ವಿವರ: ಸಾಧಾರಣ ಮೈಕಟ್ಟು, ಕಪ್ಪು ಮೈ ಬಣ್ಣ, 5.8 ಅಡಿ ಎತ್ತರ, ಕೋಲುಮುಖ, ಇವರು ಕಾಣೆಯಾಗುವಾಗ ನೀಲಿ ಬಣ್ಣದ ಶರ್ಟ್ ಹಾಗೂ ನೀಲಿ ಬಣ್ಣದ ಪಂಚೆ ಧರಿಸಿರುತ್ತಾರೆ. ಇವರು ಕಂಡು ಬಂದರೆ ಆರಕ್ಷಕ ಉಪ ನಿರೀಕ್ಷಕರು, ಚನ್ನಪಟ್ಟಣ ಪೂರ್ವ ಪೊಲೀಸ್ ಠಾಣೆ, ಚನ್ನಪಟ್ಟಣ, ರಾಮನಗರ ಜಿಲ್ಲೆ ಇವರನ್ನು ಸಂಪರ್ಕಿಸುವಂತೆ ಕೋರಲಾಗಿದೆ.

## ಹಾಸ್ಟೆಲ್ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮೈಸೂರು: ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ ಮತ್ತು ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ 2025-26 ನೇ ಸಾಲಿಗೆ ಆನ್ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ವಿದ್ಯಾರ್ಥಿಯ ಪೋಷಕರ ವಾರ್ಷಿಕ ಆದಾಯ ಮಿತಿ: ಪ್ರವರ್ಗ-1, ಎಸ್.ಸಿ ಎಸ್.ಟಿ. ರೂ. 2.50 ಲಕ್ಷ, ಪ್ರವರ್ಗ-2ಎ, 2ಬಿ, 3ಎ, 3ಬಿ, ಇತರೆ ಹಿಂದುಳಿದ, ವರ್ಗ ಹಾಗೂ ಇತರೆ ರೂ. 1.00 ಲಕ್ಷದೊಳಗಿರಬೇಕು. ಇಲಾಖೆಯ ವೆಬ್‌ಸೈಟ್ https://shp.karnataka.gov.in/bcwd ನ್ನು ಸಂಪರ್ಕಿಸಿ ಆನ್‌ಲೈನ್ ನಲ್ಲಿ ಅರ್ಜಿಯನ್ನು ಸಲ್ಲಿಸಬೇಕು. ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಜೂನ್ 16 ಕೊನೆಯ ದಿನಾಂಕವಾಗಿರುತ್ತದೆ.

ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್ಸೈಟ್ https://bcwd.karnataka.gov.in/ನ್ನು ನೋಡಬಹುದು. ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bcwdhelpline@gmail.comಮುಖಾಂತರ ಅಥವಾ ಜಿಲ್ಲಾ/ತಾಲ್ಲೂಕು ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸುವುದು.

ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ 8050770004 ಮತ್ತು 8050770005 ಸಂಪರ್ಕಿಸಬಹುದು ಎಂದು ಕೆ.ಆರ್.ನಗರ ತಾಲ್ಲೂಕಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಡಿಸಿಸಿ ಬ್ಯಾಂಕಿನ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಬಹುಮತ | ಶಾಸಕ ಕೊತ್ತೂರು ಮಂಜುನಾಥ್ ಮಾಹಿತಿ

# ವಿಶ್ವಾಸ ದ್ರೋಹ ಆಗದಂದೆ ಡಿಸಿಸಿ ಆಡಳಿತ



**ಕೋಲಾರ:** ಡಿಸಿಸಿ ಬ್ಯಾಂಕಿನ ಚುನಾವಣೆಯಲ್ಲಿ ಬಹುಮತವನ್ನು ಕಾಂಗ್ರೆಸ್ ಪಕ್ಷ ಪಡೆದುಕೊಂಡಿದೆ. ಡಿಸಿಸಿ ಬ್ಯಾಂಕಿನಲ್ಲಿ ನಡೆದಿರುವ ಅವ್ಯವಹಾರಗಳನ್ನು ತನಿಖೆ ನಡೆಸಿ ಸರಿಪಡಿಸಲು ಮತದಾರರು ಕಾಂಗ್ರೆಸ್ ಅಭ್ಯರ್ಥಿಗಳನ್ನು ಗೆಲ್ಲಿಸಿದ್ದಾರೆ . ಅವರ ವಿಶ್ವಾಸಕ್ಕೆ ದ್ರೋಹ ಆಗದಂದೆ ಡಿಸಿಸಿ ಆಡಳಿತ ನಡೆಯಲಿದೆ ಎನ್ನುವ ವಿಶ್ವಾಸ ಇದೆ ಎಂದು ಶಾಸಕ ಕೊತ್ತೂರು ಮಂಜುನಾಥ್ ಹೇಳಿದರು.

ಡಿಸಿಸಿ ಬ್ಯಾಂಕಿನ ಚುನಾವಣೆ ನಂತರ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದರು ಡಿಸಿಸಿ ಬ್ಯಾಂಕಿನ ಆಡಳಿತ ಮಂಡಳಿ 18 ನಿರ್ದೇಶಕರುಗಳ ಚುನಾವಣೆಯಲ್ಲಿ ಸ್ಪರ್ದಿಸಿದ್ದ. ಆರು ಅಭ್ಯರ್ಥಿಗಳು ಅವಿರೋದವಾಗಿ ಆಯ್ಕೆಯಾಗಿದ್ದಾರೆ. ಉಳಿದ 12 ಸ್ಥಾನಕ್ಕೆ ಚುನಾವಣೆ ನಡೆದಿದೆ. ಮುಳಬಾಗಿಲು ಜೆಡಿಎಸ್ ಒಂದು ಮತದಿಂದ ಗೆಲುವು ಸಾಧಿಸಿದೆ ಮೈತ್ರಿ ಪಕ್ಷ ಮಂಜೇನಹಳ್ಳಿ ಗುಡಿಬಂಡೆ ಯಲ್ಲಿ ಗೆದ್ದಿದೆ ಉಳಿದ ಎಲ್ಲಾ ಕ್ಷೇತ್ರಗಳಲ್ಲಿ ಕಾಂಗ್ರೇಸ್ ಗೆದ್ದಿದೆ ಎಂದರು.

ಡಿಸಿಸಿ ಬ್ಯಾಂಕಿನ ಆಡಳಿತ ಹಿಂದೆ ಯಾವ ರೀತಿ ನಡೆಯುತ್ತಿತ್ತು ಅದೇ ರೀತಿಯಲ್ಲಿ ನಡೆಸುಕೊಂಡು ಹೋಗಲಾಗುವುದು ಹದಗೆಟ್ಟಿರುವುದನ್ನು ಸರಿಪಡಿಸುವ ನಿಟ್ಟಿನಲ್ಲಿ ಕಾಂಗ್ರೇಸ್ ಪಕ್ಷ ಸ್ಪಷ್ಟ ಬಹುಮತ ಸಾಧಿಸಿದೆ ಎಂದರು.

ಕಾಂಗ್ರೆಸ್ ನಲ್ಲಿ ಯಾವುದೇ ಗುಂಪುಗಳಿಲ್ಲ ಕೆಲವರು ವೈಯುಕ್ತಿಕವಾಗಿ ಕಾಂಗ್ರೆಸ್ ನಲ್ಲಿ ಗುಂಪುಗಳಿವೆ ಎಂದುಕೊಂಡರೆ ನಾವೇನು ಮಾಡಲು ಸಾಧ್ಯವಿಲ್ಲ, ಬ್ಯಾಲಹಳ್ಳಿ ಗೌವಿಂದಗೌಡರು ಯಾವ ಪಕ್ಷ ಎನ್ನುವುದು ನಮಗೆ ಗೊತ್ತಿಲ್ಲ ಡಿಸಿಸಿ ಬ್ಯಾಂಕಿನ ನಾಲ್ಕು ನಿರ್ದೇಶಕರ ಫಲಿತಾಂಶ ನ್ಯಾಯಾಲಯದಲ್ಲಿದೆ ಆ ಪೈಕಿ ಕೋಲಾರದ ಒಂದು ಕ್ಷೇತ್ರ, ಚಿಂತಾಮಣಿ ಚಿಕ್ಕಬಳ್ಳಾಪುರ ಸೇರಿದಂತೆ ಒಟ್ಟು ನಾಲ್ಕು ಸ್ಥಾನಗಳ ಬಾಕಿ ಇದೆ. ಈಗಾಗಲೇ ನಮಗೆ 10 ನಿರ್ದೇಶಕರುಗಳು ಆಯ್ಕೆಯಾಗಿದ್ದಾರೆ. ಅಧ್ಯಕ್ಷರಾಗುವುದಕ್ಕೆ ನಮಗೆ ಯಾವುದೇ ತೊಂದರೆ ಇಲ್ಲ ನಾವು ಅಧಿಕಾರ ಚುಕ್ಕಾಣಿ ಹಿಡಿಯುತ್ತೇವೆ ಎನ್ನುವ ವಿಶ್ವಾಸವಿದೆ ಎಂದು ತಿಳಿಸಿದರು.

ರಮೇಶ್ ಕುಮಾರ್ ಯಾರನ್ನು ಬೆದರಿಸುವ ಮಟ್ಟಕ್ಕೆ ಹೋಗುವ ವ್ಯಕ್ತಿಯಲ್ಲ ಅವರ ಆ ರೀತಿ ಮಾಡಿದ್ದರೆ ದೂರು ನೀಡಲಿ ಅದನ್ನು ಪೋಲೀಸರು ತನಿಖೆ ಮಾಡುತ್ತಾರೆ. ಯಾರನ್ನು ಯಾರೇ ಬೆದರಿಕೆ ಹಾಕಿದರೆ ಸಹಿಸುವ ಮಾತೇ ಇಲ್ಲ, ಲೋಕಾಯುಕ್ತ ಸಂಸ್ಥೆಯನ್ನು ಮಾಜಿ ಸ್ಪೀಕರ್ ರಮೇಶ್ ಕುಮಾರ್ ಕಳುಹಿಸಿದರೆ ಬರುವವರಲ್ಲ ಅದು ಸರ್ಕಾರ ಒಂದು ಸಂಸ್ಥೆ ಲೋಕಾಯುಕ್ತಕ್ಕೆ ಡಿಸಿಸಿ ಬ್ಯಾಂಕಿನಲ್ಲಿ ನಡೆದಿರುವ ಅವ್ಯವಹಾರ ಕುರಿತು ದೂರು ಸಲ್ಲಿಸಿದ್ದರು ಅದರಂತೆ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಿದ್ದಾರೆ. ಯಾರೋ ಹೇಳಿದ್ದಾರೆ ಎಂದು ಲೋಕಾಯುಕ್ತರು ದಾಳಿ ನಡೆಸುತ್ತಾರೆ ಎನ್ನುವುದು ಸುಳ್ಳು, ಇತ್ತೀಚೆಗೆ ಗೃಹ ಮಂತ್ರಿ ಡಾ.ಜು ಪರಮೇಶ್ವರ್ ಅವರ ಮನೆ ಹಾಗೂ ಸಂಸ್ಥೆಗಳ ಮೇಲೆ ಇಡಿ ರೈಡ್ ಮಾಡಲಾಗಿದೆ ಮಾಲೂರು ಶಾಸಕ ನಂಜೇಗೌಡ ಮನೆ ಹಾಗೂ ಕೋಮುಲ್ ಮೇಲೆ ಇಡಿ ರೈಡ್ ಹಾಗಿದೆ ದೂರು ಸಲ್ಲಿಕೆ ಆದಾಗ ತನಿಖೆ ನಡೆಸುವುದು ಅವರ ಕೆಲಸ ಅದನ್ನ ಮಾಡುತ್ತಾರೆ ಖುದ್ದಾಗಿ ರಮೇಶ್ ಕುಮಾರ್ ಲೋಕಾಯುಕ್ತ ಅಧಿಕಾರಿಗಳಿಗೆ ದೂರವಾಣಿ ಕರೆ ಮಾಡಿ ಒತ್ತಡ ಹಾಕಿದ್ದಾರೆ ಅಂದರೆ ಅವರನ್ನು ಒಳಗೊಂಡು ದೂರು ನೀಡಲಿ ಎಂದು ಬ್ಯಾಲಹಳ್ಳಿ ಗೋವಿಂದಗೌಡರಿಗೆ ತಿರುಗೇಟು ನೀಡಿದರು.

ನ್ಯಾಯಾಲಯದಲ್ಲಿರುವ ಸ್ಥಾನಗಳನ್ನು ಹದಿನೈದು ದಿನದಲ್ಲಿ ಇತ್ಯಾರ್ಥವಾಗುತ್ತದೆ. ನಾಲ್ಕು ಸ್ಥಾನಗಳಿಗೆ ಮತದಾನ ನಡೆದಿದೆ ನ್ಯಾಯಾಲಯದಿಂದ ಅದೇಶ ಬಂದ ನಂತರ ಫಲಿತಾಂಶ ಪ್ರಕಟವಾಗಲಿದೆ. ಎಂದರು.

ಎರಡು ಜಿಲ್ಲೆಯ ಶಾಸಕರು, ಜಿಲ್ಲಾ ಉಸ್ತುವಾರಿ ಮಂತ್ರಿಗಳು ಕಾಂಗ್ರೇಸದ ಹೈಕಮಾಂಡ್ ಚರ್ಚೆ ನಡೆಸಿ ಅಧ್ಯಕ್ಷ ಸ್ಥಾನಕ್ಕೆ ಯಾರನ್ನು ಆಯ್ಕೆ ಮಾಡುತ್ತಾರೆ ಅವರು ಅಧ್ಯಕ್ಷರಾಗುತ್ತಾರೆ ಎಂದು ಹೇಳಿದರು.

ನಾಲ್ಕು ಸ್ಥಾನ ಬಿಟ್ಟರೆ ಉಳಿದ ಎಲ್ಲಾ ಕ್ಷೇತ್ರಗಳಲ್ಲಿ ಆಯ್ಕೆಯಾಗಿರುವವರು ನಮ್ಮ ಪಕ್ಷದವರು ಹೀಗಿರುವಾಗ ಅಧ್ಯಕ್ಷ ಸ್ಥಾನಕ್ಕೆ ನಾವು ಯಾಕೆ ಬ್ಯಾಲಹಳ್ಳಿ ಗೋವಿಂದಗೌಡರ ಅವರ ಸಹಕಾರ ಕೋರಲಿ ನಮಗೆ ಅದರ ಅವಶ್ಯಕಥೆ ಇಲ್ಲ,

ರಾಮಕ್ಕನವರು ನಮಗೆ ಮಾನವೀಯತೆಯಿಂದ ಸಹಾಯ ಮಾಡಿದ್ದಾರೆ ಅದರಂತೆ ಕೆಜಿಎಫ್ ಮಾಜಿ ಶಾಸಕ ವೈ ಸಂಪಂಗಿ ಅವರ ಪುತ್ರ ಪ್ರವೀಣ್ ಕುಮಾರ್ ಡಿಸಿಸಿ ಬ್ಯಾಂಕಿನ ಚುನಾವಣೆಗೆಸಲ್ಲಿಸಿದ್ದ ನಾಮಪತ್ರವನ್ನು ವಾಪಸ್ ಪಡೆದಿದ್ದಾರೆ ಅದು ಬಿಟ್ಟರೆ ಯಾವುದೇ ಪಾತ್ರ, ಬಿಜೆಪಿಯವರನ್ನು ನಮಗೆ ಇಲ್ಲ ಡಿಸಿಸಿ ಬ್ಯಾಂಕಿನ ಚುನಾವಣೆಯಲ್ಲಿ ಬಿಜೆಪಿಯವರು ಕಾಂಗ್ರೇಸದ ಸಹಕಾರಿಸಿದ್ದಾರೆ ಎನ್ನುವುದು ಸುಳ್ಳು ಎಂದು ಸ್ಪಷ್ಟನೆ ನೀಡಿದರು.

ನಮ್ಮಲ್ಲಿ ಯಾವುದೇ ಪಟಾಲಂ ಇಲ್ಲ ಬಂಗಾರಪೇಟೆ ಶಾಸಕ ಎಸ್.ಎನ್ ನಾರಾಯಣಸ್ವಾಮಿ ನಾನು ಸೀನಿಯರ್ ಅಂತಾರೆ ಅವರು ಎಲ್ಲರನ್ನೂ ಕೂರಿಸಿ ಮಾತನಾಡಬೇಕು ಯಾಕೆ ನೀವು ಜ್ಯೂನಿಯರ್ ಗಳ ಜೊತೆ ಚರ್ಚೆಗಳನ್ನು ನಡೆಸುತ್ತಿಲ್ಲ ಅವರು ನಮ್ಮಗಳ ಮೇಲೆ ಆರೋಪ ಮಾಡಿದ್ದಾರೆ ವಿನಃ ನಾನು ಅವರ ವಿರುದ್ದ ಈ ವರೆಗೂ ಆರೋಪಗಳನ್ನು ಮಾಡಿಲ್ಲ. ಚುನಾವಣೆ ಅಂದ ಮೇಲೆ ಒಬ್ಬರು ಗೆಲ್ಲಲ್ಲೇ ಬೇಕು ಇನ್ನೊಬ್ಬರು ಸೋಲಲೇ ಬೇಕು, ಗೌಡರದ್ದು ನಮಗೆ ಗೊತ್ತಿಲ್ಲ ಯಾವ ಪಕ್ಷ ಅಂತಾನೂ ಗೊತ್ತಿಲ್ಲ ಎಂದರು.

### ನೀವೆ ಹೇಳಬೇಕು

**ಚಂದ್ರಾರೆಡ್ಡಿ ಸೇರ್ಪಡೆ ವಿಚಾರ ಪಕ್ಷದ ಹೈಕಾಮಾಂಡ್ಗೆ ಬಿಟ್ಟ ವಿಚಾರ ಅವರ ತೀರ್ಮಾನದಂತೆ ಪಕ್ಷಕ್ಕೆ ಸೇರ್ಪಡೆಯಾಗಿದ್ದಾರೆ. ನಾನು ಡಿಸಿಸಿ ಬ್ಯಾಂಕಿಗೆ ನಾಮಿನಿ ನಿರ್ದೇಶಕನಾಗಿ ಬರುತ್ತೇನೆ. ಕಳೆದ ಎರಡು ಅವದಿಗೆ ಕೆಜಿಎಫ್ ಶಾಸಕಿ ರೂಪಕಲಾ ಶಶಿಧರ್ ಅವರು ಕ್ಷೇತ್ರದಿಂದ ಚುನಾಯಿತರಾಗಿ ಡಿಸಿಸಿ ಬ್ಯಾಂನ ನಿರ್ದೇಶಕರಾಗಿದ್ದಾರೆ, ಅಂದು ಶಾಸಕರು ಡಿಸಿಸಿ ಬ್ಯಾಂಕಿನ ನಿರ್ದೇಶಕರ ಸ್ಥಾನಕ್ಕೆ ಸ್ಪರ್ದೆ ವಿಚಾರ ಅಂದು ಇಲ್ಲದ ಪ್ರಶ್ನೆ ಶಾಸಕ ಕೊತ್ತೂರು ಮಂಜನಾಥ್ ಬಾಗೇಪಲ್ಲಿ ಶಾಸಕ ಸುಬ್ಬಾರೆಡ್ಡಿ ಸ್ಪರ್ದೆಮಾಡಿದಾಗ ಯಾಕೆ ಬಂತು ನನಗೆ ಅರ್ಥ ಆಗುತ್ತಿಲ್ಲ. ಅದನ್ನು ನೀವೆ ಹೇಳಬೇಕು ಎಂದು ಎಂ. ಎಲ್.ಸಿ ಅನೀಲ್ ಪ್ರಶ್ನಿಸಿದರು. ಪತ್ರಿಕಾಗೋಷ್ಠಿಯಲ್ಲಿ ಮಾಲೂರು ಶಾಸಕರಾದ ಕೆ ವೈ ನಂಜೇಗೌಡ ,ಎಂಎಲ್ಸಿ ಅನಿಲಕುಮಾರ್, ಡಿಸಿಸಿ ಬ್ಯಾಂಕ್ ನೂತನ ನಿರ್ದೇಶಕ ಮೋಹನ್ ರೆಡ್ಡಿ, ಕೋಚಿಮುಲ್ ಮಾಜಿ ಅಧ್ಯಕ್ಷ ಬ್ಯಾಟಪ್ಪ, ಮಾಜಿ ನಿರ್ದೇಶಕ ಊಲವಾಡಿ ಬಾಬು, ವೆಂಕಟೇಶ್, ಮುಖಂಡರಾದ ಸೀಸಂದ್ರ ಗೋಪಾಲಗೌಡ, ನಂದಿನಿ ಪ್ರವೀಣ್, ಮೈಲಾಂಡಹಳ್ಳಿ ಮುರಳಿ, ಮುಂತಾದವರು ಇದ್ದರು.**

# ಶ್ರೀರಂಭಾಪುರಿ ಜಗದ್ಗುರುಗಳ ಜೂನ್ ಪ್ರವಾಸ ವಿವರ



**ಶ್ರೀರಂಭಾಪುರಿ ಪೀಠ :** ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳವರ 2025ನೇ ಸಾಲಿನ ಜೂನ್ ಮಾಹೆಯ ಪ್ರವಾಸ ಕಾರ್ಯಕ್ರಮ ಈ ಕೆಳಗಿನಂತಿದೆ. ದಿನಾಂಕ 3 ರಂದು ಶಿವಮೊಗ್ಗದಲ್ಲಿ ಶ್ರೀ ೀ ಜಗದ್ಗುರು ಪಂಚಾಚಾರ್ಯ ಯುಗಮಾನೋತ್ಸವ, 4ರಂದು ವಿಜಯಪುರ ಜಿಲ್ಲೆ ದೇವರಹಿಪ್ಪರಗಿಯಲ್ಲಿ ಜಡಿಮಠ ಶ್ರೀಗಳವರ ಪಟ್ಟಾಧಿಕಾರದ ರಜತ ಮಹೋತ್ಸವ ಸಮಾರಂಭ, 6ರಂದು ಹಾಸನ ಜಿಲ್ಲೆ ಆಲೂರು ತಾಲೂಕಿನ ಕಾರ್ಜುವಳ್ಳಿ ಹಿರೇಮಠದಲ್ಲಿ ರಜತ ಸಂಚಿಕೆ ಬಿಡುಗಡೆ ಮತ್ತು ಇಷ್ಟಲಿಂಗ ಮಹಾಪೂಜಾ, 7ರಂದು ಅಜ್ಜಂಪುರ ತಾಲೂಕ ಹಣ್ಣೆಮಠದಲ್ಲಿ ಧರ್ಮ ಜಾಗೃತಿ ಸಮಾರಂಭ, 8ರಂದು ಕೊರಟಗೆರೆ ತಾಲೂಕ ಸಿದ್ಧರಬೆಟ್ಟ ಕ್ಷೇತ್ರದಲ್ಲಿ ವೀರಭದ್ರ ಶ್ರೀಗಳವರ ಪಟ್ಟಾಧಿಕಾರದ ವರ್ಧಂತಿ ಹಾಗೂ ಸಾಮೂಹಿಕ ವಿವಾಹ ಸಮಾರಂಭದ ಸಾನ್ನಿಧ್ಯ ವಹಿಸುವರು. ದಿನಾಂಕ 9ರಂದು ಮೈಸೂರಿನಲ್ಲಿ ಇಷ್ಟಲಿಂಗ ಮಹಾಪೂಜಾ, 10ರಂದು ಭದ್ರಾವತಿ ತಾಲೂಕ ಹನುಮಂತಪುರದಲ್ಲಿ ಇಷ್ಟಲಿಂಗ ಮಹಾಪೂಜಾ ನಡೆಸುವರು. ದಿನಾಂಕ 11ರಂದು ಬಾಳೆಹೊನ್ನೂರು ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ಪೌರ್ಣಿಮೆಯ ನಿಮಿತ್ಯ ವಾಸ್ತವ್ಯವಿದ್ದು ಭಕ್ತಾದಿಗಳಿಗೆ ದರ್ಶನಾಶೀರ್ವಾದ ನೀಡುವರು. ದಿನಾಂಕ 13ರಂದು ಚಿಕ್ಕಮಗಳೂರಿನಲ್ಲಿ ಶ್ರೀ ಜಗದ್ಗುರು ರೇಣುಕ-ಬಸವ ಜಯಂತಿ ಸಮಾರಂಭ, 14ರಂದು ಕಡೂರು ತಾಲೂಕ ಹುಲಿಕೆರೆಯಲ್ಲಿ ವಿರೂಪಾಕ್ಷಲಿಂಗ ಶ್ರೀಗಳವರ 80ನೇ ವರ್ಷದ ಜನ್ಮ ದಿನೋತ್ಸವ ಸಮಾರಂಭ, 15ರಂದು ಅಜ್ಜಂಪುರ ತಾಲೂಕ ಬಗ್ಗವಳ್ಳಿ ಗ್ರಾಮದಲ್ಲಿ ಇಷ್ಟಲಿಂಗ ಮಹಾಪೂಜಾ, 16 ಮತ್ತು 17ರಂದು ಕೊಪ್ಪಳ ತಾಲೂಕ ಹುಲಿಗಿಯಲ್ಲಿ ಪುರ ಪ್ರವೇಶ-ಇಷ್ಟಲಿಂಗ ಮಹಾಪೂಜಾ ನೆರವೇರಿಸುವರು. ದಿನಾಂಕ 19ಮತ್ತು 20ರಂದು ಮಹಾರಾಷ್ಟ್ರ ರಾಜ್ಯದ ಜತ್ ತಾಲೂಕಿನ ಸುಸಲಾದಿ ಗ್ರಾಮದಲ್ಲಿ ಪುರ ಪ್ರವೇಶ ಮತ್ತು ಶ್ರೀ ಮಲ್ಲಯ್ಯನ ಗುಡಿ ಉದ್ಘಾಟನೆ-ಕಳಸಾರೋಹಣ, 22ರಂದು ತಮಿಳು ನಾಡಿನ ಕಾಟೇರಿಯಲ್ಲಿ ಶಾಲಾ ಶತಮಾನೋತ್ಸವ ಸಮಾರಂಭದ ಸಾನ್ನಿಧ್ಯ ವಹಿಸುವರು. ದಿನಾಂಕ 26ರಂದು ಕೋಲಾರ ಜಿಲ್ಲೆ ಬೆಳ್ಳಾವಿಯಲ್ಲಿ ಇಷ್ಟಲಿಂಗ ಮಹಾಪೂಜಾ, 27ರಂದು ಬೆಂಗಳೂರಿನಲ್ಲಿ ಇಷ್ಟಲಿಂಗ ಮಹಾಪೂಜಾ, 28ರಂದು ಬೆಂಗಳೂರು ಜೆ.ಪಿ,ನಗರದಲ್ಲಿ ಇಷ್ಟಲಿಂಗ ಮಹಾಪೂಜಾ-ಧರ್ಮ ಸಮಾರಂಭ, 29ರಂದು ಬೆಂಗಳೂರು ನಗರದ ಭಾರತಿ ನಗರದಲ್ಲಿ ಧರ್ಮ ಸಮಾರಂಭ-ಮಹಾಪೂಜಾ ಹಾಗೂ 30ರಂದು ಬೆಂಗಳೂರು ಗ್ರಾಮಾಂತರ ಜಿಲ್ಲೆ ಹೊಸಕೋಟೆಯಲ್ಲಿ ಇಷ್ಟಲಿಂಗ ಮಹಾಪೂಜಾ ಹಾಗೂ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸುವರು. ಶ್ರೀ ರಂಭಾಪುರಿ ಜಗದ್ಗುರುಗಳವರ ಧಾರ್ಮಿಕ ಕಾರ್ಯಕ್ರಮಗಳ ಲಾಭವನ್ನು ಸಮಸ್ತ ಜನತೆ ಪಡೆದುಕೊಳ್ಳಬೇಕೆಂದು ಶ್ರೀ ಜಗದ್ಗುರು ರಂಭಾಪುರಿ ಪೀಠದ ವಾರ್ತಾ ಸಂಯೋಜನಾಧಿಕಾರಿ ಸಿ.ಎಚ್.ಬಾಳನಗೌಡ್ರ ತಿಳಿಸಿದ್ದಾರೆ.

## ಕಾಂಗ್ರೆಸ್ ಅಭ್ಯರ್ಥಿ ಹೆಚ್.ವಿ.ವಿನೋದ್ ಕುಮಾರ್ ಗೆಲುವು; ಸಂಭ್ರಮಾಚರಣೆ

**ಕೋಲಾರ:** ತೀವ್ರ ಕುತೂಹಲ ಕೆರಳಿಸಿದ್ದ ಕೋಲಾರ ಚಿಕ್ಕಬಳ್ಳಾಪುರ ಡಿಸಿಸಿ ಬ್ಯಾಂಕ್ ಆಡಳಿತ ಮಂಡಳಿಯ 12 ಸ್ಥಾನಗಳಿಗೆ ನಡೆದ ಚುನಾವಣೆ ಮುಗಿದು ಫಲಿತಾಂಶ ಘೋಷಣೆಯಾಗಿದ್ದು, ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘದ ಮಾಲೂರು ತಾಲೂಕಿನ ಕಾಂಗ್ರೆಸ್ ಅಭ್ಯರ್ಥಿ ಹೆಚ್.ವಿ.ವಿನೋದ್ ಕುಮಾರ್ 65 ಮತ ಪಡೆದು ತಮ್ಮ ಪ್ರತಿಸ್ಪರ್ಧಿ ಕೆ.ಶಿವಾನಂದ 59 ಮತ ಪಡೆದಿದ್ದು, ಅವರ ವಿರುದ್ಧ ಆರು ಮತಗಳಿಂದ ವಿಜಯಶಾಲಿಯಾಗಿದ್ದಾರೆ.

ಕಾಂಗ್ರೆಸ್ ಕಾರ್ಯಕರ್ತರು, ಬೆಂಬಲಿಗರು ಮತ್ತು ಅಭಿಮಾನಿಗಳು ಹೆಚ್.ವಿ.ವಿನೋದ್ ಕುಮಾರ್ ರನ್ನು ಮೆರವಣಿಗೆ ಮಾಡಿ, ಪಟಾಕಿ ಸಿಡಿಸಿ ವಿಜಯೋತ್ಸವ ಆಚರಿಸಿದರು.

ಈ ವೇಳೆ ಮಾತನಾಡಿದ ಹೆಚ್.ವಿ.ವಿನೋದ್ ಕುಮಾರ್, ಮಾಲೂರು ಶಾಸಕ ಕೆ.ವೈ.ನಂಜೇಗೌಡ ಅವರ ನೇತೃತ್ವ, ಮಾಜಿ ಸ್ಪೀಕರ್ ರಮೇಶ್ ಕುಮಾರ್ ಅವರ ಆಶೀರ್ವಾದ, ಕೋಲಾರ ಶಾಸಕ ಕೊತ್ತೂರು ಮಂಜುನಾಥ್ ಹಾಗೂ ಎಂಎಲ್ಸಿ ಅನಿಲ್ ಕುಮಾರ್ ಅವರ ಸಹಕಾರದಿಂದ ಇಂದು ಡಿಸಿಸಿ ಬ್ಯಾಂಕ್ ನಿರ್ದೇಶಕನಾಗಿದ್ದೇನೆ. ಜಿಲ್ಲೆಯ ರೈತರ ಹಿತ ಹಾಗೂ ಅವರ ಅಭಿವೃದ್ಧಿಗೆ ದುಡಿಯುತ್ತೇನೆ. ನನಗೆ ಮತ ನೀಡಿದ ಎಲ್ಲರಿಗೂ ಧನ್ಯವಾದ ಸಲ್ಲಿಸುತ್ತೇನೆ ಎಂದರು.

ಕಾಂಗ್ರೆಸ್ ಮುಖಂಡ ಸತೀಶ್ ರಾಜಣ್ಣ ಮಾತನಾಡಿ, ಮಾಲೂರಿನ ಶಾಸಕ ನಂಜೇಗೌಡರ ಬೆಂಬಲದಿಂದ ವಿನೋದ್ ಕುಮಾರ್ ಅವರು ವಿಜಯನಗೆ ಬೀರಿದ್ದಾರೆ. ಇವರ ಅಧಿಕಾರಕ್ಕೆ ಕಳಂಕ ಬರದಂತೆ ರೈತರ ಹಿತವನ್ನು ಕಾಪಾಡುತ್ತಾರೆ. ರೈತರಿಗೆ ಬೇಕಾದ ಎಲ್ಲಾ ರೀತಿಯ ಅನುಕೂಲವನ್ನು ಮಾಡಿಕೊಡುತ್ತಾರೆ. ಇವರನ್ನು ಬೆಂಬಲಿಸಿ ಮತ ನೀಡಿದಯೇಲ್ಲರಿಗೂ ಧನ್ಯವಾದ ಅರ್ಪಿಸುತ್ತೇನೆ ಎಂದರು. ಅನೇಕ ಕಾಂಗ್ರೆಸ್ ಮುಖಂಡರು ಕಾರ್ಯಕರ್ತರು ಬೆಂಬಲಿಗರು ಅಭಿಮಾನಿಗಳು ಹಾಜರಿದ್ದರು.



## ಕಾರ್ಮಿಕರಿಗೆ ಆರ್.ಪಿ.ಎಲ್ ಕಿಟ್ ವಿತರಣೆ




**ಚಿಕ್ಕಬಳ್ಳಾಪುರ:** ಶ್ರೀ ಕಾವೇರಿ ಕಟ್ಟಡ ನಿರ್ಮಾಣ ಕಾರ್ಮಿಕರ ಸಂಘವು ಕಾರ್ಮಿಕರ ಪರವಾಗಿ ನಿಂತು ಸಿಗಬೇಕಾದ ಸೌಲಭ್ಯಗಳನ್ನು ಕಾಲ ಕಾಲಕ್ಕೆ ದೊರಕಿಸಿಕೊಡುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡುತ್ತಿದೆ ಸಂಘದ ಕಾರ್ಮಿಕರ ಹಿತದೃಷ್ಟಿಯಿಂದ ಸೌಲಭ್ಯಗಳನ್ನು ಒದಗಿಸಲು ಸಂಘ ಮುಂದಾಗಿದೆ ಇಂದು ಕಾರ್ಮಿಕರಿಗೆ ಸೇಫ್ಟಿ ಆರ್ ಪಿ ಎಲ್ ಕಿಟ್ ವಿತರಿಸಿದ್ದು ಸಂಘವು ಸದಾ ಕಾ?ರ್ಮಿಕ ಪರವಾಗಿ ನಿಲ್ಲಲಿದೆ ಎಂದು ಶ್ರೀ ಕಾವೇರಿ ಕಟ್ಟಡ ನಿರ್ಮಾಣ ಕಾರ್ಮಿಕರ ಸಂಘದ ಅಧ್ಯಕ್ಷರಾದ ಶಂಕರಪ್ಪ. ಕೆ ಹೇಳಿದರು.ಬುಧವಾರ ನಗರದ ಅಂಬೇಡ್ಕರ್ ಭವನದಲ್ಲಿ ಸಂಘದ ಎರಡನೇ ವಾರ್ಷಿಕೋತ್ಸವ ಮತ್ತು ಕಾರ್ಮಿಕ ದಿನಾಚರಣೆ,ಹಾಗು ಕಾರ್ಮಿಕರಿಗೆ ಆರ್.ಪಿ.ಎಲ್ ಕಿಟ್ ವಿತರಣೆ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸಂಘದ ಕಾನೂನು ಸಲಹೆಗಾರ ಸುನೀಲ್ ಕುಮಾರ್ ಮಾತನಾಡಿ ಕಾರ್ಮಿಕರು ಹಗಲು ರಾತ್ರಿ ಬಿಸಿಲು ಮಳೆ ಗಾಳಿಗೂ ಜಗ್ಗುವುದಿಲ್ಲ, ಕಠಿಣ ಪರಿಶ್ರಮ,ಸಮರ್ಪಣಾ ಭಾವಕ್ಕೆ ಇವರು ಸಾಕ್ಷಿ ಕಷ್ಟವನ್ನು ನುಂಗಿ ಖುಷಿ ಹಂಚುವವರು ಕಾರ್ಮಿಕರು ದೇಶ ಕಟ್ಟುವಲ್ಲಿ ಕಾರ್ಮಿಕರ ಪಾತ್ರ ಬಹಳಷ್ಟಿದೆ ತಮ್ಮ ದುಡಿಮೆಯಿಂದಲೇ ತಮ್ಮ ಕುಟುಂಬವನ್ನು ಮುನ್ನಡೆಸುವ ಕಾರ್ಮಿಕರು ತಾವು ದುಡಿಯುತ್ತಿರುವ ಸಂಸ್ಥೆಯ ಬೆಳವಣಿಗೆಗೂ ಕಾರಣವಾಗುತ್ತಾರೆ ಎಂದ ಅವರು ಇಂದು ಶ್ರೀ ಕಾವೇರಿ ಕಟ್ಟಡ ನಿರ್ಮಾಣ ಕಾರ್ಮಿಕರ ಸಂಘಕ್ಕೆ ಎರಡನೇ ವಾರ್ಷಿಕೋತ್ಸವ ಸಂಘವು ಕಾರ್ಮಿಕರಿಗೆ ಬೆನ್ನುಲುಬಾಗಿ ನಿಂತಿದೆ ಕಾರ್ಮಿಕರಿಗೆ ಸೌಲಭ್ಯಗಳನ್ನು ಒದಗಿಸಲು ಮುಂದಾಗಿದ್ದು ಮದುವೆಗಾಗಿ ಸಹಾಯಧನ,ಆರೋಗ್ಯಕ್ಕೆ ಮಕ್ಕಳ ವಿದ್ಯಾಭ್ಯಾಸಕ್ಕೆ ಸಹಾಯಧನ ಸೇರಿ ಎಲ್ಲ ರೀತಿಯ ಸೌಲಭ್ಯಗಳನ್ನು ಕಾರ್ಮಿಕ ಇಲಾಖೆ ವತಿಯಿಂದ ಕಲ್ಪಿಸಲಾಗುತ್ತಿದೆ ಎಂದರು.ಚಿಕ್ಕಬಳ್ಳಾಪುರ ಕಾರ್ಮಿಕರ ನಿರೀಕ್ಷರಾದ ಮಂಜುಳ ಅವರು ಕಾರ್ಯಕ್ರಮವನ್ನು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಚಂದ್ರಶೇಖರ್,ಸಂಘದ ಪದಾಧಿಕಾರಿಗಳಾದ ಸುಬ್ರಮಣಿಮಂಜುನಾಥ್,ಮುನೀರ್ ಖಾನ್,ಶ್ರೀನಿವಾಸ್,ಸಂತೋಷ ಕುಮಾರ್,ಮುನಿಕೃಷ್ಣ,ರಮೇಶ್,ಶಿವಕುಮಾರ್ ಚಾರಿ,ಲೆನಿನ್ ಕುಮಾರ್ ,ವರದರಾಜು,ಇತರರು ಹಾಜರಿದ್ದರು.

### ನ್ಯಾಯಮೂರ್ತಿ ಹಾಗೂ ಉಪಲೋಕಾಯುಕ್ತ ಬಿ.ವೀರಪ್ಪ ಸಲಹೆ

# ವಿದ್ಯಾರ್ಥಿಗಳು ದೇಶಾಭಿಮಾನ, ಪರಿಸರ ಪ್ರೇಮ ಬೆಳೆಸಿಕೊಳ್ಳಿ

**ಮಂಡ್ಯ:** ವಿದ್ಯಾರ್ಥಿಗಳು ಚಿಕ್ಕಂದಿನಿಂದಲೇ ದೇಶಾಭಿಮಾನ ಹಾಗೂ ಪರಿಸರ ಪ್ರೇಮವನ್ನು ಬೆಳಸಿಕೊಳ್ಳಿ ಎಂದು ನ್ಯಾಯಮೂರ್ತಿ ಹಾಗೂ ಉಪಲೋಕಾಯುಕ್ತ ಬಿ.ವೀರಪ್ಪ ತಿಳಿಸಿದರು.

ಜಿಲ್ಲಾಡಳಿತ ಮತ್ತುಅರಣ್ಯಇಲಾಖೆಯ ವತಿಯಿಂದ ಕರಿಘಟ್ಟದಲ್ಲಿ ಆಯೋಜಿಸಲಾಗಿದ್ದ ಗಿಡ ನೆಡುವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರವರು.ಕರಿಘಟ್ಟ ಬೆಟ್ಟದಲ್ಲಿಕಾಡಿನ ಮರಗಳಿಗೆ ಬೆಂಕಿಯಾಕಿದರೆ ಮಕ್ಕಳಾಗುತ್ತದೆ ಎಂಬ ಮೂಡನಂಬಿಕೆಯಿಂದ ಸಾರ್ವಜನಿಕರು ಹೊರಬರಬೇಕು. ಕಾಡಿನ ಮರಗಳಿಗೆ ಬೆಂಕಿ ಹಾಕುವ ಕೃತ್ಯಕಂಡುಬಂದಲ್ಲಿ ನಿರ್ದಾಕ್ಷಿಣ್ಯವಾಗಿಕ್ರಮ ಕೈಗೊಳ್ಳಿ ಎಂದುಅರಣ್ಯ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ನಾವೆಲ್ಲರೂ ಇಂದು ನೆಮ್ಮದಿಯಾಗಿ ಜೀವಿಸಲು ಕಾರಣ ನಮ್ಮದೇಶದ ಸೈನಿಕರು, ಸೈನಿಕರುತಮ್ಮಜೀವವನ್ನು ಪಣಕ್ಕಿಟ್ಟುದೇಶದ ನಾಗರೀಕರಕ್ಷಣೆಗಾಗಿ ಶ್ರಮಿಸುವವರು, ಇತ್ತೀಚೆಗೆ ನಡೆದ ಪೆಹಲ್ಗಾಂ ದಾಳಿಯಲ್ಲಿ ಹುತಾತ್ಮರಾದ ಯೋಧರಿಗೆಒಂದು ನಿಮಿಷ ಮೌನಾಚರಣೆ ಆಚರಿಸಿ ಗೌರವ ಸಲ್ಲಿಸಿದರು.

ಒಂದುಗಿಡವನ್ನು ಒಳ್ಳೆಯ ಮನಸ್ಸಿನಿಂದ ನೆಟ್ಟಿ ಬೆಳಸಿ ಗಿಡ-ಮರಗಳೆ ನಮ್ಮ ಮಕ್ಕಳಿದ್ದಂತೆ.ಮರಗಳಿಂದ ಉತ್ತಮ ವಾತಾವರಣ ಬೆಳೆಯುತ್ತದೆ.ಆರೋಗ್ಯ ವೃದ್ಧಿಸುತ್ತದೆ.ಪ್ರತಿಯೊಬ್ಬರುತಮ್ಮ ಮನೆಯ ಸುತ್ತಮುತ್ತಲು ಕನಿಷ್ಠ ಒಂದುಗಿಡವನ್ನು ನೆಟ್ಟಿ ಬೆಳಸಿ. ಇದೆ ಸಮಾಜಕ್ಕೆ ನಾವು ನೀಡುವ ದೊಡ್ಡ ಕೊಡುಗೆಎಂದರು.

ನಾವು ಪ್ರತಿಕ್ಷಣ ನೆನಯಬೇಕಾದದ್ದು ಸೈನಿಕರು.ಅವರುತಮ್ಮ ವೈಯಕ್ತಿಕ ಬದುಕನ್ನು ಬದಿಗಿಟ್ಟದೇಶದಜನತೆಯನ್ನುರಕ್ಷಿಸುತ್ತಿದಾದ್ರೆ ನಾವು ಅವರಿಗೆಚಿರರುಣಿಯಾಗಿರಬೇಕು. ದೇಶದ ಅಭಿವೃದ್ಧಿಗೆ ಬೇಕಿರುವ ಸಸ್ಯ ಸಂಪತ್ತನ್ನುರಕ್ಷಿಸಲು ಪಣತೊಡೋಣಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು. ಮನುಷ್ಯತನ್ನ ಸ್ವಾರ್ಥಕ್ಕಾಗಿ ಪ್ರಕೃತಿಯ ಮೇಲೆ ನಿರಂತರವಾಗಿ ದಾಳಿ ನಡೆಸಿಕೊಂಡು ಬರುತ್ತಿದ್ದರು ಪ್ರಕೃತಿ ನಿಸ್ವಾರ್ಥದಿಂದ ಮನುಕುಲಕ್ಕೆ ಗಾಳಿ, ನೀರು, ಬೆಳಕು, ಆಹಾರ ನೀಡಿರಕ್ಷಿಸುತ್ತಿದೆ, ಆದರೂ ಮನುಷ್ಯ ವನ್ಯಜೀವಿಗಳ ವಿರುದ್ಧ ಸುಮರ ಸಾರುತ್ತಿದ್ದಾನೆ, ಈಗಲಾದರೂಎಚ್ಚೆತ್ತು ಪರಿಸರವನ್ನು ಉಳಿಸಿಕೊಳ್ಳಬೇಕಿದೆ ಇಲ್ಲವಾದಲ್ಲಿಜಗತ್ತುಚಂಡಮಾರುತ, ಬಿರುಗಾಳಿ ಭೂ ಕುಸಿತದಂತ ಪ್ರಾಕೃತಿಕ ವಿಕೋಪ ಎದುರಿಸಬೇಕಾಗುತ್ತದೆಎಂದರು.

ಯುವಜನತೆ ಮೂಡ ನಂಬಿಕೆಯ ವಿರುದ್ಧಜಾಗೃತಿ ಮೂಡಿಸಬೇಕುಯುವ ಪೀಳಿಗೆ ಸಾರ್ವಜನಿಕರಿಗೆಅರಿವು ಮೂಡಿಸಿ, ಹಸಿರೇ ಉಸಿರು ಎಂಬುದು ಕೇವಲ ಘೋಷವಾಕ್ಯವಾಗ ಬಾರದು, ವಿದ್ಯಾರ್ಥಿಗಳು ಗಿಡ ಮರಗಳ ಉಪಯೋಗದಕುರಿತು ಹಿರಿಯರಿಗೆಅರಿವು ಮೂಡಿಸಿ, ಪ್ರತಿಯೊಂದು ಮನೆಗೂ ಒಂದುಗಿಡ ನೆಟ್ಟು ಪ್ರಕೃತಿ ಉಳಿಸೋಣ ಎಂದುಕರೆ ನೀಡಿದರು.

ಇದೇ ಸಂದರ್ಭದಲ್ಲಿ ಪರಿಸರ ಪ್ರೇಮಿಗಳಾದ ರಮೇಶ್, ಡಾ.ಸುಜಯ್, ರಾಘವೇಂದ್ರರವರಿಗೆ ಸನ್ಮಾನಿಸಲಾಯಿತು.

ಜಿಲ್ಲಾಧಿಕಾರಿಡಾ: ಕುಮಾರ, ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕಅಧಿಕಾರಿಕೆ.ಆರ್ ನಂದಿನಿ, ಜಿಲ್ಲಾ ಪೊಲೀಸ್ ವರಿ?ಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ, ಅಪರಜಿಲ್ಲಾಧಿಕಾರಿ ಬಿ.ಸಿ. ಶಿವಾನಂದಮೂರ್ತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಆನಂದ್, ಲೋಕಾಯುಕ್ತದ ಉಪನಿಬಂಧಕರಾದಅರವಿಂದ್, ಮಿಲನ ಜಿಲ್ಲಾ ಲೋಕಾಯುಕ್ತ ಪೊಲೀಸ್ಅಧೀಕ್ಷಕ ಸುರೇಶ್ ಬಾಬು,ವಕೀಲರ ಸಂಘದಅಧ್ಯಕ್ಷ ಮರಿಗೌಡ, ಸೇರಿದಂತೆಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು. ಕಾರ್ಯಕ್ರಮದ ನಂತರಕರಿಘಟ್ಟದ ವೆಂಕಟರಮಣ ಸ್ವಾಮಿ ಸಸ್ಯೋದ್ಯಾನವನದಲ್ಲಿ ನ್ಯಾಯಮೂರ್ತಿ ಹಾಗೂ ಉಪಲೋಕಾಯುಕ್ತರಾದ ಬಿ. ವೀರಪ್ಪಅವರುಗಿಡ ನೆಡುವ ಮೂಲಕ ಜಾಗೃತಿ ಮೂಡಿಸಿದರು.



### ರೋಗಿಗಳ ಬಳಿ ಹೋಗಿ ಆರೋಗ್ಯ ವಿಚಾರಿಸಿದ ಉಪಲೋಕಾಯುಕ್ತರು

**ಮಿಮ್ಸ್‌ನ ಕೀಲು ಮತ್ತು ಮೂಳೆ ಒಳ ರೋಗಿ ವಿಭಾಗದಲ್ಲಿಚಿಕಿತ್ಸೆ ಪಡೆಯುತ್ತಿರುವ ಮಹಿಳೆಯರು, ಪುರುಷರು ಹಾಗೂ ಮಕ್ಕಳ ವಾರ್ಡ್ಗಳಿಗೆ ಇಂದು ಭೇಟಿ ನೀಡಿದಉಪಲೋಕಾಯುಕ್ತರು ರೋಗಿಗಳ ಬಳಿ ಹೋಗಿ ಆರೋಗ್ಯ ವಿಚಾರಿಸಿದರು. ಮಿಮ್ಸ್‌ನಲ್ಲಿ ನೀಡಲಾಗುತ್ತಿರುವ ಸೇವೆ ಔಷಧೋಪಚಾರ, ಕುಡಿಯುವ ನೀರು ಶೌಚಾಲಯದ ಸ್ವಚ್ಛತೆ, ಹೊರ ರೋಗಿಗಳಿಗೆ ಇರುವ ತೊಂದರೆಗಳು ಕುರಿತಂತೆ ಮಿಮ್ಸ್‌ನಲ್ಲಿದ್ದ ರೋಗಿಗಳಿಂದ ಮಾಹಿತಿ ಪಡೆದುಕೊಂಡರು. ನಂತರಔಷಧಿವಿತರಣಾಕೇಂದ್ರ, ಪಾರ್ಕಿಂಗ್ಅಂಬೂಲೆನ್ಸ್‌ಸೇವೆ ಕುರಿತು ಪರಿಶೀಲಿಸಿದ ನಂತರ ಸ್ಥಳದಲ್ಲೇ ಪಾರ್ಕಿಂಗ್ ಗಾಗಿ ಹೆಚ್ಚು ಹಣ ಪಡೆಯುತ್ತಿರುವ ಬಗ್ಗೆ ಹಾಗೂ ಔಷಧಿಗಳನ್ನು ಹೊರಗಡೆ ಮೆಡಿಕಲ್ ಸ್ಟೋರ್ ಗಳಿಗೆ ಬರೆದುಕೊಡುತ್ತಿದ್ದಾರಎಂದು ರೋಗಿಗಳ ಬಳಿ ಪ್ರಶ್ನಿಸಿದರು.ಆಸ್ಪತ್ರೆಯಲ್ಲಿರುವಕ್ಯಾಂಟೀನ್ ನಲ್ಲಿ ನೀಡಲಾಗುತ್ತಿರುವಆಹಾರದಗುಣಮಟ್ಟ ಹಾಗೂ ಸ್ವಚ್ಛತೆಕುರಿತು ಪರಿಶೀಲಿಸಿದ ಲೋಕಾಯುಕ್ತರು ಪ್ರತಿಆಹಾರ ಪದಾರ್ಥ ಮಾರಾಟಕುರಿತು ಬೆಲೆಯ ವಿವರಅನಾವರಣ ಮಾಡಬೇಕುಎಂದರು. ಸ್ಥಳದಲ್ಲೇ ಆಹಾರ ಸುರಕ್ಷಾ ಅಧಿಕಾರಿಗಳಿಗೆ ಕರೆ ಮಾಡಿಕ್ಯಾಂಟೀನ್ ನಲ್ಲಿ ಮಾರಾಟ ಮಾಡುತ್ತಿರುವ ವಸ್ತುಗಳ ಬಗ್ಗೆ ಗುಣಮಟ್ಟ ಪರಿಶೀಲಿಸಿ ವರದಿ ನೀಡುವಂತೆ ತಿಳಿಸಿದರು.**

# ಸಂಜೆ ಟಿಪ್ಸ್

## ಸೆಬಿಯಲ್ಲಿ ಡಿ ಆರ್ ಎಚ್ ಪಿ ಸಲ್ಲಿಸಿದ ಕನೋಡಿಯಾ ಸಿಮೆಂಟ್ ಲಿಮಿಟೆಡ್




ಉತ್ತರ ಪ್ರದೇಶ ಮತ್ತು ಬಿಹಾರ ರಾಜ್ಯಗಳಲ್ಲಿ ಸ್ಯಾಟಿಲೈಟ್ ಗ್ರೈಂಡಿಂಗ್ ಯೂನಿಟ್ ಗಳ (ಎಸ್ ಜಿ ಯು ಗಳು) ಮೂಲಕ ಕಾರ್ಯನಿರ್ವಹಿಸುವ ಸಿಮೆಂಟ್ ತಯಾರಿಕಾ ಕಂಪನಿಯಾಗಿರುವ, ಪೋರ್ಟ್ಲ್ಯಾಂಡ್ ಪೊಝೋಲಾನಾ ಸಿಮೆಂಟ್ ಮತ್ತು ಕಾಂಪೋಸಿಟ್ ಸಿಮೆಂಟ್ ನಂತಹ ಬ್ಲೆಂಡೆಡ್ ಸಿಮೆಂಟ್ ಉತ್ಪಾದನೆಯಲ್ಲಿ ಪರಿಣತಿಯನ್ನು ಹೊಂದಿರುವ ಕನೋಡಿಯಾ ಸಿಮೆಂಟ್ ಲಿಮಿಟೆಡ್ (ಕಂಪನಿ) ಕಂಪನಿಯು ತನ್ನ ಡ್ರಾಫ್ಟ್ ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್ (ಡಿ ಆರ್ ಎಚ್ ಪಿ) ಅನ್ನು ಮಾರುಕಟ್ಟೆ ನಿಯಂತ್ರಕ ಸಂಸ್ಥೆಯಾದ ಸೆಕ್ಯುರಿಟೀಸ್ ಅಂಡ್ ಎಕ್ಸ್ ಚೇಂಜ್ ಬೋರ್ಡ್ ಆಫ್ ಇಂಡಿಯಾ (ಸೆಬಿ) ಯಲ್ಲಿ ಸಲ್ಲಿಸಿದೆ. ಕಂಪನಿಯು ಆರಂಭಿಕ ಸಾರ್ವಜನಿಕ ಕೊಡುಗೆ (ಐಪಿಒ) ಮೂಲಕ ಈಕ್ವಿಟಿ ಷೇರು ಬಂಡವಾಳದ ಮೂಲಕ ಹಣ ಸಂಗ್ರಹಿಸಲು ಯೋಜಿಸಿದೆ. ಈ ಸಾರ್ವಜನಿಕ ಕೊಡುಗೆಯು 14,913,930 ಈಕ್ವಿಟಿ ಷೇರುಗಳ 'ಆಫರ್ ಫಾರ್ ಸೇಲ್' ಅನ್ನು ಒಳಗೊಂಡಿದೆ, ಪ್ರತಿ ಷೇರಿನ ಮುಖಬೆಲೆ 10 ರೂ. ಆಗಿದೆ. ಕ್ರಿಸಿಲ್ ವರದಿಯ ಪ್ರಕಾರ ಕನೋಡಿಯಾ ಸಿಮೆಂಟ್ ಭಾರತದಲ್ಲಿ ಸಿಮೆಂಟ್ ಕಾಂಟ್ರಾಕ್ಟ್ ಮ್ಯಾನುಫ್ಯಾಕ್ಚರಿಂಗ್ ವಿಭಾಗದ ಪ್ರವರ್ತಕರಲ್ಲಿ ಒಂದಾಗಿದೆ. ಡಿಸೆಂಬರ್ 31, 2024 ರ ಪ್ರಕಾರ ಕಂಪನಿಯು ಒಟ್ಟು 3.54 ಎಂಟಿಪಿಎ ಸಿಮೆಂಟ್ ತಯಾರಿಕಾ ಸಾಮರ್ಥ್ಯದೊಂದಿಗೆ ಐದು ಸ್ಯಾಟಿಲೈಟ್ ಗ್ರೈಂಡಿಂಗ್ ಯೂನಿಟ್ ಗಳನ್ನು (ಎಸ್ ಜಿ ಯುಗಳು) ನಿರ್ವಹಿಸುತ್ತಿದೆ. 2014 ರಿಂದ 2024 ರ ಆರ್ಥಿಕ ವರ್ಷದವರೆಗೆ ಕಂಪನಿಯ ಸ್ಥಾಪಿತ ಸಿಮೆಂಟ್ ಗ್ರೈಂಡಿಂಗ್ ಸಾಮರ್ಥ್ಯವು ಶೇ.22.12 ಸಿಎಜಿಆರ್ ದರದಲ್ಲಿ ಬೆಳೆದಿದೆ, ಇದು ಉದ್ಯಮದ ಸರಾಸರಿ ಶೇ.7.31 ಮತ್ತು ಸಮಾನ ಸಂಸ್ಥೆಗಳ ಸರಾಸರಿ ಶೇ.9.64 ಕ್ಕಿಂತ ಹೆಚ್ಚಾಗಿದೆ. ಇದರಿಂದ ಕನೋಡಿಯಾ ಸಿಮೆಂಟ್ ಭಾರತದಲ್ಲಿ ಸ್ಥಾಪಿತ ಸಿಮೆಂಟ್ ಗ್ರೈಂಡಿಂಗ್ ಸಾಮರ್ಥ್ಯದ ದೃಷ್ಟಿಯಿಂದ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಸಿಮೆಂಟ್ ತಯಾರಕರಲ್ಲಿ ಒಂದಾಗಿದೆ.

## ಚಟ್ನಿಪುಡಿ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

3/4 ಕಪ್ ಕಡಲೆ ಬೇಳೆ 1/2 ಕಪ್ ಉದ್ದಿನ ಬೇಳ 1 ಚಮಚ ತೆಂಗಿನೆಣ್ಣೆ 10 ಬ್ಯಾಡಗಿ ಮೆಣಸು ಸ್ವಲ್ಪ ಹುಣಸೆಹಣ್ಣು ಅರ್ಧ ಕಪ್ ತೆಂಗಿನ ತುರಿ 1/4 ಚಮಚ ಇಂಗು ಅರ್ಧ ಚಮಚ ಉಪ್ಪು 1 ಚಮಚ ಬೆಲ್ಲದ ಪುಡಿ

### ಮಾಡುವ ವಿಧಾನ

ನೀವು ದಪ್ಪ ತಳವಿರುವ ಪ್ಯಾನ್ ತೆಗೆದುಕೊಳ್ಳಿ, ಅದನ್ನು ಬಿಸಿ ಮಾಡಿ ಕಡಿಮೆ ಉರಿಯಲ್ಲಿ ಕಡ್ಲೆಬೇಳೆ , ಉದ್ದಿನ ಬೇಳೆ ಹಾಕಿ ಫ್ರೈ ಮಾಡಿ ಕಡ್ಲೆ ಬೇಳೆ ಗೋಲ್ಡನ್ ಬಣ್ಣಕ್ಕೆ ತಿರುಗುವಾಗ ತೆಗಿಯಿರಿ ಈಗ ಒಣ ಮೆಣಸು ಕೂಡ ರೋಸ್ಟ್ ಮಾಡಿ ಒಂದು ತಟ್ಟೆಯಲ್ಲಿ ಹಾಕಿಡಿ ನಂತರ ತೆಂಗಿನ ತುರಿ ಹಾಕಿ 1 ಚಮಚ ಎಣ್ಣೆ ಹಾಕಿ ತೆಂಗಿನ ತುರಿ ಬಣ್ಣ ಬದಲಾಗುವಷ್ಟು ಹೊತ್ತು ಫ್ರೈ ಮಾಡಿ, ತೆಂಗಿನ ತುರಿ ಕಂದು ಬಣ್ಣಕ್ಕೆ ಬರುವಷ್ಟು ಹೊತ್ತು ಫ್ರೈ ಮಾಡಿ, ಹೀಗೆ ಫ್ರೈ ಮಾಡುವಾಗ ಸ್ವಲ್ಪ ಕರಿಬೇವು ಕೂಡ ಸೇರಿಸಿ. ತೆಂಗಿನತುರಿ ಫ್ರೈ ಮಾಡುವಾಗ ಹಣಸೆಹಣ್ಣು ಕೂಡ ಸೇರಿಸಿ ಈಗ ನೀವು ಮಿಕ್ಸಿ ಜಾರ್ಗೆ ಈ ಮಿಶ್ರಣ ಹಾಕಿ ಅದಕ್ಕೆ ಇಂಗು ಮತ್ತು ಸ್ವಲ್ಪ ಬೆಲ್ಲ, ರುಚಿಗೆ ತಕ್ಕ ಉಪ್ಪು ಸೇರಿಸಿ, ನೀರು ಸೇರಿಸದೆ ಪುಡಿ ಮಾಡಿ. ಈಗ ರೆಡಿಯಾದ ಚಟ್ನಿ ಪುಡಿಯನ್ನು ನೀವು ಡಬ್ಬದಲ್ಲಿ ಹಾಕಿಟ್ಟು ಇಡ್ಲಿ ಹಾಗೂ ದೋಸೆ ಜೊತೆಗೆ ಸವಿಯಬಹುದು.

# 59ನೇ ವಯಸ್ಸಿನಲ್ಲಿ ಸಿಕ್ಸ್ ಪ್ಯಾಕ್ ಶಾರುಖ್ ಖಾನ್



ಬಾಲಿವುಡ್ ಸ್ಟಾರ್ ನಟ ಶಾರುಖ್ ಖಾನ್ ಸಂದರ್ಶನವೊಂದರಲ್ಲಿ ದಿನಕ್ಕೆ ಎರಡು ಬಾರಿ ಮಾತ್ರ ಊಟ ಮಾಡುವುದಾಗಿ ಮತ್ತು ಎಂದಿಗೂ ಜಂಕ್ ಫುಡ್ ತಿನ್ನುವುದಿಲ್ಲ ಎಂದು ಹೇಳಿದರು. ಅಲ್ಲದೇ ಅವರು ತಮ್ಮ ಆಹಾರದಲ್ಲಿ ಮೊಳಕೆಯೊಡೆದ ಧಾನ್ಯಗಳು, ಗ್ರಿಲ್ಡ್ ಚಿಕನ್ ಮತ್ತು ಬ್ರೊಕೊಲಿಯನ್ನು ಹೆಚ್ಚಾಗಿ ಸೇರಿಸಿಕೊಳ್ಳುತ್ತಾರೆ.. ಸಾಂದರ್ಭಿಕವಾಗಿ ದ್ವಿದಳ ಧಾನ್ಯಗಳನ್ನು ತಿನ್ನುತ್ತಾರೆ ಮತ್ತು ಯಾವುದೇ ಪ್ರಮುಖ ಬದಲಾವಣೆಗಳಿಲ್ಲದೆ ಹಲವು ವರ್ಷಗಳಿಂದ ಅದೇ ಆಹಾರವನ್ನು ಸೇವಿಸುತ್ತಿದ್ದಾರೆ ಎಂದು ಫಿಟ್ನೆಸ್ ಸತ್ಯವನ್ನು ಬಿಚ್ಚಿಟ್ಟಿದ್ದರು.. ನಾನು ವಿಮಾನದಲ್ಲಿ ಪ್ರಯಾಣಿಸುವಾಗ ಅಥವಾ ಅತಿಥಿಗಳ ಮನೆಗಳಿಗೆ ಭೇಟಿ ನೀಡಿದಾಗ, ಅವರು ನೀಡುವ ಆಹಾರವನ್ನು ನಾನು ಇಲ್ಲ ಎಂದು ಹೇಳದೆ ತಿನ್ನುತ್ತೇನೆ. ಬಿರಿಯಾನಿ, ರೊಟ್ಟಿ, ತುಪ್ಪ ಅಥವಾ ಲಸ್ಸಿ ಯಾವುದು ಕೊಟ್ಟರೂ ನಾನು ಎಂದಿಗೂ ನಿರಾಕರಿಸುವುದಿಲ್ಲ. ಒಂದೇ ಆಹಾರವನ್ನು ದಿನಕ್ಕೆ ಎರಡು ಬಾರಿ ತಿನ್ನುವುದರಿಂದ ನನಗೆ ಯಾವುದೇ ತೊಂದರೆಯಾಗುವುದಿಲ್ಲ.. ವರ್ಷಗಳಲ್ಲಿ ಈ ಡಯೆಟ್ ಮಾದರಿಗೆ ಒಗ್ಗಿಕೊಂಡಿರುವುದರಿಂದ ನನಗೆ ನಾನೇ ಆಹಾರದಲ್ಲಿ ಮೋಸ ಮಾಡಿಕೊಳ್ಳುವ ದಿನಗಳಿಲ್ಲ? ಎಂದು ಶಾರುಖ್ ಖಾನ್ ಹೇಳಿದ್ದಾರೆ.

ಶಾರುಖ್ ಖಾನ್ ಮಾತ್ರವಲ್ಲ, ಅನೇಕ ಸೆಲೆಬ್ರಿಟಿಗಳು ತಮ್ಮ ಆಹಾರಕ್ರಮದ ಬಗ್ಗೆ ಗಮನ ಮತ್ತು ಕಾಳಜಿ ವಹಿಸುತ್ತಿದ್ದಾರೆ. ಅದಕ್ಕಾಗಿಯೇ ಅವರು ಸುಂದರವಾಗಿ, ಯೌವ್ವನದಿಂದ ಕಾಣುತ್ತಾರೆ ಮತ್ತು ದೀರ್ಘಕಾಲ ಬದುಕುತ್ತಾರೆ.

## ಮಧುಮೇಹ ನಿಯಂತ್ರಣ ಹೇಗೆ?




### ಹೆಲ್ತ್ ಟಿಪ್ಸ್

ಸಮತೋಲಿತ ಆಹಾರ ಸೇವನೆ: ಆರೋಗ್ಯಕರ ಆಹಾರವು ಮಧುಮೇಹ ತಡೆಗಟ್ಟುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಸಕ್ಕರೆ, ಕೊಬ್ಬು ಮತ್ತು ಸಂಸ್ಕರಿತ ಆಹಾರಗಳ ಸೇವನೆಯನ್ನು ಕಡಿಮೆ ಮಾಡಿ. ಬದಲಿಗೆ, ಫೈಬರ್ನಿಂದ ಸಮೃದ್ಧವಾದ ತರಕಾರಿಗಳು, ಹಣ್ಣುಗಳು, ಧಾನ್ಯಗಳು ಮತ್ತು ಸೊಪ್ಪುಗಳನ್ನು ಆಹಾರದಲ್ಲಿ ಸೇರಿಸಿ. ಒಮೆಗಾ-3 ಕೊಬ್ಬಿನಾಮ್ಲಗಳಿರುವ ಮೀನು, ಬೀಜಗಳು ಮತ್ತು ಒಣಹಣ್ಣುಗಳು ರಕ್ತದ ಸಕ್ಕರೆ ಮಟ್ಟವನ್ನು ಸ್ಥಿರವಾಗಿಡಲು ಸಹಾಯಕ. ಸಣ್ಣ ಊಟದ ಭಾಗಗಳನ್ನು ಆಗಾಗ್ಗೆ ಸೇವಿಸುವುದು ರಕ್ತದ ಸಕ್ಕರೆಯಲ್ಲಿ ಏರಿಳಿತವನ್ನು ಕಡಿಮೆ ಮಾಡುತ್ತದೆ.

ನಿಯಮಿತ ವ್ಯಾಯಾಮ: ದೈನಂದಿನ ದೈಹಿಕ ಚಟುವಟಿಕೆಯು ಇನ್ಸುಲಿನ್ ಸಂವೇದನೆಯನ್ನು ಸುಧಾರಿಸುತ್ತದೆ ಮತ್ತು ತೂಕವನ್ನು ನಿಯಂತ್ರಿಸುತ್ತದೆ. ಕೇವಲ 30 ನಿಮಿಷಗಳ ವೇಗದ ನಡಿಗೆ, ಯೋಗ, ಸೈಕ್ಲಿಂಗ್ ಅಥವಾ ಈಜುವುದು ಮಧುಮೇಹದ ಅಪಾಯವನ್ನು ಕಡಿಮೆ ಮಾಡುತ್ತದೆ. ಶಕ್ತಿಯನ್ನು ಹೆಚ್ಚಿಸುವ ವ್ಯಾಯಾಮಗಳಾದ ತೂಕ ಎತ್ತುವಿಕೆಯು ಸ್ನಾಯುಗಳನ್ನು ಬಲಪಡಿಸಿ, ಚಯಾಪಚಯವನ್ನು ಉತ್ತೇಜಿಸುತ್ತದೆ.

ತೂಕ ನಿಯಂತ್ರಣ: ಒಬ್ಬ ವ್ಯಕ್ತಿಯ ತೂಕವು ಮಧುಮೇಹದ ಅಪಾಯದ ಮೇಲೆ ನೇರವಾಗಿ ಪರಿಣಾಮ ಬೀರುತ್ತದೆ. ಒಗ್ಗರಾದ ದೇಹವು ಇನ್ಸುಲಿನ್ ಪ್ರತಿರೋಧವನ್ನು ಹೆಚ್ಚಿಸುತ್ತದೆ. ಆದ್ದರಿಂದ, ಆರೋಗ್ಯಕರ ತೂಕವನ್ನು ಕಾಪಾಡಿಕೊಳ್ಳುವುದು ಮುಖ್ಯ. ದಿನಕ್ಕೆ 500 ಕ್ಯಾಲರಿಗಳ ಕಡಿತದೊಂದಿಗೆ ಸಮತೋಲಿತ ಆಹಾರ ಮತ್ತು ವ್ಯಾಯಾಮದ ಮೂಲಕ ತೂಕವನ್ನು ಕಡಿಮೆ ಮಾಡಬಹುದು.

ಒತ್ತಡ ನಿರ್ವಹಣೆ: ಒತ್ತಡವು ರಕ್ತದ ಸಕ್ಕರೆ ಮಟ್ಟವನ್ನು ಹೆಚ್ಚಿಸುವ ಕಾರ್ಟಿಸಾಲ್ ಹಾರ್ಮೋನ್ನ ಉತ್ಪಾದನೆಗೆ ಕಾರಣವಾಗುತ್ತದೆ. ಧ್ಯಾನ, ಯೋಗ, ಆಳವಾದ ಉಸಿರಾಟದ ವ್ಯಾಯಾಮಗಳು ಅಥವಾ ಇಷ್ಟಪಟ್ಟ ಚಟುವಟಿಕೆಗಳಲ್ಲಿ ತೊಡಗುವುದು ಒತ್ತಡವನ್ನು ಕಡಿಮೆ ಮಾಡುತ್ತದೆ. ಇದು ಮಾನಸಿಕ ಆರೋಗ್ಯವನ್ನು ಸುಧಾರಿಸುವುದರ ಜೊತೆಗೆ ಮಧುಮೇಹದ ಅಪಾಯವನ್ನು ಕಡಿಮೆ ಮಾಡುತ್ತದೆ.

ನಿಯಮಿತ ಆರೋಗ್ಯ ತಪಾಸಣೆ: ಮಧುಮೇಹದ ಆರಂಭಿಕ ಚಿಹ್ನೆಗಳನ್ನು ಗುರುತಿಸಲು ರಕ್ತದ ಸಕ್ಕರೆ ಪರೀಕ್ಷೆ, ಎಚ್ಬಿಎ1ಸಿ ಟೆಸ್ಟ್ನಂತಹ ತಪಾಸಣೆಗಳನ್ನು ನಿಯಮಿತವಾಗಿ ಮಾಡಿಸಿಕೊಳ್ಳಿ. ಇದು ಆರಂಭಿಕ ಹಂತದಲ್ಲಿಯೇ ರೋಗವನ್ನು ಗುರುತಿಸಿ, ನಿಯಂತ್ರಿಸಲು ಸಹಾಯಕವಾಗುತ್ತದೆ. ನಿದ್ರೆಯ ಗುಣಮಟ್ಟ: ಒಳ್ಳೆಯ ನಿದ್ರೆಯು ಚಯಾಪಚಯವನ್ನು ಸಮತೋಲನದಲ್ಲಿಡುತ್ತದೆ. ದಿನಕ್ಕೆ 7-8 ಗಂಟೆಗಳ ಗಾಢ ನಿದ್ರೆಯು ಒತ್ತಡವನ್ನು ಕಡಿಮೆ ಮಾಡಿ, ಇನ್ಸುಲಿನ್ ಸಂವೇದನೆಯನ್ನು ಸುಧಾರಿಸುತ್ತದೆ.

## ಈರುಳ್ಳಿ ಹೇರ್ ಪ್ಯಾಕ್

### ಬ್ಯೂಟಿ ಟಿಪ್ಸ್



ಈರುಳ್ಳಿ ರಸವು ನಿಮ್ಮ ಕೂದಲಿನ ಆರೋಗ್ಯಕ್ಕೆ ತುಂಬಾ ಪ್ರಯೋಜನಕಾರಿ. ನಿಮ್ಮ ಕೂದಲನ್ನು ಬಲವಾಗಿ, ಹೊಳೆಯುವಂತೆ ಮತ್ತು ರೇಷ್ಮೆಯಂತೆ ಮಾಡಲು ಬಯಸಿದರೆ, ನೀವು ಈರುಳ್ಳಿಯಿಂದ ಮಾಡಿದ ಹೇರ್ ಪ್ಯಾಕ್ಗಳನ್ನು ಬಳಸಬಹುದು. ಕೂದಲಿನ ಎಲ್ಲಾ ಸಮಸ್ಯೆಗಳಿಗೆ ಈ ಈರುಳ್ಳಿ ಹೇರ್ ಪ್ಯಾಕ್ ಸಹಕಾರಿಯಾಗಲಿದೆ.

ಮನೆಯಲ್ಲಿಯೇ ರಾಸಾಯನಿಕ ಮುಕ್ತ ಹೇರ್ ಪ್ಯಾಕ್ ಮಾಡಲು, ಮೊದಲು ಮಧ್ಯಮ ಗಾತ್ರದ ಈರುಳ್ಳಿಯನ್ನು ಸಿಪ್ಪೆ ತೆಗೆದು ಕೆಲವು ತುಂಡುಗಳಾಗಿ ಕತ್ತರಿಸಿ. ಈಗ ನೀವು ಈರುಳ್ಳಿಯನ್ನು ಚೆನ್ನಾಗಿ ರುಬ್ಬಿ ರಸ ತೆಗೆಯಬೇಕು. ಕೂದಲಿನ ಆರೈಕೆಯಲ್ಲಿ ಈರುಳ್ಳಿ ರಸವನ್ನು ಸೇರಿಸಿಕೊಳ್ಳಬೇಕು.

ನಿಮ್ಮ ನೆತ್ತಿ ಮತ್ತು ಕೂದಲಿಗೆ ಈರುಳ್ಳಿ ರಸವನ್ನು ಲಘುವಾಗಿ ಹಚ್ಚಿ. ಉತ್ತಮ ಫಲಿತಾಂಶ ಪಡೆಯಲು ನೀವು ಈರುಳ್ಳಿ ರಸವನ್ನು ಸುಮಾರು ಅರ್ಧ ಗಂಟೆಗಳ ಕಾಲ ಹಚ್ಚಬೇಕು. 30 ನಿಮಿಷಗಳ ನಂತರ ನಿಮ್ಮ ಕೂದಲನ್ನು ತೊಳೆಯಬಹುದು.

ನೀವು ಈ ಹೇರ್ ಪ್ಯಾಕ್ ಅನ್ನು ವಾರಕ್ಕೆ ಒಂದು ಅಥವಾ ಎರಡು ಬಾರಿ ಬಳಸಬಹುದು. ಒಂದು ತಿಂಗಳೊಳಗೆ ನೀವು ಸಕಾರಾತ್ಮಕ ಫಲಿತಾಂಶಗಳನ್ನು ಸ್ವಯಂ ನೋಡಲು ಪ್ರಾರಂಭಿಸುತ್ತೀರಿ. ಈ ಹೇರ್ ಪ್ಯಾಕ್ ಸಹಾಯದಿಂದ ನಿಮ್ಮ ಕೂದಲಿನಲ್ಲಿರುವ ಪೌಷ್ಟಿಕಾಂಶದ ಕೊರತೆಯನ್ನು ಸಹ ತೆಗೆದುಹಾಕಬಹುದು.ಕೂದಲು ಉದುರುವ ಸಮಸ್ಯೆಯನ್ನು ಹೋಗಲಾಡಿಸಲು ನೀವು ಈ ಹೇರ್ ಪ್ಯಾಕ್ ಅನ್ನು ಬಳಸಬಹುದು. ಇದಲ್ಲದೆ ಕೂದಲಿನ ಶುಷ್ಕತೆಯನ್ನು ತೆಗೆದುಹಾಕಿ ಅವುಗಳನ್ನು ಮೃದುವಾಗಿಸಲು ಬಯಸಿದರೆ, ಈ ಹೇರ್ ಪ್ಯಾಕ್ ಅನ್ನು ಬಳಸಬಹುದು.

### ಭಾರತದ ಅತಿದೊಡ್ಡ ಎಂಜಿನಿಯರಿಂಗ್ ಹ್ಯಾಕ್ಥಾನ್ ಟೆಕ್ ಜಿಯಂಲ ರಲ್ಲಿ ನಾವೀನ್ಯತೆ ಮತ್ತು ಪ್ರತಿಭೆಯ ಸಂಭ್ರಮಾಚರಿಸಿದ

# ಎಲ್ ಆ್ಯಂಡ್ ಟಿ ಟೆಕ್ನಾಲಜಿ ಸರ್ವೀಸಸ್




ಬೆಂಗಳೂರಿನಲ್ಲಿರುವ ಎಲ್ ಆ?ಯಂಡ್ ಟಿ ಟೆಕ್ನಾಲಜಿ ಸರ್ವೀಸಸ್ ನ ಹೊಸ ಕ್ಯಾಂಪಸ್ನಲ್ಲಿ ಎಂಜಿನಿಯರಿಂಗ್ ವಿದ್ಯಾರ್ಥಿಗಳಿಗಾಗಿ ಆಯೋಜಿಸಲಾಗಿದ್ದ ವಾರ್ಷಿಕ ತಂತ್ರಜ್ಞಾನ ಸ್ಪರ್ಧೆಯಾಗಿರುವ ಹಾಗೂ ಭಾರತದ ಅತಿದೊಡ್ಡ ನಾವೀನ್ಯತೆ ವೇದಿಕೆಯಾಗಿರುವ ಟೆಕ್ ಜಿಯಂ-ನ ಏಳನೇ ಆವೃತ್ತಿಯು ಯಶಸ್ವಿಯಾಗಿ ಪೂರ್ಣಗೊಂಡಿದ್ದು, ದೇಶದಾದ್ಯಂತ 503 ಎಂಜಿನಿಯರಿಂಗ್ ಸಂಸ್ಥೆಗಳಿಂದ 36,765ಕ್ಕೂ ಹೆಚ್ಚು ವಿದ್ಯಾರ್ಥಿಗಳು ನೋಂದಾಯಿಸಿಕೊಂಡಿದ್ದರು.

ಎಲ್ ಆ್ಯಂಡ್ ಟಿ ಟೆಕ್ನಾಲಜಿ ಸರ್ವೀಸಸ್ (ಎಲ್ಟಿಟಿಎಸ್) ಆಯೋಜಿಸುತ್ತಿರುವ ಟೆಕ್ ಜಿಯಂಲ 2016ರಲ್ಲಿ ಪ್ರಾರಂಭವಾದಾಗಿನಿಂದ ಅತ್ಯಂತ ಬೇಡಿಕೆಯ ಶೈಕ್ಷಣಿಕ-ಉದ್ಯಮ ಎಂಜಿನಿಯರಿಂಗ್ ನಾವೀನ್ಯತೆಯ ಹ್ಯಾಕ್ಥಾನ್ ಆಗಿದೆ.

ಈ ವರ್ಷದ ಸ್ಪರ್ಧೆಯ ವಿಜೇತರಿಗೆ ಒಟ್ಟು 18 ಲಕ್ಷಕ್ಕೂ ಹೆಚ್ಚಿನ ಮೊತ್ತದ ಬಹುಮಾನಗಳನ್ನು ನೀಡಲಾಯಿತು. ಭಾರತದ ಅಗ್ನಿ ಕ್ಷಿಪಣಿ ಯೋಜನೆಯಲ್ಲಿ ಪ್ರಮುಖ ಪಾತ್ರ ವಹಿಸಿರುವುದಕ್ಕೆ ಭಾರತದ ಕ್ಷಿಪಣಿ ಮಹಿಳೆ ಎಂದು ಜನಪ್ರಿಯರಾಗಿರುವ ಡಾ. ಟೆಸ್ಸಿ ಥಾಮಸ್, ಈ ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದರು. ಅವರ ಉಪಸ್ಥಿತಿ ಮತ್ತು ಅನಿಸಿಕೆಗಳು ಪ್ರೇಕ್ಷಕರ ಪಾಲಿಗೆ ಸ್ಫೂರ್ತಿದಾಯಕವಾಗಿದ್ದವು. ದೇಶದಾದ್ಯಂತ ಎಂಜಿನಿಯರಿಂಗ್ ಕಾಲೇಜುಗಳ ವಿದ್ಯಾರ್ಥಿಗಳು ಪ್ರಸ್ತುತಪಡಿಸಿದ ತಾಂತ್ರಿಕ ಆವಿಷ್ಕಾರಗಳನ್ನು ನೋಡುವುದು ಅದ್ಭುತ ಅನುಭವವಾಗಿತ್ತು. ಇಂತಹ ತಂತ್ರಜ್ಞಾನ ಆವಿಷ್ಕಾರಗಳು ಭವಿಷ್ಯ-ಆಧಾರಿತ ಎಂಜಿನಿಯರಿಂಗ್ ಅಪ್ಲಿಕೇಷನ್ಗಳನ್ನು ರೂಪಿಸುವ ಸಾಮರ್ಥ್ಯ ಹೊಂದಿವೆ. ಎಲ್ ಆ?ಯಂಡ್ ಟಿ ಟೆಕ್ನಾಲಜಿ ಸರ್ವೀಸಸ್ ಈ ಉಪಕ್ರಮವನ್ನು ಮುನ್ನಡೆಸಿಕೊಂಡು ಬರುತ್ತಿರುವುದು ಪ್ರಶಂಸನೀಯವಾಗಿದೆ. ಕಳೆದ ಏಳು ವರ್ಷಗಳಿಂದ ಯುವ ಮನಸ್ಸುಗಳ ನಾವೀನ್ಯತೆಯ ಅನ್ವೇಷಣೆಯಲ್ಲಿ ಪರಿಣಾಮಕಾರಿಯಾಗಿ ಮಾರ್ಗದರ್ಶನ ನೀಡುತ್ತಿದೆ. ಯುವ ಎಂಜಿನಿಯರ್ಗಳ ಸೃಜನಶೀಲ ವಿಚಾರಗಳನ್ನು ಒಟ್ಟುಗೂಡಿಸುವ ಮೂಲಕ, ಟೆಕ್ಜಿಯಂಲ ನಂತಹ ವೇದಿಕೆಗಳು ದೇಶದ ಒಳಗೆ ಮಾತ್ರವಲ್ಲದೆ ಜಗತ್ತಿನಾದ್ಯಂತ ಬದಲಾವಣೆಯಎಂಜಿನಿಯರಿಂಗ್ನಲ್ಲಿ ಪ್ರಮುಖ ಪಾತ್ರವಹಿಸುತ್ತಿವೆ ಎಂದು ಡಾ. ಟೆಸ್ಸಿ ಥಾಮಸ್ ಅವರು ಹೇಳಿದರು.

ಟೆಕ್ ಜಿಯಂಲ-ನ 7ನೇ ಆವೃತ್ತಿಯಲ್ಲಿ ದೇಶದಾದ್ಯಂತದ ಪ್ರಮುಖ ಐಐಟಿ, ಎನ್ಐಟಿ ಮತ್ತು ರಾಜ್ಯ ಮಟ್ಟದ ಎಂಜಿನಿಯರಿಂಗ್ ಕಾಲೇಜ್ಗಳು ಭಾಗವಹಿಸಿದ್ದವು. ಎರಡು ದಿನಗಳ ಹ್ಯಾಕ್ಥಾನ್ ಡ್ರೋನ್ (ಯುಎವಿ), ಕಾಯಿಲೆ ಪತ್ತೆಹಚ್ಚುವಿಕೆ, ರೋಬೋಟಿಕ್ಸ್, ಕಂಪ್ಯೂಟ್ ವಿಷನ್, ವಿಶ್ಲೇಷಣೆ, ವಿದ್ಯುತ್ಚಾಲಿತ ವಾಹನಗಳು ಮತ್ತು ವೈರ್ಲೆಸ್ ಟ್ರಾನ್ಸ್ಮಿಷನ್ನಂತಹ ಕ್ಷೇತ್ರಗಳನ್ನು ಒಳಗೊಂಡ ಸಂಚಾರ, ಸುಸ್ಥಿರತೆ ಮತ್ತು ಅತ್ಯಾಧುನಿಕ ತಂತ್ರಜ್ಞಾನ ವಿಷಯಗಳ ಮೇಲೆ ಗಮನ ಕೇಂದ್ರೀಕರಿಸಿತ್ತು. ವಾಸ್ತವ ಜಗತ್ತಿನ ಸಮಸ್ಯೆಗಳನ್ನು ಪರಿಹರಿಸಲು ಹ್ಯಾಕ್ಥಾನ್ನಲ್ಲಿ ಭಾಗವಹಿಸಿದವರಿಗೆ ಪ್ರೇರಣೆ ದೊರೆಯಿತು. ?ಎಲ್ಟಿಟಿಎಸ್? ಜೊತೆಗೆ ಕೆಲಸ ಮಾಡಲು ಮತ್ತು ಟೆಕ್ಜಿಯಂಲ-ನ ನಾವೀನ್ಯಕಾರರಾಗಿ ಮನ್ನಣೆ ಗಳಿಸಲು ಅವಕಾಶ ದೊರೆಯಿತು. ತೆಲಂಗಾಣದ ಬಿ.ವಿ.ರಾಜು ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯ ತಂಡವು ಟೆಕ್ ಜಿಯಂ-ನ ಈ ಆವೃತ್ತಿಯಲ್ಲಿ ಮೊದಲ ಪ್ರಶಸ್ತಿ ಬಾಚಿಕೊಂಡಿತು. ಈ ತಂಡವು ಇವಿಟಿಒಎಲ್ ಡಿಟೆಕ್ಟ್ ಆ್ಯಂಡ್ ಅವೈಡ್ ಸಿಸ್ಟಮ್ಸ್ ಗಾಗಿ ಕೃತಕ ಬುದ್ಧಿಮತ್ತೆ (ಎಐ) ಆಧಾರಿತ ಪರಿಸ್ಥಿತಿ ಜಾಗೃತಿ ಕ್ರಮಾವಳಿ ಕುರಿತ ತನ್ನ ಯೋಜನೆಯಿಂದ ಗಮನ ಸೆಳೆಯಿತು. ಕೊಯಮತ್ತೂರಿನ ಶ್ರೀ ರಾಮಕೃಷ್ಣ ಎಂಜಿನಿಯರಿಂಗ್ ಕಾಲೇಜಿನ ವಿದ್ಯಾರ್ಥಿಗಳು- ಟ್ವಿನ್ಸ್ಕೇಪ್ ಆಯಿಲ್ ವೆಲ್ ಮಾನಿಟರ್ ಮೂಲಮಾದರಿ ಅಭಿವೃದ್ಧಿಪಡಿಸಿದ್ದಕ್ಕಾಗಿ ರನ್ನರ್-ಅಪ್ ಪ್ರಶಸ್ತಿ ಪಡೆದರು. ಚೆನ್ನೈನ ಅಮೃತ ವಿಶ್ವ ವಿದ್ಯಾಪೀಠಂ ವಿದ್ಯಾರ್ಥಿಗಳು ಮೊಣಕಾಲು ಗಾಯ ಪತ್ತೆ ವ್ಯವಸ್ಥೆಗೆ ನೆರವಾಗುವ ಇಂಟೆಲಿಜೆಂಟ್ ರೇಡಿಯಾಲಜಿಸ್ಟ್ ಅಸಿಸ್ಟೆಂಟ್ ಎಂಆರ್ಐ ಕುರಿತ ಪರಿಹಾರಕ್ಕೆ ಎರಡನೇ ರನ್ನರ್-ಅಪ್ ಸ್ಥಾನ ಪಡೆದರು. ನಗರ ಪ್ರದೇಶಗಳಲ್ಲಿ ಪ್ರವಾಹ ಪೀಡಿತ ಪ್ರದೇಶಗಳನ್ನು ಗುರುತಿಸುವ ಯೋಜನೆಗಾಗಿ ತೆಲಂಗಾಣದ ಬಿ.ವಿ.ರಾಜು ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯ ತಂಡಕ್ಕೆ ತೀರ್ಪುಗಾರರ ವಿಶೇಷ ಬಹುಮಾನ ನೀಡಲಾಯಿತು.

ಎಂಜಿನಿಯರಿಂಗ್ ವಿದ್ಯಾರ್ಥಿಗಳು ಈ ಸ್ಪರ್ಧೆಯಲ್ಲಿ ಭಾಗವಹಿಸಲು ಒಂಬತ್ತು ತಿಂಗಳುಗಳಿಂದ ಪರಿಶ್ರಮ ಪಟ್ಟಿದ್ದರು. ಎಲ್ಟಿಟಿಎಸ್-ನ ತಾಂತ್ರಿಕ ಮತ್ತು ವಿಷಯ ತಜ್ಞರಿಂದ ಮಾರ್ಗದರ್ಶನ ಪಡೆದುಕೊಂಡಿದ್ದರು. ಪರಿಕಲ್ಪನೆಯ ಪುರಾವೆಗಳ (ಪಿಒಸಿ) ಅಭಿವೃದ್ಧಿಗೆ ಕಾರಣವಾಗುವ ಮೌಲ್ಯಮಾಪನಗಳು ಮತ್ತು ವಿನ್ಯಾಸ ಚಿಂತನೆಯ ಸೃಜನಶೀಲ ಪ್ರಕ್ರಿಯೆಯ ನಂತರ, ಅಗ್ರ 32 ಎಂಜಿನಿಯರಿಂಗ್ ತಂಡಗಳನ್ನು ಅಂತಿಮಗೊಳಿಸಲಾಗಿತ್ತು. ಅಂತಿಮ ಸುತ್ತಿನ ಸ್ಪರ್ಧಿಗಳು ತಮ್ಮ ಕಾರ್ಯನಿರ್ವಹಣೆಯ ಮೂಲಮಾದರಿಗಳನ್ನು ಉದ್ಯಮದ ಅನುಭವಿಗಳು, ಶಿಕ್ಷಣ ತಜ್ಞರು ಮತ್ತು ವಿಶ್ಲೇಷಕರನ್ನು ಒಳಗೊಂಡಿದ್ದ ತೀರ್ಪುಗಾರರ ಎದುರು ಪ್ರದರ್ಶಿಸಿದರು. ಸಂಪೂರ್ಣ ಮೌಲ್ಯಮಾಪನದ ನಂತರ, ಅಗ್ರ ಮೂವರು ವಿಜೇತರನ್ನು ಘೋಷಿಸಲಾಯಿತು. ಟೆಕ್ಜಿಯಂಲ ಮೂಲಕ ಸಾಧಿಸಿದ ನಾವೀನ್ಯತೆಯ ಶ್ರೇಷ್ಠತೆಯನ್ನು ಎತ್ತಿ ತೋರಿಸಲಾಯಿತು. ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರಗಳನ್ನು ಮುನ್ನಡೆಸುವ ಎಲ್ಟಿಟಿಎಸ್- ನ ಬದ್ಧತೆ ಪುನರುಚ್ಚರಿಸಿದ, ಎಲ್ ಆ?ಯಂಡ್ ಟಿ ಟೆಕ್ನಾಲಜಿ ಸರ್ವೀಸಸ್ ನ ಮುಖ್ಯ ಕಾರ್ಯಾಚರಣಾ ಅಧಿಕಾರಿ ಮತ್ತು ಕಾರ್ಯನಿರ್ವಾಹಕ ನಿರ್ದೇಶಕ ಅಭಿಷೇಕ್ ಸಿನ್ಹಾ ಅವರು, ಟೆಕ್ ಜಿಯಂಲ - ಜಾಗತಿಕ ಎಂಜಿನಿಯರಿಂಗ್, ವಿಜ್ಞಾನ ಮತ್ತು ತಂತ್ರಜ್ಞಾನ ಶೈಕ್ಷಣಿಕ ಸಮುದಾಯಗಳಿಂದ ಸಂಭ್ರಮಾಚರಿಸಲ್ಪಡುವ ಪ್ರಮುಖ ವೇದಿಕೆಯಾಗಿದೆ. ಟೆಕ್ಜಿಯಂಲ ನಂತಹ ವೇದಿಕೆಗಳಲ್ಲಿ ಅಸಾಧಾರಣ ಪ್ರತಿಭೆಗಳನ್ನು ಆಕರ್ಷಿಸುವ ನಮ್ಮ ಸಮರ್ಪಣೆ ಸ್ಪಷ್ಟವಾಗಿದೆ. ಇದು ಮಹತ್ವಾಕಾಂಕ್ಷಿ ಎಂಜಿನಿಯರ್ಗಳಲ್ಲಿ ನಾವೀನ್ಯತೆ ಮತ್ತು ಪರಿಣತಿಯನ್ನು ಬೆಳೆಸುವ ಪ್ರಮುಖ ಉಪಕ್ರಮವಾಗಿದೆ. ಶೈಕ್ಷಣಿಕ ಮತ್ತು ಉದ್ಯಮದ ನಡುವಣ ಅಂತರವನ್ನು ಪರಿಣಾಮಕಾರಿಯಾಗಿ ಕಡಿಮೆ ಮಾಡುವುದು ಈ ಉಪಕ್ರಮದ ಅತಿ ದೊಡ್ಡ ಪರಿಣಾಮವಾಗಿದೆ. ಕಾರ್ಯಕ್ರಮದ ಪ್ರಾರಂಭದಿಂದಲೂ ನೋಂದಣಿಗಳು ಮತ್ತು ಪರಿಕಲ್ಪನೆ ಸಲ್ಲಿಕೆಗಳಲ್ಲಿ ಐದು ಪಟ್ಟು ಹೆಚ್ಚಳ ಕಂಡುಬಂದಿದೆ. ಭಾಗವಹಿಸಿದವರು ಮತ್ತು ಪ್ರಶಸ್ತಿ ಪುರಸ್ಕೃತರಿಗೆ ಅವರ ಗಮನಾರ್ಹ ಸಾಧನೆಗಳಿಗಾಗಿ ನನ್ನ ಹೃತ್ಪೂರ್ವಕ ಅಭಿನಂದನೆಗಳು. ಇದು ಉದ್ಯಮದ ಪ್ರಗತಿಗೆ ಕೊಡುಗೆ ನೀಡುವುದಲ್ಲದೆ ಹೊಸ ಸಾಧನೆ ಮಾಡಲು ನಮ್ಮನ್ನು ಇನ್ನಷ್ಟು ಪ್ರೇರಣೆ ನೀಡಲಿದೆ ಎಂದು ಹೇಳಿದ್ದಾರೆ.



**ಜಯಶ್ರೀ.ಬಿ.ಆರ್**
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ಅಧಿಕ ಖರ್ಚು, ವಾಹನ ಚಾಲನೆಯಲ್ಲಿ ಎಚ್ಚರಿಕೆ, ಬಂಧುಗಳಿಂದ ನಷ್ಟ.

**ವೃಷಭ:** ಕಾನೂನುಬಾಹಿರ ಚಟುವಟಿಕೆ, ಧನ ಸಂಪಾದನೆ, ಆಸ್ತಿ ವಿಚಾರದಲ್ಲಿ ತೊಂದರೆ, ಕೆಲಸ ಕಾರ್ಯಗಳಲ್ಲಿ ನಿಧಾನ ಪ್ರಗತಿ.

**ಮಿಥುನ:** ಸಾಲ ಮಾಡುವ ಪರಿಸ್ಥಿತಿ, ಕೆಲಸ ಕಾರ್ಯಗಳಿಗೆ ಅಡೆತಡೆ, ಕೆಟ್ಟ ಮತ್ತು ದುರಾಲೋಚನೆಗಳು.

**ಕಟಕ:** ನಿದ್ರಾಭಂಗ, ದಾಂಪತ್ಯದಲ್ಲಿ ಕಲಹ, ಅಧಿಕ ಖರ್ಚು.

**ಸಿಂಹ:** ಸಾಲದಿಂದ ಮುಕ್ತಿ ಹೊಂದುವ ಆಲೋಚನೆ, ಮಾನಸಿಕ ನೋವು, ವಾತಾವರಣ ಕಲುಷಿತ.

**ಕನ್ಯಾ:** ಸಹೋದರಿಯಿಂದ ಲಾಭ, ಮಿತ್ರರಿಂದ ಸಹಕಾರ, ಪಾಲುದಾರಿಕೆಯಲ್ಲಿ ನಷ್ಟ, ಅಧಿಕಾರಿಗಳಿಂದ ಕಷ್ಟ.

**ತುಲಾ:** ಉದ್ಯೋಗದಿಂದ ಅನುಕೂಲ. ಕೆಲಸ ಕಾರ್ಯ ನಿಮಿತ್ತ ಪ್ರಯಾಣ, ಸ್ಥಿರಾಸ್ತಿ ವಿಚಾರವಾಗಿ ವಾಗ್ವಾದ.

**ವೃಶ್ಚಿಕ:** ವಂಶಪಾರಂಪರ್ಯ ವೃತ್ತಿಪರರಿಗೆ ಅನುಕೂಲ, ಮಕ್ಕಳಿಗೋಸ್ಕರ ಪ್ರಯಾಣ, ಬಂಧುಗಳು ಆಗಮನ.

**ಧನಸ್ಸು:** ನೆಮ್ಮದಿ ಭಂಗ, ಆರ್ಥಿಕ ದುಸ್ಥಿತಿ, ಉದ್ಯೋಗ ದೊರಕುವ ಭರವಸೆ.

**ಮಕರ:** ಮಿತ್ರರೇ ಶತ್ರುಗಳಾಗುವರು, ವ್ಯಾಪಾರದಲ್ಲಿ ಅನುಕೂಲ, ಪ್ರಯಾಣದಲ್ಲಿ ಗೊಂದಲ.

**ಕುಂಭ:** ಉದ್ಯೋಗ ಸ್ಥಳದಲ್ಲಿ ಸಮಸ್ಯೆ, ಮಕ್ಕಳಿಂದ ಅನುಕೂಲ, ಆದಾಯ ಮತ್ತು ಖರ್ಚು ಸಮ ಪ್ರಮಾಣ.

**ಮೀನ:** ತಂದೆಯಿಂದ ಅನುಕೂಲ, ತಾಯಿಯ ಆರೋಗ್ಯದಲ್ಲಿ ವ್ಯತ್ಯಾಸ, ಸ್ನೇಹಿತರಿಂದ ದೂರ ಆಗುವ ಮನಸ್ಸು.

## ಎವರೆಸ್ಟ್ ದಿನ




ಪ್ರತಿ ವರ್ಷ ಮೇ 29 ರಂದು ಮೌಂಟ್ ಎವರೆಸ್ಟ್ ದಿನವನ್ನು ಆಚರಿಸಲಾಗುತ್ತದೆ. 1953 ರಲ್ಲಿ ಆ ದಿನದಂದು ಪರ್ವತಾರೋಹಣ ಮಾಡಿದ ಪರ್ವತಾರೋಹಿಗಳಾದ ಸರ್ ಎಡ್ಮಂಡ್ ಹಿಲರಿ ಮತ್ತು ಟೆನ್ಸಿಂಗ್ ನಾರ್ಗೆ ಶೆರ್ಪಾ ಅವರನ್ನು ಗೌರವಿಸಲು ಈ ದಿನಾಂಕವನ್ನು ಆಯ್ಕೆ ಮಾಡಲಾಗಿದೆ. ಮೌಂಟ್ ಎವರೆಸ್ಟ್ ಹತ್ತುವುದು ಅನೇಕ ಜನರು ಕನಸು ಕಾಣುವ ಸಾಧನೆಯಾಗಿದೆ ಆದರೆ ಕೆಲವರು ಮಾತ್ರ ಅದನ್ನು ಸಾಧಿಸುತ್ತಾರೆ. ವಿಶ್ವದ ಅತಿ ಎತ್ತರದ ಪರ್ವತವನ್ನು ಹತ್ತುವುದು ಕೆಲವು ಮಾರಣಾಂತಿಕ ಅಪಾಯಗಳೊಂದಿಗೆ ಬರುತ್ತದೆ. ಇದಕ್ಕೆ ಉತ್ತಮ ದೈಹಿಕ ಸಾಮರ್ಥ್ಯದ ಅಗತ್ಯವಿದೆ. ಇದನ್ನು ಮಾಡುವ ಪರ್ವತಾರೋಹಿಗಳು ಸಾಮಾನ್ಯವಾಗಿ ಅತಿ ಎತ್ತರದ ಪರ್ವತವನ್ನು ಪ್ರಯತ್ನಿಸುವ ಮೊದಲು ಹಲವು ವರ್ಷಗಳ ಕಾಲ ತರಬೇತಿ ಪಡೆದಿರುತ್ತಾರೆ. ಶಿಖರವನ್ನು ತಲುಪಲು ಉತ್ತಮ ಪರ್ವತಾರೋಹಿ ಸುಮಾರು ಎರಡು ತಿಂಗಳುಗಳನ್ನು ತೆಗೆದುಕೊಳ್ಳಬಹುದು.

ಎವರೆಸ್ಟ್ ಪರ್ವತವು ಸಮುದ್ರ ಮಟ್ಟಕ್ಕಿಂತ ಅತಿ ಎತ್ತರದ ಪರ್ವತ ಎಂದು ಹೆಸರುವಾಸಿಯಾಗಿದೆ. ಇದು ಹಿಮಾಲಯದ ಮಹಾಲಂಗೂರ್ ಹಿಮಾಲ್ ಉಪ-ಶ್ರೇಣಿಯಲ್ಲಿ ಎತ್ತರವಾಗಿ ನಿಂತಿದೆ. ಇದರ ಎತ್ತರ ಸುಮಾರು 29,000 ಅಡಿಗಳು. ಹೆಚ್ಚು ಅನುಭವಿ ಪರ್ವತಾರೋಹಿಗಳು ಸೇರಿದಂತೆ ಅನೇಕ ಪರ್ವತಾರೋಹಿಗಳು ಪರ್ವತದತ್ತ ಆಕರ್ಷಿತರಾಗುತ್ತಾರೆ. ಪರ್ವತವನ್ನು ಏರಲು ಎರಡು ಮಾರ್ಗಗಳಿವೆ. ಮೊದಲನೆಯದು ನೇಪಾಳದ ಆಗ್ನೇಯದಿಂದ ಶಿಖರವನ್ನು ಸಮೀಪಿಸುವ ಪ್ರಮಾಣಿತ ಮಾರ್ಗವಾಗಿದೆ. ಇನ್ನೊಂದು ಮಾರ್ಗವು ಟಿಬೆಟ್ನ ಉತ್ತರದಿಂದ ಅದನ್ನು ತಲುಪುತ್ತದೆ. ಪರ್ವತ ಹತ್ತಲು ಗಣನೀಯ ತಾಂತ್ರಿಕ ಕ್ಲೈಂಬಿಂಗ್ ಕೌಶಲ್ಯಗಳು ಬೇಕಾಗುತ್ತವೆ. ಇದು ಎತ್ತರದ ಕಾಯಿಲೆ, ಹವಾಮಾನ, ಗಾಳಿ ಮತ್ತು ಹಿಮಪಾತ ಮತ್ತು ಖುಂಬು ಹಿಮಪಾತದಿಂದ ಉಂಟಾಗುವ ಅಪಾಯಗಳಂತಹ ಗಮನಾರ್ಹ ಅಪಾಯಗಳೊಂದಿಗೆ ಬರುತ್ತದೆ. ಕೆಲವು ಪರ್ವತಾರೋಹಿಗಳು ಏರಲು ಪ್ರಯತ್ನಿಸಿದ್ದಾರೆ ಮತ್ತು ಹಿಂತಿರುಗಿಲ್ಲ.

ಮೌಂಟ್ ಎವರೆಸ್ಟ್ ದಿನವು ಬಲಿಷ್ಠ ಎವರೆಸ್ಟ್ ಅನ್ನು ಏರಲು ಪ್ರಯತ್ನಿಸಿದ ಧೈರ್ಯಶಾಲಿ ಆರೋಹಿಗಳನ್ನು ಆಚರಿಸಲು ಒಂದು ಅವಕಾಶವಾಗಿದೆ. ನೀವು ದೃಢನಿಶ್ಚಯದಿಂದ ಇದ್ದಾಗ ಏನು ಬೇಕಾದರೂ ಸಾಧ್ಯ ಎಂಬುದನ್ನು ಅವರು ನೆನಪಿಸುತ್ತಾರೆ. ಈ ರಜಾದಿನವು ಶೌರ್ಯ ಮತ್ತು ಸಹಿಷ್ಣುತೆಯನ್ನು ಸೂಚಿಸುತ್ತದೆ. ಮೌಂಟ್ ಎವರೆಸ್ಟ್ ನಂತಹ ಅಪಾಯಕಾರಿ ಆರೋಹಣವನ್ನು ಕೈಗೊಳ್ಳಲು ಸಾಕಷ್ಟು ಧೈರ್ಯ ಬೇಕಾಗುತ್ತದೆ. ಪ್ರಪಂಚದಾದ್ಯಂತದ ಜನರು ಹೆಚ್ಚಿನ ಅವಕಾಶಗಳನ್ನು ತೆಗೆದುಕೊಳ್ಳಲು ಮತ್ತು ತಮ್ಮ ಕನಸುಗಳನ್ನು ಅನುಸರಿಸಲು ಪ್ರೇರೇಪಿಸಬಹುದು. ಜನರು ತಮ್ಮ ಜೀವನದಲ್ಲಿ ಎದುರಿಸಬಹುದಾದ ಯಾವುದೇ ಸವಾಲುಗಳನ್ನು ಎದುರಿಸಬಹುದು ಎಂದು ಇದು ತೋರಿಸುತ್ತದೆ. ಈ ರಜಾದಿನವು ನೈಸರ್ಗಿಕ ಅದ್ಭುತದ ಬಗ್ಗೆ ಜಾಗೃತಿ ಮೂಡಿಸುತ್ತದೆ. ಇದು ಅಂತಿಮವಾಗಿ ಪರ್ವತದ ಸಂರಕ್ಷಣೆಗೆ ಸಹಾಯ ಮಾಡುವ ಬೆಂಬಲಕ್ಕೆ ಕಾರಣವಾಗುತ್ತದೆ. ಪರಿಸರದ ನೈಸರ್ಗಿಕ ಸಂಪತ್ತನ್ನು ಸಂರಕ್ಷಿಸುವುದು ನಮ್ಮ ಸಮಾಜ ಮತ್ತು ಭವಿಷ್ಯದ ಪೀಳಿಗೆಗೆ ಮುಖ್ಯವಾಗಿದೆ.

## ಪಾಕ್, ಚೀನಾಗೆ ಟಕ್ಕರ್ ಕೊಡಲು ಹೊಸ ಫೈಟರ್ ಜೆಟ್‌ಗೆ ಭಾರತ ಅನುಮೋದನೆ

**ನವದೆಹಲಿ:** ಪಾಕಿಸ್ತಾನಕ್ಕೆ ಚೀನಾ ಶಸ್ತ್ರಾಸ್ತ್ರಗಳ ನೆರವಿನ ಮಧ್ಯೆ ಭಾರತವು ತನ್ನದೇ ಆದ ಸ್ಟೆಲ್ತ್ ಫೈಟರ್ ಜೆಟ್ ಯೋಜನೆಗೆ ಅನುಮೋದನೆ ನೀಡಿದೆ.

ಭಾರತದ ವಾಯು ಪ್ರಾಬಲ್ಯವನ್ನು ಎದುರಿಸಲು ತನ್ನ ಶಸ್ತ್ರಾಗಾರವನ್ನು ಬಲಪಡಿಸಲು ಪಾಕಿಸ್ತಾನಕ್ಕೆ ಸ್ಟೆಲ್ತ್ ಫೈಟರ್ ಜೆಟ್‌ಗಳನ್ನು ಪೂರೈಸುವ ಯೋಜನೆಯನ್ನು ಚೀನಾ ತ್ವರಿತಗೊಳಿಸುತ್ತಿದೆ. ಈ ನಡುವೆ ದೇಶದ ಮೊದಲ ಸ್ಟೆಲ್ತ್ ಫೈಟರ್ ಜೆಟ್ ನಿರ್ಮಿಸುವ ಯೋಜನೆಗೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅನುಮೋದನೆ ನೀಡಿದ್ದಾರೆ.

ಈ ಫೈಟರ್ ಜೆಟ್ ಅವಳಿ-ಎಂಜಿನ್, 5 ನೇ ತಲೆಮಾರಿನ ಮಿಲಿಟರಿ ವಿಮಾನವಾಗಿದೆ. ಈ ಕಾರ್ಯಕ್ರಮವನ್ನು ಸರ್ಕಾರಿ ಸ್ವಾಮ್ಯದ ಏರೋನಾಟಿಕಲ್ ಅಭಿವೃದ್ಧಿ ಸಂಸ್ಥೆ ಕಾರ್ಯಗತಗೊಳಿಸುತ್ತದೆ.

ಸ್ಟೆಲ್ತ್ ಫೈಟರ್ ಕಾರ್ಯಕ್ರಮವನ್ನು ದೇಶೀಯ ಸಂಸ್ಥೆಯು ಮಾತ್ರ ಮುನ್ನಡೆಸಲಿದೆ. ಇದಕ್ಕಾಗಿ ಸ್ವತಂತ್ರವಾಗಿ ಮತ್ತು ಜಂಟಿ ಉದ್ಯಮವಾಗಿ ಬಿಡ್‌ಗಳನ್ನು ಸಲ್ಲಿಸಬಹುದು. ಈ ಬಿಡ್‌ಗಳನ್ನು ಸರ್ಕಾರಿ ಸಂಸ್ಥೆಗಳು ಮತ್ತು ಖಾಸಗಿ ಉದ್ಯಮಗಳು ಎರಡೂ ಮಾಡಬಹುದು ಎಂದು ಭಾರತದ ರಕ್ಷಣಾ ಸಚಿವಾಲಯ




ತಿಳಿಸಿದೆ. ರಕ್ಷಣಾ ವಲಯದಲ್ಲಿ ಖಾಸಗಿ ಉತ್ಪಾದನೆಯನ್ನು ಹೆಚ್ಚಿಸುವ ಜೊತೆಗೆ ದೇಶದ ಪ್ರಮುಖ ಫೈಟರ್ ಜೆಟ್ ತಯಾರಕರಾದ ಸರ್ಕಾರಿ ಸ್ವಾಮ್ಯದ ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್ ಮೇಲಿನ ಒತ್ತಡವನ್ನು ಕಡಿಮೆ ಮಾಡುವ ಉದ್ದೇಶದಿಂದ ಖಾಸಗಿ ಸಂಸ್ಥೆಗಳನ್ನು ಒಳಗೊಳ್ಳುವ ನಿರ್ಧಾರ ಕೈಗೊಳ್ಳಲಾಗಿದೆ. ಈ ವರ್ಷದ ಮಾರ್ಚ್‌ನಲ್ಲಿ ಉನ್ನತ ರಕ್ಷಣಾ ಸಮಿತಿಯು ಇದಕ್ಕೆ ಶಿಫಾರಸು ಮಾಡಿತ್ತು.

4.5 ತಲೆಮಾರಿನ ಫೈಟರ್ ಜೆಟ್ ಆಗಿರುವ LCA ತೇಜಸ್ ಯೋಜನೆಗೆ ಸಂಬಂಧಿಸಿದಂತೆ HAL ವಿಳಂಬ ಎದುರಿಸುತ್ತಿದೆ. ಅಮೆರಿಕದ ಜನರಲ್ ಎಲೆಕ್ಟ್ರಿಕ್‌ನಿಂದ ಜೆಟ್ ಎಂಜಿನ್‌ಗಳ ನಿಧಾನಗತಿಯ ವಿತರಣೆಯೇ ವಿಳಂಬಕ್ಕೆ ಕಾರಣ ಎಂದು ಹೆಚ್‌ಎಎಲ್ ತಿಳಿಸಿದೆ.

ಭಾರತದ DRDOಕೂಡ GTRE GTX-35VS ಕಾವೇರಿ ಎಂಜಿನ್ ಯೋಜನೆಯಡಿಯಲ್ಲಿ ತನ್ನ ಸ್ಥಳೀಯ ವಿಮಾನ ಎಂಜಿನ್ ಅಭಿವೃದ್ಧಿಪಡಿಸುವ ಕೆಲಸ ಮಾಡುತ್ತಿದೆ. ಇದನ್ನು LCA ತೇಜಸ್ ಫೈಟರ್ ಜೆಟ್‌ಗಾಗಿ ತಯಾರಿಸಲಾಗುತ್ತಿದೆ. ಇದು ಪ್ರಸ್ತುತ ಪ್ರಗತಿಯಲ್ಲಿರುವ ಯೋಜನೆಯಾಗಿದೆ.

ಭಾರತವು ತನ್ನ ಪ್ರಸ್ತುತ ಫೈಟರ್ ಜೆಟ್‌ಗಳಲ್ಲಿ ಹೆಚ್ಚಾಗಿ ರಷ್ಯನ್ ಮತ್ತು ಫ್ರೆಂಚ್ ಮಿಲಿಟರಿ ವಿಮಾನಗಳನ್ನು ಒಳಗೊಂಡಿರುವುದರಿಂದ ಸ್ಟೆಲ್ತ್ ಫೈಟರ್ ಯೋಜನೆಗೆ ಉತ್ತೇಜನ ನೀಡಿದೆ. ಭಾರತೀಯ ವಾಯುಪಡೆಯಲ್ಲಿ ಪ್ರಸ್ತುತ ಸ್ಕ್ವಾಡ್ರನ್‌ಗಳ ಸಂಖ್ಯೆ 31 ರಷ್ಟಿದ್ದು, ಇದು 42 ಸ್ಕ್ವಾಡ್ರನ್‌ಗಳ ಅನುಮೋದಿತ ಬಲಕ್ಕಿಂತ ಬಹಳ ಕಡಿಮೆಯಾಗಿದೆ.

ಚೀನಾ ತನ್ನ ವಾಯುಪಡೆಯನ್ನು ವೇಗವಾಗಿ ವಿಸ್ತರಿಸುತ್ತಿದೆ. ಅಲ್ಲದೇ, ಪಾಕಿಸ್ತಾನಕ್ಕೆ ತನ್ನ ವಾಯುಪಡೆಯನ್ನು ವಿಸ್ತರಿಸಲು ಸಹಾಯ ಮಾಡುತ್ತಿದೆ. ಹೀಗಾಗಿ, ಭಾರತ ಸ್ಥಳೀಯ ಸ್ಟೆಲ್ತ್ ವಿಮಾನ ಯೋಜನೆಯನ್ನು ವೇಗಗೊಳಿಸಲು ನಿರ್ಧರಿಸಿದೆ. ಭಾರತ ಈಗ 5 ನೇ ತಲೆಮಾರಿನ ಮಿಲಿಟರಿ ವಿಮಾನಗಳನ್ನು ಅಭಿವೃದ್ಧಿಪಡಿಸುವತ್ತ ಗಮನಹರಿಸುತ್ತಿದ್ದರೆ, ಚೀನಾ ಈಗಾಗಲೇ ತನ್ನ 6 ನೇ ತಲೆಮಾರಿನ ವಿಮಾನವನ್ನು ತಯಾರಿಸಿ, ಪ್ರಯೋಗ ನಡೆಸಿದೆ.

ಪಾಕಿಸ್ತಾನವು ಈಗಾಗಲೇ ಚೀನಾದ ಅತ್ಯಂತ ಮುಂದುವರಿದ ಯುದ್ಧ ವಿಮಾನಗಳಲ್ಲಿ ಒಂದಾದ ಜೆ -10 ಅನ್ನು ಹೊಂದಿದೆ. ಬೀಜಿಂಗ್ ತನ್ನ ಅತ್ಯಂತ ಮುಂದುವರಿದ ರಹಸ್ಯ ಯುದ್ಧ ವಿಮಾನವಾದ ಶೆನ್ಯಾಂಗ್ ಜೆ -35 ಕೂಡ ನೀಡಿದೆ. ಇದು ಒಂದೇ ಆಸನ, ಎರಡು ಎಂಜಿನ್, ಎಲ್ಲಾ ಹವಾಮಾನ, ರಹಸ್ಯ, ಬಹು-ಪಾತ್ರ ನಿರ್ವಹಿಸಬಲ್ಲ ಸಾಮರ್ಥ್ಯದ ಯುದ್ಧ ವಿಮಾನವಾಗಿದೆ.

## ವೀಸಾ ನಿಷೇಧಿಸಿ ಟ್ರಂಪ್ ಆದೇಶ!

**ನ್ಯೂಯಾರ್ಕ್:** ವಿದೇಶಿ ವಿದ್ಯಾರ್ಥಿಗಳಿಗೆ ಅಮೆರಿಕಾ ಸರ್ಕಾರ ಇದೀಗ ಬಿಗ್ ಶಾಕ್ ನೀಡಿದೆ. ಅಮೆರಿಕಾದಲ್ಲಿ ವಿದೇಶಿ ವಿದ್ಯಾರ್ಥಿಗಳಿಗೆ ವೀಸಾ ನಿಷೇಧಿಸಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಆದೇಶ ಹೊರಡಿಸಿದ್ದಾರೆ. ಹೊಸದಾಗಿ ವೀಸಾ ಸಲ್ಲಿಸುವ ಪ್ರಕ್ರಿಯೆಗೆ ಡೊನಾಲ್ಡ್ ಟ್ರಂಪ್ ಇದೀಗ ತಡೆ ನೀಡಿದ್ದಾರೆ. ವೀಸಾ ನಿಷೇಧದಿಂದ ಅಮೆರಿಕದ ಹಲವು ವಿಶ್ವವಿದ್ಯಾಲಯಗಳಿಗೆ ಸಂಕಷ್ಟ ಎದುರಾಗಿದೆ. ಹೌದು ಟ್ರಂಪ್ ಸರ್ಕಾರವು ಹೊಸದಾಗಿ ವೀಸಾಗೋಸ್ಕರ ಅರ್ಜಿ



ಸಲ್ಲಿಸುವ ವಿದ್ಯಾರ್ಥಿಗಳಿಗೆ ವೀಸಾ ನೀಡದಂತೆ ನಿಗದಿಪಡಿಸದಂತೆ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೊ ಪ್ರಪಂಚದಾದ್ಯಂತದ ಯುಎಸ್ ರಾಯಭಾರ ಕಚೇರಿಗಳಿಗೆ ಆದೇಶಿಸಿದ್ದಾರೆ. ತಕ್ಷಣದಿಂದಲೇ ಜಾರಿಗೆ ಬರುವಂತೆ, ಅಗತ್ಯವಿರುವ ಸಾಮಾಜಿಕ ಮಾಧ್ಯಮ ತಪಾಸಣೆ ಮತ್ತು ಪರಿಶೀಲನೆಯ ವಿಸ್ತರಣೆಗೆ ಸಿದ್ಧತೆಯಾಗಿ, ಮುಂದಿನ ಮಾರ್ಗದರ್ಶನ ನೀಡುವವರೆಗೆ ಕಾನ್ಸುಲರ್ ವಿಭಾಗಗಳು ಯಾವುದೇ ಹೆಚ್ಚುವರಿ ವಿದ್ಯಾರ್ಥಿ ಅಥವಾ ವಿನಿಮಯ ಸಂದರ್ಶಕರ (ಎಫ್, ಎಂ ಮತ್ತು ಜೆ) ವೀಸಾ ನೇಮಕಾತಿ ಸಾಮರ್ಥ್ಯವನ್ನು ಸೇರಿಸಬಾರದು ರೂಬಿಯೊ ಸೂಚಿಸಿದ್ದಾರೆ. ನೀವು ಶಾಲೆ ಬಿಟ್ಟರೆ, ತರಗತಿಗಳನ್ನು ಬಿಟ್ಟುಬಿಟ್ಟರೆ ಅಥವಾ ನಿಮ್ಮ ಶಾಲೆಗೆ ತಿಳಿಸದೆ ನಿಮ್ಮ ಅಧ್ಯಯನ ಕಾರ್ಯಕ್ರಮವನ್ನು ತೊರೆದರೆ, ನಿಮ್ಮ ವಿದ್ಯಾರ್ಥಿ ವೀಸಾ ರದ್ದಾಗಬಹುದು ಮತ್ತು ಭವಿಷ್ಯದಲ್ಲಿ ನೀವು ಯುಎಸ್ ವೀಸಾಗಳಿಗೆ ಅರ್ಹತೆಯನ್ನು ಕಳೆದುಕೊಳ್ಳಬಹುದು. ಯಾವುದೇ ಸಮಸ್ಯೆಗಳನ್ನು ತಪ್ಪಿಸಲು ಯಾವಾಗಲೂ ನಿಮ್ಮ ವೀಸಾದ ನಿಯಮಗಳನ್ನು ಪಾಲಿಸಿ ಮತ್ತು ನಿಮ್ಮ ವಿದ್ಯಾರ್ಥಿ ಸ್ಥಿತಿಯನ್ನು ಕಾಪಾಡಿಕೊಳ್ಳಿ ಎಂದು ಇಲ್ಲಿನ ಯುಎಸ್ ರಾಯಭಾರ ಕಚೇರಿ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದೆ.

## ಭಾರತದೊಂದಿಗೆ ಮಾತುಕತೆಗೆ ಸಿದ್ಧ; ಪಾಕ್ ಪ್ರಧಾನಿ

**ಪಾಕಿಸ್ತಾನ:** ಭಾರತದೊಂದಿಗೆ ಶಾಂತಿ ಮಾತುಕತೆಗೆ ಎದುರು ನೋಡುತ್ತಿರುವುದಾಗಿ ಪಾಕಿಸ್ತಾನ ಪ್ರಧಾನಿ ಶೆಹಬಾಜ್ ಷರೀಫ್ ತಿಳಿಸಿದ್ದಾರೆ. ನಾಲ್ಕು ದೇಶಗಳ ಪ್ರವಾಸದ ವೇಳೆ ಮಾತನಾಡಿರುವ ಅವರು, ಕಾಶ್ಮೀರ, ಭಯೋತ್ಪಾದನೆ, ನೀರು ಮತ್ತು ವ್ಯಾಪಾರ ಸೇರಿದಂತೆ ಎಲ್ಲಾ ಸಮಸ್ಯೆಗಳನ್ನು ಪರಿಹರಿಸಲು ಭಾರತದೊಂದಿಗೆ ಮಾತುಕತೆ ನಡೆಸುವ ಇಚ್ಛೆ ವ್ಯಕ್ತಪಡಿಸಿದ್ದಾರೆ. ಟರ್ಕಿಯಿಂದ ಇರಾನ್‌ಗೆ ಬಂದಿಳಿದ ಷರೀಫ್ ಅವರನ್ನು ಅಧ್ಯಕ್ಷ ಮಸೌದ್ ಪೆಜೆಶ್ಕಿಯಾನ್ ಅವರು ಸಾದಾಬಾದ್ ಅರಮನೆಯಲ್ಲಿ ಸ್ವಾಗತಿಸಿದರು. ಈ ವೇಳೆ ಪೆಜೆಶ್ಕಿಯಾನ್ ಜೊತೆಗೆ ಜಂಟಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಷರೀಫ್, ಶಾಂತಿಗಾಗಿ ಭಾರತದೊಂದಿಗೆ ಮಾತುಕತೆಗೆ ಸಿದ್ಧ ಎಂದರು. ಕಾಶ್ಮೀರ, ನೀರು ಸೇರಿದಂತೆ ಎಲ್ಲ ಬಿಕ್ಕಟ್ಟನ್ನು ಮಾತುಕತೆ ಮೂಲಕ ಪರಿಹಾರ ಕಂಡುಕೊಳ್ಳಬೇಕಿದೆ. ನಾವು ಕೂಡ ನೆರೆಯ ದೇಶದೊಂದಿಗೆ ವ್ಯಾಪಾರ ಮತ್ತು ಭಯೋತ್ಪಾದನೆ ಎದುರಿಸುವ ಕುರಿತು ಮಾತುಕತೆ ನಡೆಸಲು ಸಿದ್ಧ ಎಂದರು. ಇದೇ ವೇಳೆ ಭಾರತ ಯುದ್ಧವನ್ನು ಆಯ್ಕೆ ಮಾಡಿಕೊಂಡಲ್ಲಿ ಅದನ್ನು ಎದುರಿಸಲು ಸಿದ್ಧ ಎನ್ನುವ ಮೂಲಕ ಎಚ್ಚರಿಕೆಯನ್ನು ನೀಡಿದರು. ಈ ಹಿಂದೆ ಹೇಳಿದಂತೆ ಆಕ್ರಮಣಕಾರಿ ಮಾರ್ಗ ಆರಿಸಿಕೊಂಡರೆ, ನಾವು ನಮ್ಮ ಪ್ರದೇಶವನ್ನು ರಕ್ಷಿಸಿಕೊಳ್ಳುತ್ತೇವೆ. ಅವರು ಶಾಂತಿಯನ್ನು ಸ್ವೀಕರಿಸಿದರೆ, ನಾವು ಕೂಡ ನಿಜವಾಗಿಯೂ ಗಂಭೀರವಾಗಿ ಮತ್ತು ಪ್ರಾಮಾಣಿಕವಾಗಿ ಶಾಂತಿಯನ್ನು ಬಯಸುತ್ತೇವೆ ಎಂದರು. ಪಾಕಿಸ್ತಾನ ಆಕ್ರಮಿತ ಕಾಶ್ಮೀರವನ್ನು ಮರಳಿ ಪಡೆಯುವುದು ಮತ್ತು ಭಯೋತ್ಪಾದನೆಯ ವಿಷಯದ ಬಗ್ಗೆ ಮಾತ್ರ ಪಾಕಿಸ್ತಾನದೊಂದಿಗೆ ಮಾತುಕತೆ ನಡೆಸುವುದಾಗಿ ಭಾರತ ಈಗಾಗಲೇ ಸ್ಪಷ್ಟಪಡಿಸಿದೆ. ಭಾರತದೊಂದಿಗಿನ ನಾಲ್ಕು ದಿನಗಳ ಸೇನಾ ಸಂಘರ್ಷದಲ್ಲಿ ನಾವು ಗೆದ್ದಿದ್ದೇವೆ ಎಂದು ಹೇಳಿದ್ದಾರೆ.

## ಬಂಧಿತ ಪುಣೆ ವಿದ್ಯಾರ್ಥಿಗೆ ಹೈಕೋರ್ಟ್ ಜಾಮೀನು; ಮಹಾರಾಷ್ಟ್ರ ಸರ್ಕಾರಕ್ಕೆ ತರಾಟೆ

**ಮುಂಬೈ:** ಭಾರತ-ಪಾಕ್ ಯುದ್ಧದ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿದ್ದಕ್ಕಾಗಿ ಬಂಧಿಸಲ್ಪಟ್ಟ ಪುಣೆಯ 19 ವರ್ಷದ ವಿದ್ಯಾರ್ಥಿನಿಗೆ ಬಾಂಬೆ ಹೈಕೋರ್ಟ್ ಮಂಗಳವಾರ ಜಾಮೀನು ಮಂಜೂರು ಮಾಡಿದೆ ಮತ್ತು ಆಕೆಯ ಪೋಸ್ಟ್‌ಗೆ ಮಹಾರಾಷ್ಟ್ರ ಸರ್ಕಾರವು ತೀವ್ರವಾದ ಪ್ರತಿಕ್ರಿಯೆಯನ್ನು ನೀಡಿರುವುದನ್ನು ಖಂಡಿಸಿ, ಆಕೆಯನ್ನು ತಕ್ಷಣ ಬಿಡುಗಡೆ ಮಾಡಲು ಆದೇಶಿಸಿದೆ. ನ್ಯಾಯಮೂರ್ತಿಗಳಾದ ಗೌರಿ ಗೋಡ್ಸೆ ಮತ್ತು ಸೋಮಶೇಖರ್ ಸುಂದರೇಶನ್ ಅವರ ರಜಾ ಪೀಠ ವಿದ್ಯಾರ್ಥಿನಿಯನ್ನು ಸರ್ಕಾರವು ಕಠಿಣ ಅಪರಾಧಿಯಂತೆ ನಡೆಸಿಕೊಂಡಿರುವುದು ಸಂಪೂರ್ಣವಾಗಿ ಆಘಾತಕಾರಿ ಎಂದು ಹೇಳಿದೆ. ವಿದ್ಯಾರ್ಥಿನಿಯನ್ನು ತಕ್ಷಣವೇ ಜಾಮೀನಿನ ಮೇಲೆ ಬಿಡುಗಡೆ ಮಾಡಲು ನ್ಯಾಯಾಲಯ ಆದೇಶಿಸಿದೆ, ಆಕೆ ಪೋಸ್ಟ್‌ನ್ನು ತಕ್ಷಣವೇ ಅಳಿಸಿಹಾಕಿದ್ದರಿಂದ, ಪಶ್ಚಾತ್ತಾಪ ವ್ಯಕ್ತಪಡಿಸಿದ್ದರಿಂದ ಮತ್ತು ಅದಕ್ಕಾಗಿ ಕ್ಷಮೆಯಾಚಿಸಿದ್ದರಿಂದ ಆಕೆಯನ್ನು ಬಂಧಿಸಬಾರದಿತ್ತು ಎಂದು ಕೋರ್ಟ್ ಹೇಳಿದೆ. ಇದು ಬಾಲಕಿ ಇನ್ನು ಮುಂದೆ ಬಂಧನದಲ್ಲಿರಬೇಕಾದ ಪ್ರಕರಣವಲ್ಲ ಎಂದು ಹೈಕೋರ್ಟ್ ಹೇಳಿದ್ದು, ಮಂಗಳವಾರವೇ ಬಾಲಕಿಯನ್ನು ಬಿಡುಗಡೆ ಮಾಡಬೇಕು ಎಂದು ಹೇಳಿದೆ. ಆಕೆಯನ್ನು ಇಂದು ಸಂಜೆಯೇ ಬಿಡುಗಡೆ ಮಾಡುವಂತೆ ಸಂಬಂಧಪಟ್ಟ ಜೈಲು ಅಧಿಕಾರಿಗೆ ಸೂಚಿಸಲಾಗಿದೆ ಎಂದು ನ್ಯಾಯಾಲಯ ತಿಳಿಸಿದೆ. ಬಾಲಕಿಯ ಕಾಲೇಜು ಹೊರಡಿಸಿದ ರಸ್ಟಿಕೇಶನ್ ಆದೇಶವನ್ನು ನ್ಯಾಯಾಲಯ ಅಮಾನತುಗೊಳಿಸಿದೆ ಮತ್ತು ಆಕೆ ಪರೀಕ್ಷೆಗೆ ಹಾಜರಾಗಲು ಆಕೆಗೆ ಹಾಲ್ ಟಿಕೆಟ್ ನೀಡಬೇಕೆಂದು ಸಂಸ್ಥೆಗೆ ನಿರ್ದೇಶಿಸಿದೆ. ವಿದ್ಯಾರ್ಥಿನಿಗೆ ವಿವರಣೆ ನೀಡಲು ಅವಕಾಶ ನೀಡದೆ ತರಾತುರಿಯಲ್ಲಿ ರಸ್ಟಿಕೇಶನ್ ಆದೇಶವನ್ನು ಹೊರಡಿಸಲಾಗಿದೆ ಎಂದು ಹೈಕೋರ್ಟ್ ಹೇಳಿದೆ. ಆಪರೇಷನ್ ಸಿಂಧೂರ್ ಮಧ್ಯೆ ಭಾರತ-ಪಾಕ್ ಯುದ್ಧದ ಸಮಯದಲ್ಲಿ ಭಾರತ ಸರ್ಕಾರವನ್ನು ಟೀಕಿಸಿ ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿದ್ದಕ್ಕಾಗಿ ಪುಣೆಯ ವಿದ್ಯಾರ್ಥಿನಿಯನ್ನು ಈ ತಿಂಗಳ ಆರಂಭದಲ್ಲಿ ಬಂಧಿಸಲಾಗಿತ್ತು.

## ಜ್ಯೋತಿ ಮಲ್ಹೋತ್ರಾ ಮೊಬೈಲ್, ಲ್ಯಾಪ್‌ಟಾಪ್‌ನಿಂದ 12,000 ಜಿಬಿ ಡಾಟಾ ರಿಟ್ರೀವ್ ಸ್ಫೋಟಕ ರಹಸ್ಯಗಳು ಬಯಲಿಗೆ!



**ನವದೆಹಲಿ:** ಪಾಕಿಸ್ತಾನದ ಪರ ಬೇಹುಗಾರಿಕೆ ನಡೆಸುತ್ತಿದ್ದ ಆರೋಪದ ಮೇಲೆ ಬಂಧನಕ್ಕೆ ಒಳಗಾಗಿರುವ ಯೂಟ್ಯೂಬರ್ ಜ್ಯೋತಿ ಮಲ್ಹೋತ್ರಾ ಕುರಿತು ಒಂದಾದಮೇಲೊಂದು ಸ್ಫೋಟಕ ವಿಚಾರಗಳು ಬೆಳಕಿಗೆ ಬರುತ್ತಿವೆ. 33 ವರ್ಷದ ಯೂಟ್ಯೂಬರ್‌ನ ಡಿಜಿಟಲ್ ಸಾಧನಗಳನ್ನು ಪರಿಶೀಲಿಸಿದ ಹರಿಯಾಣ ಪೊಲೀಸರು ಹಲವು ರಹಸ್ಯಗಳನ್ನು ಬಯಲಿಗೆಳೆದಿದ್ದಾರೆ.

ಪೊಲೀಸ್ ಮೂಲಗಳು ಹೇಳುವಂತೆ, ಜ್ಯೋತಿ ನಾಲ್ವರು ಪಾಕಿಸ್ತಾನಿ ಗುಪ್ತಚರ ಏಜೆಂಟ್‌ಗಳೊಂದಿಗೆ ಸಂಪರ್ಕದಲ್ಲಿದ್ದರು ನಾಲ್ವರ ಜೊತೆಗೂ ಪ್ರತ್ಯೇಕವಾಗಿ ಮಾತನಾಡುತ್ತಿದ್ದರು. ನಾಲ್ವರ ಪೈಕಿ ದೆಹಲಿಯಲ್ಲಿರುವ ಪಾಕಿಸ್ತಾನ ಹೈಕಮಿಷನ್‌ನ ಡ್ಯಾನಿಶ್, ಅಹ್ಸಾನ್ ಮತ್ತು ಶಾಹಿದ್ ಸೇರಿದ್ದಾರೆ. ಸದ್ಯ ಪಾಕಿಸ್ತಾನ ಭದ್ರತಾ ಸಂಸ್ಥೆಯೊಳಗಿನ ಈ ಏಜೆಂಟರ ಹುದ್ದೆಗಳು ಮತ್ತು ಉದ್ಯೋಗ ಶೀರ್ಷಿಕೆಗಳನ್ನು ದೃಢೀಕರಿಸಲು ತನಿಖಾಧಿಕಾರಿಗಳು ಪ್ರಯತ್ನಿಸುತ್ತಿದ್ದಾರೆ.

ಇದಕ್ಕೂ ಮುನ್ನವೇ ಜ್ಯೋತಿ ಮಲ್ಹೋತ್ರಾಳಾ ಲ್ಯಾಪ್‌ಟಾಪ್, ಫೋನ್ ಸೇರಿದಂತೆ ಹಲವು ಡಿಜಿಟಲ್ ಉಪಕರಣಗಳನ್ನು ವಶಪಡಿಸಿಕೊಂಡಿದ್ದರು. ಇದರಲ್ಲಿ ಅನೇಕ ಸಂದೇಶಗಳನ್ನ ಅಳಿಸಿದ ಹೊರತಾಗಿಯೂ 12 ಟಿಬಿ (12 ಸಾವಿರ ಜಿಬಿ) ಡೇಟಾವನ್ನು ರಿಟ್ರೀವ್ ಮಾಡುವಲ್ಲಿ ಪೊಲೀಸರು ಯಶಸ್ವಿಯಾಗಿದ್ದಾರೆ. ಪಾಕ್ ಜೊತೆಗಿನ ಇನ್ನಷ್ಟು ಸುಳಿವುಗಳನ್ನು ಪತ್ತೆಹಚ್ಚಲು ಡೇಟಾಗಳನ್ನ ಪರಿಶೀಲಿಸಲಾಗುತ್ತಿದೆ.

ಇನ್ನೂ ಈ ಡೇಟಾಗಳ ಪ್ರಕಾರ, ಯೂಟ್ಯೂಬರ್ ಜ್ಯೋತಿಗೆ ತಾನು ಮಾತಾಡ್ತಿರೋದು ಐಎಸ್‌ಐ ಅಧಿಕಾರಿಗಳ ಜೊತೆ ಎಂದು ಗೊತ್ತಿತ್ತು, ಆದರೂ ಭಯ ಇಲ್ಲದಂತೆ ಅವರೊಂದಿಗಿನ ಸಂಪರ್ಕವನ್ನು ಮುಂದುವರಿಸಿದ್ದಳು ಅನ್ನೋದು ತಿಳಿದುಬಂದಿದೆ.

ಇನ್ನೂ ಪಾಕಿಸ್ತಾನ ಪ್ರವಾಸದ ಸಮಯದಲ್ಲಿ ಜ್ಯೋತಿ ಮಲ್ಹೋತ್ರಾಗೆ ನೀಡಿದ ವಿಐಪಿ ಸ್ವಾಗತದ ಬಗ್ಗೆ ಈಗ ಭಾರೀ ಅನುಮಾನ ಮೂಡಿದೆ. ಪಾಕ್‌ನ ಭದ್ರತಾ ಮತ್ತು ಗುಪ್ತಚರ ಅಧಿಕಾರಿಗಳು ಭಾಗವಹಿಸಿದ್ದ ಉನ್ನತ ಮಟ್ಟದ ಪಾರ್ಟಿಗಳಿಗೆ ಆಕೆಯನ್ನೂ ಆಹ್ವಾನಿಸಲಾಗಿತ್ತು ಎಂದು ವರದಿಯಾಗಿದೆ. ಸದ್ಯ ಹರಿಯಾಣದ ಹಿಸ್ಸಾರ್ ಪೊಲೀಸರ ಕಸ್ಟಡಿಯಲ್ಲಿ ಜ್ಯೋತಿ ಇದ್ದಾಳೆ.

### ಅನಿರೀಕ್ಷಿತ ಬೆಳವಣಿಗೆಯಲ್ಲಿ ಡೊನಾಲ್ಡ್ ಟ್ರಂಪ್ ಆಡಳಿತದಿಂದ

## ಎಲಾನ್ ಮಸ್ಕ್ ನಿರ್ಗಮನ!

**ವಾಷಿಂಗ್ಟನ್:** ಅನಿರೀಕ್ಷಿತ ಬೆಳವಣಿಗೆಯಲ್ಲಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಆಡಳಿತದಿಂದ ನಿರ್ಗಮಿಸುತ್ತಿರುವುದಾಗಿ ಸ್ಪೇಸ್ ಎಕ್ಸ್ ಒಡೆತನದ ಬಿಲಿಯನೇರ್ ಎಲಾನ್ ಮಸ್ಕ್ ಘೋಷಿಸಿದ್ದಾರೆ.

ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ತೆರಿಗೆ ನೀತಿಯನ್ನು ಟೀಕಿಸಿದ ಒಂದು ದಿನದ ಬಳಿಕ ವಿಶ್ವದ ಶ್ರೀಮಂತ ವ್ಯಕ್ತಿ ಎಲೋನ್ ಮಸ್ಕ್ ಅವರು ಅಮೆರಿಕದ ಸರ್ಕಾರಿ ದಕ್ಷತೆ ಇಲಾಖೆಯ ಮುಖ್ಯಸ್ಥ ಹುದ್ದೆಯಿಂದ ಕೆಳಗೆ ಇಳಿದಿದ್ದಾರೆ. ಈ ಕುರಿತು ತಮ್ಮದೇ ಒಡೆತನದ ಸಾಮಾಜಿಕ ಮಾಧ್ಯಮ 'ಎಕ್ಸ್' ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿದ್ದಾರೆ.

ವಿಶೇಷ ಸರ್ಕಾರಿ ಉದ್ಯೋಗಿಯಾಗಿ ನನ್ನ ನಿಗದಿತ ಅವಧಿ ಕೊನೆಗೊಂಡಿದೆ. ಅನಗತ್ಯ ವೆಚ್ಚಗಳನ್ನು ಕಡಿತ ಮಾಡಲು ಅವಕಾಶ ನೀಡಿದ್ದಕ್ಕಾಗಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರಿಗೆ ಧನ್ಯವಾದಗಳು ಎಂದು ತಿಳಿಸಿದ್ದಾರೆ. ಅಮೆರಿಕ ಸರ್ಕಾರದ ಕಾರ್ಯದಕ್ಷತಾ ಇಲಾಖೆ (ಡಿಒಜಿಇ) ಕಾಲಕ್ರಮೇಣ ಬಲಗೊಳ್ಳಲಿದ್ದು, ಸರ್ಕಾರದ ಕಾರ್ಯವಿಧಾನ ಭಾಗವಾಗಿದೆ ಎಂದು ಅವರು ಹೇಳಿದ್ದಾರೆ.

ತೆರಿಗೆ ಬಿಲ್‌ಗೆ ಸಂಬಂಧಿಸಿ ಉಂಟಾಗಿರುವ ಭಿನ್ನಾಭಿಪ್ರಾಯದಿಂದ ಟ್ರಂಪ್ ಆಡಳಿತವನ್ನು ತೊರೆಯಲು ಮಸ್ಕ್ ನಿರ್ಧರಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ. ಆದಾಯಕ್ಕಿಂತ ಖರ್ಚು ಹೆಚ್ಚುವುದು ಡಿಒಜಿಇ ದಕ್ಷತೆಯ ಮೇಲೆ ಪರಿಣಾಮ ಬೀರಲಿದ್ದು, ದುರ್ಬಲಗೊಳಿಸಲಿದೆ ಎಂದು ಟ್ರಂಪ್ ತೀರ್ಮಾನದ ವಿರುದ್ಧ ಮಸ್ಕ್ ಅಸಮಾಧಾನ ವ್ಯಕ್ತಪಡಿಸಿದ್ದರು




ಎನ್ನಲಾಗಿದೆ.

ಎರಡನೇ ಅವಧಿಗೆ ಅಮೆರಿಕದ ಚುಕ್ಕಾಣಿ ಹಿಡಿದ ಡೊನಾಲ್ಡ್ ಟ್ರಂಪ್, ಚುನಾವಣೆಯಲ್ಲಿ ತಮ್ಮನ್ನು ಬೆಂಬಲಿಸಿದ್ದ ಟೆಸ್ಲಾ ಮಾಲೀಕ ಎಲಾನ್ ಮಸ್ಕ್ ಅವರನ್ನು ಅಮೆರಿಕ ಸರ್ಕಾರದ ಕಾರ್ಯದಕ್ಷತಾ ಇಲಾಖೆ (ಡಿಒಜಿಇ)ಯ ಉಸ್ತುವಾರಿಯಾಗಿ ನೇಮಿಸಿದ್ದರು. ಆಡಳಿತ ವ್ಯವಸ್ಥೆ ಸುಧಾರಣೆಗೆ ಕ್ರಮ ಕೈಗೊಳ್ಳುವುದರ ಜೊತೆಗೆ ಅನಗತ್ಯ ವೆಚ್ಚಗಳನ್ನು ಕಡಿತ ಮಾಡುವುದು ಈ ಇಲಾಖೆಯ ಉದ್ದೇಶವಾಗಿತ್ತು.

ಅಮೆರಿಕದ ಅಧ್ಯಕ್ಷೀಯ ಚುನಾವಣೆಯಲ್ಲಿ ಮಸ್ಕ್ ಅವರು ಡೊನಾಲ್ಡ್ ಟ್ರಂಪ್ ಪರ ಮತಯಾಚನೆ ಮಾಡಿದ್ದರು. ನಂತರ ಟ್ರಂಪ್ ಆಔಊಇ ಮುಖ್ಯಸ್ಥರನ್ನಾಗಿ ಮಸ್ಕ್ ಅವರನ್ನು ನೇಮಿಸಿದ್ದರು.

ನೇಮಿಸಿದ ನಂತರ ಹಲವಾರು ಸರ್ಕಾರಿ ಇಲಾಖೆಗಳನ್ನು ಮುಚ್ಚಿದ್ದರು. ಉದ್ಯೋಗಿಗಳನ್ನು ಮನೆಗೆ ಕಳುಹಿಸಿದರು. ಅಮೆರಿಕದ ಹಲವು ದೇಶಗಳಿಗೆ ನೀಡುತ್ತಿದ್ದ ಗಖಿಂಖಆ ನಿಲ್ಲಿಸಿದ್ದರು. ಇದರಿಂದಾಗಿ ಸರ್ಕಾರಿ ಇಲಾಖೆಯ ಕೆಂಗಣ್ಣಿಗೆ ಮಸ್ಕ್ ಗುರಿಯಾಗಿದ್ದರು

## 'ಪ್ರೀತಿಯಿಂದ ಹೇಳಿದ್ದೇನೆ': ತೀವ್ರ ಟೀಕೆ ಬೆನ್ನಲ್ಲೇ ಕಮಲ್ ಹಾಸನ್ ಸ್ಪಷ್ಟನೆ!

**ಚೆನ್ನೈ:** 'ಕನ್ನಡ ತಮಿಳಿನಿಂದ ಹುಟ್ಟಿತು' ಎಂಬ ವಿವಾದಾತ್ಮಕ ಹೇಳಿಕೆ ನೀಡುವ ಮೂಲಕ ಕನ್ನಡಿಗರ ಆಕ್ರೋಶಕ್ಕೆ ತುತ್ತಾಗಿರುವ ತಮಿಳಿನ ಮೆಗಾಸ್ಟಾರ್ ಕಮಲ್ ಹಾಸನ್ ಬುಧವಾರ ತಮ್ಮ ಹೇಳಿಕೆಗೆ ಸ್ಪಷ್ಟನೆ ನೀಡಿದ್ದಾರೆ. ತಮ್ಮ ಸ್ಪಷ್ಟೀಕರಣವನ್ನು ವಿವರಣೆ ಎಂದು ಕರೆದಿದ್ದು, ಉತ್ತರ ಅಲ್ಲ ಎಂದಿದ್ದಾರೆ. ಕನ್ನಡ ತಮಿಳಿನಿಂದ ಹುಟ್ಟಿದೆ ಎಂಬ ಹೇಳಿಕೆಯನ್ನು ವಿವಾದವನ್ನಾಗಿ ಮಾಡಿದವರು, ಕನ್ನಡ ವಿಷಯವನ್ನು ಗೊಂದಲಗೊಳಿಸುತ್ತಿದ್ದಾರೆ ಎಂದು ಥಗ್ ಲೈಫ್ ನಟ- ಕಮ್ ರಾಜಕಾರಣಿ ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಕಮಲ್ ಹಾಸನ್, ನಾನು ಪ್ರೀತಿಯಿಂದ ಹೇಳಿದ್ದೇನೆ. ಬಹಳಷ್ಟು ಇತಿಹಾಸಕಾರರು ನನಗೆ ಭಾಷಾ ಇತಿಹಾಸವನ್ನು ಕಲಿಸಿದ್ದಾರೆ. ನಾನು ಬೇರೇನೂ ಹೇಳಿಲ್ಲ ಎಂದು ಸಮರ್ಥಿಸಿಕೊಂಡರು. ತಮಿಳುನಾಡು ಎಲ್ಲರಿಗೂ ಆಶ್ರಯ ನೀಡುವ ಅಪರೂಪದ ರಾಜ್ಯವಾಗಿದೆ. 'ತಮಿಳುನಾಡಿನಲ್ಲಿ ಮೆನನ್ ಮುಖ್ಯಮಂತ್ರಿ ಆಗಿದ್ದರು. ರೆಡ್ಡಿ ಒಬ್ಬರು ಮುಖ್ಯಮಂತ್ರಿ ಆಗಿದ್ದಾರೆ. ತಮಿಳರೊಬ್ಬರು ಸಿಎಂ ಆಗಿದ್ದು, ಕನ್ನಡಿಗ ಅಯ್ಯಂಗಾರ್ ಒಬ್ಬರು ಮುಖ್ಯಮಂತ್ರಿಯಾಗಿದ್ದಾರೆ ಎಂದು ತಿಳಿಸಿದರು. ಪ್ರೀತಿ ಎಂದಿಗೂ ಕ್ಷಮೆ ಕೇಳುವುದಿಲ್ಲ: 'ಥಗ್ ಲೈಫ್' ಬ್ಯಾನ್ ಕುರಿತ ಕರೆಗೆ ಪ್ರತಿಕ್ರಿಯಿಸಿದ ಕಮಲ್ ಹಾಸನ್, ಕರ್ನಾಟಕದ ಜನರು ನನ್ನನ್ನು ಮತ್ತು ನನ್ನ ಸಿನಿಮಾ ನೋಡಿಕೊಳ್ಳುತ್ತಾರೆ ಎಂಬ ಭರವಸೆ ವ್ಯಕ್ತಪಡಿಸಿದರು. ಕರ್ನಾಟಕದಿಂದ ಬಂದ ಮುಖ್ಯಮಂತ್ರಿಯೊಬ್ಬರಿಂದ (ಜಯಲಲಿತಾ) ಸಮಸ್ಯೆ ಎದುರಾದಾಗ ನನಗೆ ಬೆಂಬಲ ನೀಡಿದ್ದು ಕರ್ನಾಟಕ. ಇಲ್ಲಿಗೆ ಬಾ, ಮನೆ ಕೊಡುತ್ತೇವೆ, ಎಲ್ಲೂ ಹೋಗಬೇಡಿ ಎಂದು ಕನ್ನಡಿಗರು ಬೆಂಬಲಿಸಿದ್ದರು. ಹೀಗಾಗಿ ಥಗ್ ಲೈಫ್, ಕಮಲ್ ಹಾಸನ್ ಅವರನ್ನು ಜನರೇ ನೋಡಿಕೊಳ್ಳುತ್ತಾರೆ ಎಂದರು. ಇದು ಉತ್ತರ ಅಲ್ಲ. ವಿವರಣೆ. ಪ್ರೀತಿ ಎಂದಿಗೂ ಕ್ಷಮೆ ಕೇಳುವುದಿಲ್ಲ ಎಂದು ಅವರು ಹೇಳಿದರು. ಥಗ್ ಲೈಫ್ ಸಿನಿಮಾವನ್ನು ನಿಷೇಧಿಸುವಂತೆ ಪ್ರತಿಪಕ್ಷ ಬಿಜೆಪಿ ಸೇರಿದಂತೆ ಹಲವು ಕನ್ನಡಪರ ಸಂಘಟನೆಗಳು ಕರೆ ನೀಡಿರುವಂತೆಯೇ, ಕಮಲ್ ಹಾಸನ್ ಸಾರ್ವಜನಿಕವಾಗಿ ಕ್ಷಮೆಯಾಚಿಸದಿದ್ದರೆ ಚಿತ್ರವನ್ನು ನಿಷೇಧಿಸುವುದಾಗಿ ಬೆದರಿಕೆ ಹಾಕಿದ್ದಾರೆ.

### ಕರ್ನಾಟಕ ತೀವ್ರ ಕಿಡಿ ಬೆನ್ನಲ್ಲೇ ಯೂಟರ್ನ್ ಹೊಡೆದ ಆಂಧ್ರ ಸಿಎಂ

## ಎಚ್‌ಎಎಲ್ ಸ್ಥಳಾಂತರ ಕೇಳಿಲ್ಲ, ವಿಸ್ತರಿತ ಘಟಕ ಸ್ಥಾಪನೆಗೆ ಬೇಡಿಕೆ ಇಟ್ಟಿದ್ದೇವೆ

**ಅಮರಾವತಿ:** ಬೆಂಗಳೂರಿನ ಹೆಚ್‌ಎಎಲ್ ಯುದ್ಧ ವಿಮಾನ ನಿರ್ಮಾಣ ಘಟಕವನ್ನು ತಮ್ಮ ರಾಜ್ಯಕ್ಕೆ ಕೊಂಡೊಯ್ಯಲು ಆಂಧ್ರ ಸರ್ಕಾರ ದೆಹಲಿ ಮಟ್ಟದಲ್ಲಿ ಭಾರೀ ಲಾಬಿ ನಡೆಸಿದೆ ಎಂಬ ವರದಿಗೆ ಕರ್ನಾಟಕದಲ್ಲಿ ಭಾರೀ ಆಕ್ರೋಶ ವ್ಯಕ್ತವಾದ ಬೆನ್ನಲ್ಲೇ ಅಂತಹ ಯಾವುದೇ ಯತ್ನ ನಡೆದಿಲ್ಲ ಎಂದು ಸ್ವತಃ ಆಂಧ್ರಪ್ರದೇಶದ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಅವರು ಬುಧವಾರ ಸ್ಪಷ್ಟಪಡಿಸಿದ್ದಾರೆ.

ಬುಧವಾರ ಅಮರಾವತಿಯಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಮಾತನಾಡಿರುವ ಅವರು, ಬೆಂಗಳೂರಿನಲ್ಲಿರುವ ಹೆಚ್‌ಎಎಲ್ ಅನ್ನು ಆಂಧ್ರಪ್ರದೇಶಕ್ಕೆ ಸ್ಥಳಾಂತರಿಸಲು ನಾನು ಎಂದಿಗೂ ಕೇಳಿಲ್ಲ. ಇದು ಒಂದು ಬೃಹತ್, ಕಾರ್ಯತಂತ್ರದ ಸೌಲಭ್ಯ, ಅಂತಹ ಸಂಸ್ಥೆಗಳನ್ನು ಸ್ಥಳಾಂತರಿಸಲು ಸಾಧ್ಯವಿಲ್ಲ ಹಾಗೂ ಸ್ಥಳಾಂತರಿಸಲೂಬಾರದು. ನಾನು ಯಾವುದೇ ಯೋಜನೆಯನ್ನು ಒಂದು ಪ್ರದೇಶದಿಂದ ಮತ್ತೊಂದು ಪ್ರದೇಶಕ್ಕೆ ಸ್ಥಳಾಂತರಿಸಲು ಎಂದಿಗೂ ಪ್ರಯತ್ನಿಸಿಲ್ಲ, ಅಂತಹ ಕಲ್ಪನೆ ನನ್ನ ಇತಿಹಾಸದ ಭಾಗವಲ್ಲ ಎಂದು ಹೇಳಿದರು.

ಕೇಂದ್ರಕ್ಕೆ ನಮ್ಮ ವಿನಂತಿಯು ಆಂಧ್ರಪ್ರದೇಶದಲ್ಲಿ ರಕ್ಷಣಾ ಉತ್ಪಾದನಾ ಕೇಂದ್ರವನ್ನು ಸ್ಥಾಪಿಸುವುದು ಮಾತ್ರವೇ ಆಗಿತ್ತು.



ಇತರ ರಾಜ್ಯಗಳಿಂದ ಅಸ್ತಿತ್ವದಲ್ಲಿರುವ ಸೌಲಭ್ಯಗಳನ್ನು ಸ್ಥಳಾಂತರಿಸುವುದು ಅಲ್ಲ ಎಂದು ಸ್ಪಷ್ಟಪಡಿಸಿದರು.

ನಾನು ಈ ಹಿಂದೆ ಉತ್ಪಾದನೆ ಮತ್ತು ಇತರ ರಕ್ಷಣಾ ಸಂಬಂಧಿತ ಕೈಗಾರಿಕೆಗಳ ಸ್ಥಾಪನೆಗೆ ಲೇಪಾಕ್ಷಿಯ ಸಾಮರ್ಥ್ಯವನ್ನು ಎತ್ತಿ ತೋರಿಸಿದ್ದೆ. ಆದರೆ, ದುರದೃಷ್ಟವಶಾತ್,



ಕರ್ನಾಟಕದ ಕೆಲವು ರಾಜಕಾರಣಿಗಳು ಇದನ್ನು ಹೆಚ್‌ಎಎಲ್ ಅನ್ನು ಆಂಧ್ರಪ್ರದೇಶಕ್ಕೆ ವರ್ಗಾಯಿಸುವ ಪ್ರಯತ್ನ ಎಂದು ತಪ್ಪಾಗಿ ಅರ್ಥೈಸಿಕೊಂಡಿದ್ದಾರೆ.

ತೆಲುಗು ದೇಶಂ ಪಕ್ಷವು ಅಭಿವೃದ್ಧಿಯ ಸಮಾನಾರ್ಥಕವಾಗಿದೆ. ನಾವು ಎಂದಿಗೂ ಪ್ರಗತಿಯನ್ನು ವಿರೋಧಿಸುವುದಿಲ್ಲ, ಅಥವಾ ಇತರ ರಾಜ್ಯಗಳಿಂದ ಯೋಜನೆಗಳನ್ನು ಕಸಿದುಕೊಳ್ಳುವುದರಲ್ಲಿ ನಾವು ನಂಬಿಕೆ ಇಡುವುದಿಲ್ಲ ಎಂದು ತಿಳಿಸಿದರು.

ಇತ್ತೀಚೆಗೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರನ್ನು ಭೇಟಿಯಾದ ನಾಯ್ಡು ಕೇಂದ್ರ ಸರ್ಕಾರಿ ಸ್ವಾಮ್ಯದ ಎಚ್‌ಎಎಲ್‌ನಲ್ಲಿ ಸೌಕರ್ಯದ ಕೊರತೆಯಿದೆ ಎಂಬ ಕಾರಣ ನೀಡಿ, ಎಚ್‌ಎಎಲ್‌ನ ಯುದ್ಧವಿಮಾನ ತಯಾರಿಕಾ ಘಟಕವನ್ನು ತಮ್ಮ ರಾಜ್ಯಕ್ಕೆ ಸ್ಥಳಾಂತರಿಸುವಂತೆ ಲಾಬಿ ನಡೆಸಿದ್ದಾರೆ ಎಂಬ ವಿಚಾರ ಕರ್ನಾಟಕದಲ್ಲಿ ಭಾರೀ ಸದ್ದು ಮಾಡಿತ್ತು.

ಡಿ.ಕೆ.ಶಿವಕುಮಾರ್, ಸಚಿವ ಎಂ.ಬಿ.ಪಾಟೀಲ್ ಸೇರಿದಂತೆ ಅನೇಕ ನಾಯಕರು ಈ ನಡೆಯ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದರು. ವಿವಾದ ತೀವ್ರವಾಗುತ್ತಿದ್ದಂತೆ, ಆಂಧ್ರಪ್ರದೇಶದ ಮುಖ್ಯಮಂತ್ರಿ ಕಚೇರಿಯು, ಅಸ್ತಿತ್ವದಲ್ಲಿರುವ ಯಾವುದೇ ಸೌಲಭ್ಯವನ್ನು ಸ್ಥಳಾಂತರಿಸುವ ಪ್ರಸ್ತಾಪವನ್ನು ತಾವು ಕೇಂದ್ರದ ಮುಂದಿಟ್ಟಿಲ್ಲ. ಬೆಂಗಳೂರಿನಲ್ಲಿ ಹೆಚ್ಚುವರಿ ವಿಸ್ತರಿತ ಘಟಕಕ್ಕೆ ಜಾಗ ಇಲ್ಲ ಎಂಬ ಕಾರಣಕ್ಕೆ ನಾವು ಗಡಿ ಪ್ರದೇಶದಲ್ಲಿ ಜಾಗದ ಪ್ರಸ್ತಾಪ ಮಾಡಿದ್ದೆವು ಎಂದು ಸ್ಪಷ್ಟಪಡಿಸಿತ್ತು. ಅದಾದ ಬಳಿಕ ಇದೀಗ ಸ್ವತಃ ಮುಖ್ಯಮಂತ್ರಿ ನಾಯ್ಡು ಅವರೇ ಈ ಸ್ಪಷ್ಟೀಕರಣ ನೀಡಿದ್ದಾರೆ.

## ಭದ್ರತಾ ಪಡೆಗಳ ಕಾರ್ಯಾಚರಣೆಗೆ ಬೆದರಿ 18 ನಕ್ಸಲರು ಶರಣಾಗತಿ

**ದೆಹಲಿ:** ಸುಕ್ಮಾ ಪ್ರಮುಖ ನಕ್ಸಲ್ ನಾಯಕ ಬಸವರಾಜು ಸೇರಿದಂತೆ 27 ಮಾವೋವಾದಿಗಳನ್ನು ಭದ್ರತಾ ಪಡೆಗಳು ಎನ್ ಕೌಂಟರ್ ಮಾಡಿದ ಬಳಿಕ ನಕ್ಸಲ್‌ವಾದದ ಜಂಘಾಬಲವೇ ಹುದುಗಿ ಹೋಗಿದೆ. ಭದ್ರತಾ ಪಡೆಗಳ ಕಾರ್ಯಾಚರಣೆಗೆ ಬೆದರಿರುವ 18 ನಕ್ಸಲರು ಇಂದು (ಮಂಗಳವಾರ) ಅಧಿಕಾರಿಗಳ ಮುಂದೆ ಶರಣಾಗಿದ್ದಾರೆ.



ಛತ್ತೀಸ್‌ಗಢದ ಸುಕ್ಮಾ ಜಿಲ್ಲೆಯಲ್ಲಿ ಭದ್ರತಾ ಪಡೆಗಳ ಮುಂದೆ 18 ನಕ್ಸಲರು ಮಂಡಿಯೂರಿದ್ದಾರೆ. ಅವರಲ್ಲಿ 10 ಮಂದಿ ತಲೆಗೆ 38 ಲಕ್ಷ ರೂಪಾಯಿ ಬಹುಮಾನ ಘೋಷಿತರಾದ ಪ್ರಮುಖ ನಕ್ಸಲರೂ ಇದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಟೊಳ್ಳು, ಅಮಾನವೀಯ ಮಾವೋವಾದಿ ಸಿದ್ಧಾಂತ ಮತ್ತು ಸ್ಥಳೀಯ ಬುಡಕಟ್ಟು ಜನಾಂಗದವರ ಮೇಲೆ ನಕ್ಸಲರು ನಡೆಸಿದ ದೌರ್ಜನ್ಯಗಳಿಂದ ನೊಂದಿರುವ ನಕ್ಸಲರು ಇಂದು ಹಿರಿಯ ಪೊಲೀಸ್ ಮತ್ತು ಸಿಆರ್‌ಪಿಎಫ್ ಅಧಿಕಾರಿಗಳ ಮುಂದೆ ಶರಣಾಗಿದ್ದಾರೆ ಎಂದು ಸುಕ್ಮಾ ಪೊಲೀಸ್ ವರಿಷ್ಠಾಧಿಕಾರಿ ಕಿರಣ್ ಚವಾಣ್ ಅವರು ಮಾಹಿತಿ ನೀಡಿದ್ದಾರೆ. ಕಾಡೊಳಗಿನ ಹಳ್ಳಿಗಳಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಅನುಷ್ಠಾನಗೊಳಿಸಲು ರಾಜ್ಯ ಸರ್ಕಾರ ಜಾರಿ ಮಾಡಿರುವ 'ನಿಯದ್ ನೆಲ್ಲನಾರ್' (ನಿಮ್ಮ ಒಳ್ಳೆಯ ಗ್ರಾಮ) ಯೋಜನೆ ಮತ್ತು ಶರಣಾಗತಿ ಮತ್ತು ಪುನರ್ವಸತಿ ನೀತಿಗೆ ಪ್ರಭಾವಿತರಾಗಿದ್ದಾರೆ. ಹೀಗಾಗಿ, ಅವರು ಶಸ್ತ್ರಾಸ್ತ್ರಗಳನ್ನು ತ್ಯಜಿಸಿದ್ದಾರೆ ಎಂದು ಅಧಿಕಾರಿ ತಿಳಿಸಿದ್ದಾರೆ. ಶರಣಾದ ನಕ್ಸಲರಲ್ಲಿ ಮಾವೋವಾದಿಗಳ ಪಿಎಲ್‌ಜಿಎ ಬೆಟಾಲಿಯನ್ ಸಂಖ್ಯೆ 1ರ ಪ್ಲಟೂನ್ ಪಾರ್ಟಿ ಕಮಿಟಿ ಸದಸ್ಯ ಮಡ್ಕಮ್ ಆಯ್ತಾ (25), ಅದೇ ಬೆಟಾಲಿಯನ್‌ನ ಸದಸ್ಯ ಭಾಸ್ಕರ್ ಅಲಿಯಾಸ್ ಭೋಗಮ್ ಲಖಾ (26) ಎಂಬಿಬ್ಬರ ತಲೆಗೆ 8 ಲಕ್ಷ ರೂಪಾಯಿ ಘೋಷಣೆಯಾಗಿತ್ತು. ಮಾವೋವಾದಿಗಳ ಪ್ರದೇಶ ಸಮಿತಿ ಸದಸ್ಯ ಮಡ್ಕಮ್ ಕಮ್ಲು (25) ಮತ್ತು ಲಕ್ಷ್ಮಣ್ ಅಲಿಯಾಸ್ ಮದ್ವಿ ಛನ್ನು (28) ತಲೆಗೆ 5 ಲಕ್ಷ, ಇತರ ಆರು ಜನರಿಗೆ ತಲಾ 2 ಲಕ್ಷ ರೂಪಾಯಿ ಘೋಷಿಸಲಾಗಿತ್ತು ಎಂದು ಅವರು ಹೇಳಿದ್ದಾರೆ.

## ಎವರೆಸ್ಟ್ ಶಿಖರ ಏರಿ ಇತಿಹಾಸ ಸೃಷ್ಟಿಸಿದ ಪರ್ವತಾರೋಹಿ ಮುಕುಲ್ ಬಂಗ್ವಾಲ್

**ಶ್ರೀನಗರ:** ಉತ್ತರಾಖಂಡದ ಯುವಕರು ಪರ್ವತಾರೋಹಣದಲ್ಲಿ ನಿರಂತರವಾಗಿ ಸಾಧನೆ ಮಾಡುತ್ತಿದ್ದಾರೆ. ಪೌರಿ ಜಿಲ್ಲೆಯ ಶ್ರೀನಗರ ಗರ್ವಾಲ್‌ನ ಮುಕುಲ್ ಬಂಗ್ವಾಲ್ (ವಯಸ್ಸು 22) ವಿಶ್ವದ ಅತಿ ಎತ್ತರದ ಶಿಖರ ಮೌಂಟ್ ಎವರೆಸ್ಟ್ ಏರುವ ಮೂಲಕ ಇತಿಹಾಸ ಸೃಷ್ಟಿಸಿದ್ದಾರೆ. ಮುಕುಲ್ ಅವರ ಸಾಧನೆಗೆ ಅವರ ಕುಟುಂಬ ಮತ್ತು ಗರ್ವಾಲ್ ವಿಶ್ವವಿದ್ಯಾಲಯ ಸಂತಸ ವ್ಯಕ್ತಪಡಿಸಿದೆ.





ಮುಕುಲ್ ಬಂಗ್ವಾಲ್ ಪ್ರಸ್ತುತ ಹೇಮಾವತಿ ನಂದನ್ ಬಹುಗುಣ ಗರ್ವಾಲ್ ವಿಶ್ವವಿದ್ಯಾಲಯದಲ್ಲಿ ಬಿಎಸ್??ಸಿ ಮೂರನೇ ವರ್ಷದ ವಿದ್ಯಾರ್ಥಿಯಾಗಿದ್ದಾರೆ. ಇವರು ರಾಷ್ಟ್ರೀಯ ಕೆಡೆಟ್ ಕಾರ್ಪ್ಸ್ (ಓಅಅ)ನ ಪ್ರತಿನಿಧಿಯಾಗಿ ಈ ಪರ್ವತಾರೋಹಣ ಪೂರ್ಣಗೊಳಿಸಿದರು.

ಎವರೆಸ್ಟ್ ಶಿಖರ ತಲುಪಿದ ನಂತರ ಮುಕುಲ್ ಎನ್‌ಸಿಸಿ ಧ್ವಜ ಹಾರಿಸಿದ್ದಾರೆ. ಮೂಲತಃ ಶ್ರೀನಗರದ ಧಾರಿ ದೇವಿ ಕಲಿಯಸೌದ್ ಪ್ರದೇಶದ ನಿವಾಸಿಯಾದ ಮುಕುಲ್ ಬಂಗ್ವಾಲ್, ಸರಳ ಕುಟುಂಬದಿಂದ ಬಂದವರು. ತಂದೆ ದುರ್ಗಾ ಪ್ರಸಾದ್ ಬಂಗ್ವಾಲ್ ಮತ್ತು ತಾಯಿ ರಜನಿ ದೇವಿ ತಮ್ಮ ಮಗನಿಗೆ ಪರ್ವತಾರೋಹಣದಲ್ಲಿ ಮುಂದುವರಿಯಲು ಪ್ರೇರಣೆಯಂತೆ.

ಮುಕುಲ್ ಸಹೋದರಿ ಮಾನಸಿ ಬಂಗ್ವಾಲ್ ಕೂಡ ಅಧ್ಯಯನದಲ್ಲಿ ಅತ್ಯುತ್ತಮ ಸಾಧನೆ ತೋರುತ್ತಿದ್ದು, ತನ್ನ ಸಹೋದರನ ಐತಿಹಾಸಿಕ ಸಾಧನೆಗೆ ಹೆಮ್ಮೆಪಟ್ಟಿದ್ದಾರೆ. ತಮ್ಮನ ಸಾಧನೆಗೆ ನಮ್ಮ ಕುಟುಂಬ, ತರಬೇತುದಾರರು, ವಿಶ್ವವಿದ್ಯಾಲಯ ಮತ್ತು ಎನ್‌ಸಿಸಿ ಅಧಿಕಾರಿಗಳ ವಿಶೇಷ ಕೊಡುಗೆ ಕಾರಣ ಎಂದು ಅವರು ಹೇಳಿದರು.

ಎವರೆಸ್ಟ್‌ನಂತಹ ಸವಾಲಿನ ಪರ್ವತಾರೋಹಣದ ಸಮಯದಲ್ಲಿ ನಾನು ಅನೇಕ ದೈಹಿಕ ಮತ್ತು ಮಾನಸಿಕ ಹೋರಾಟಗಳನ್ನು ಎದುರಿಸಬೇಕಾಯಿತು ಎಂದು ಮುಕುಲ್ ಹೇಳಿದ್ದಾರೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಹೃತಿಕ್ ರೋಷನ್ ಜೊತೆ ಸಿನಿಮಾ



ಕಾಂತಾರ, ಕೆಜಿಎಫ್ 2, ಸಲಾರ್ ಸಿನಿಮಾಗಳನ್ನು ನಿರ್ಮಿಸಿದ್ದ ಹೊಂಬಾಳೆ ಸಂಸ್ಥೆ ಕಡೆಯಿಂದ ಈಗ ಗುಡ್ ನ್ಯೂಸ್ ಸಿಕ್ಕಿದೆ. ಬಾಲಿವುಡ್‌ನ ಖ್ಯಾತ ನಟ ಹೃತಿಕ್ ರೋಷನ್ ಜೊತೆ ಸಿನಿಮಾ ಮಾಡೋದಾಗಿ ಹೊಂಬಾಳೆ ಫಿಲಂಸ್ ಘೋಷಿಸಿದೆ.

ಹೃತಿಕ್ ಅವರನ್ನು ಗ್ರೀಕ್ ಗಾಡ್ ಎಂದು ಕರೆಯುತ್ತಾರೆ. ಅವರು ಅನೇಕರ ಮನಗೆದ್ದಿದ್ದಾರೆ. ಹೃತಿಕ್ ರೋಷನ್ ಅವರು ಹೊಂಬಾಳೆ ಫಿಲಂಸ್ ಜೊತೆ ಕೈಜೋಡಿಸಿದ್ದಾರೆ. ನಾವು ಅವರನ್ನು ಸ್ವಾಗತಿಸಲು ಹೆಮ್ಮೆಪಡುತ್ತೇವೆ ಎಂದು ಹೊಂಬಾಳೆ ಸಂಸ್ಥೆ ಅನೌನ್ಸ್ ಮಾಡಿದೆ. ಸದ್ಯದಲ್ಲೇ ಈ ಚಿತ್ರದ ನಿರ್ದೇಶಕರ ಕುರಿತು ಹೆಚ್ಚಿನ ಮಾಹಿತಿಯನ್ನು ನಿರ್ಮಾಣ ಸಂಸ್ಥೆ ತಿಳಿಸಲಿದೆ.



**‘ಹೊಂಬಾಳೆ ಫಿಲಂಸ್’ನಿಂದ ಗುಡ್ ನ್ಯೂಸ್**

ರಾಜಕುಮಾರ, ಯುವರತ್ನ, ಕೆಜಿಎಫ್, ಕಾಂತಾರ ಮತ್ತು ಬಘೀರಾದಂತಹ ಯಶಸ್ವಿ ಚಿತ್ರಗಳ ಮೂಲಕ ಕರ್ನಾಟಕದಲ್ಲಿ ಭದ್ರ ನೆಲೆ ಕಂಡುಕೊಂಡಿರುವ ಹೊಂಬಾಳೆ ಫಿಲಂಸ್, ಯಾವಾಗಲೂ ಮೌಲ್ಯಯುತ ಕಥೆಗಳನ್ನು ಹೇಳುವಲ್ಲಿ ಮತ್ತು ಉತ್ತಮ ಮನರಂಜನೆ ನೀಡುವಲ್ಲಿ ಬದ್ಧವಾಗಿದೆ. ಈಗ ಹೃತಿಕ್ ರೋಷನ್ ಅವರಂತಹ ಪ್ರತಿಭಾವಂತ ನಟರೊಂದಿಗೆ ಕೈಜೋಡಿಸಿದ್ದು, ದೇಶದ ಗಡಿಗಳನ್ನು ಮೀರಿ ಪ್ರಪಂಚದಾದ್ಯಂತ ಕಥೆಗಳನ್ನು ತಲುಪಿಸುವತ್ತ ಹೊಸ ಹೆಜ್ಜೆ ಇಟ್ಟಿದೆ.

# ಜೂನ್‌ನಲ್ಲಿ ಝೈನಾಬ್ ಜೊತೆ ಅಖಿಲ್ ಅಕ್ಕಿನೇನಿ ಮದುವೆ?

ನಾಗಾರ್ಜುನ ಅಕ್ಕಿನೇನಿ ಪುತ್ರ, ಅಖಿಲ್ ಅಕ್ಕಿನೇನಿ ಹಸೆಮಣೆ ಏರಲು ಸಿದ್ಧರಾಗಿದ್ದಾರೆ. ಜೂನ್‌ನಲ್ಲಿ ಗೆಳತಿ ಝೈನಾಬ್ ಜೊತೆ ಅಖಿಲ್ ಮದುವೆ ಫಿಕ್ಸ್ ಆಗಿದೆ ಎನ್ನಲಾದ ಸುದ್ದಿಯೊಂದು ಹರಿದಾಡುತ್ತಿದೆ.

ಬಹುಕಾಲದ ಗೆಳತಿ ಝೈನಾಬ್ ಜೊತೆ ಅಖಿಲ್ ಜೂನ್ 6ರಂದು ಹಸೆಮಣೆ ಏರಲಿದ್ದಾರೆ ಎನ್ನಲಾಗಿದೆ. ಹೈದರಾಬಾದ್‌ನ ಅನ್ನಪೂರ್ಣ ಸ್ಟುಡಿಯೋದಲ್ಲಿ ಮದುವೆ ನಡೆಯಲಿದೆ ಎಂದು ವರದಿ ಆಗಿದೆ. ಬಳಿಕ ರಾಜಸ್ಥಾನದಲ್ಲಿ ಅದ್ಧೂರಿಯಾಗಿ ಮದುವೆ ಆರತಕ್ಷತೆ ಕಾಯಕ್ರಮ ಜರುಗಲಿದೆ ಎನ್ನಲಾಗಿದೆ. ಈ ಬಗ್ಗೆ ಅಕ್ಕಿನೇನಿ ಕುಟುಂಬದಿಂದ ಅಧಿಕೃತ ಮಾಹಿತಿ ಘೋಷಿಸಬೇಕಿದೆ.

ಝೈನಾಬ್ ರಾವಡ್ಜಿ ಅವರನ್ನು ಅಖಿಲ್ 2 ವರ್ಷಗಳಿಂದ ಪ್ರೀತಿಸುತ್ತಿದ್ದರು. ಕಳೆದ ವರ್ಷ ನವೆಂಬರ್‌ನಲ್ಲಿ ಎಂಗೇಜ್‌ಮೆಂಟ್ ಮಾಡಿಕೊಂಡರು. ಈ ಬಗ್ಗೆ ಸ್ವತಃ ನಾಗಾರ್ಜುನ ರಿವೀಲ್ ಮಾಡಿದ್ದರು.





# ಸೀರೆಯಲ್ಲಿ ಮಿಂಚು ಬಳ್ಳಿಯಂತೆ ಕಂಗೊಳಿಸಿದ ರಶ್ಮಿಕಾ

ನಟಿ ರಶ್ಮಿಕಾ ಮಂದಣ್ಣ ಅವರು ಇನ್‌ಸ್ಟಾಗ್ರಾಮ್‌ನಲ್ಲಿ ಸೀರೆಯುಟ್ಟು ಮಿಂಚುತ್ತಿರುವ ಫೋಟೋಗಳನ್ನು ಹಂಚಿಕೊಂಡಿದ್ದಾರೆ. ಈ ಫೋಟೋಗಳಿಗೆ ಕ್ಯಾಮೆರಾಮನ್ ವಿಜಯ್ ದೇವರಕೊಂಡನಾ ಅಂತ ಅಭಿಮಾನಿಗಳು ಕಾಮೆಂಟ್ ಮಾಡಿದ್ದಾರೆ.



ಈ ಫೋಟೋಗೆ ಸುಂದರ ಸಾಲುಗಳ ಕ್ಯಾಪ್ಷನ್ ಕೊಟ್ಟಿರೋ ರಶ್ಮಿಕಾ ಈ ಚಿತ್ರಗಳಲ್ಲಿ ಇರೋದೆಲ್ಲ ನನ್ನ ನೆಚ್ಚಿನವು. ಬಣ್ಣ, ವೈಬ್, ಈ ಸ್ಥಳ, ನನಗೆ ಈ ಸೀರೆಯನ್ನು ಉಡುಗೊರೆಯಾಗಿ ನೀಡಿದ ಮಹಿಳೆ, ಛಾಯಾಗ್ರಾಹಕ ಮತ್ತು ಈ ಫೋಟೋದಲ್ಲಿರುವ ಎಲ್ಲವೂ ಬೇರೆಯಾವುದಕ್ಕೂ ಸರಿಸಾಟಿ ಇಲ್ಲದ್ದು? ಎಂದು ಬರೆದುಕೊಂಡಿದ್ದಾರೆ.

ಇದು ನಟ ವಿಜಯ್ ದೇವರಕೊಂಡ ಅವರೇ ಕ್ಲಿಕ್ ಮಾಡಿರಬಹುದು. ಸೆಟ್ಟಿಂಗ್ ನೋಡಿದ್ರೆ ವಿಜಯ್ ಅವರ ಮನೆಯಂತೆಯೇ ಇದೆ ಎಂದು ನೆಟ್ಟಿಗರು ಈ ಫೋಟೋಗಳಿಗೆ ಕಾಮೆಂಟ್ ಮಾಡಿದ್ದಾರೆ.

ರಶ್ಮಿಕಾ ಮತ್ತು ವಿಜಯ್ ಕೆಲವು ಸಮಯದಿಂದ ಡೇಟಿಂಗ್‌ನಲ್ಲಿದ್ದಾರೆ ಎಂಬ ವದಂತಿ ಇದೆ. ಇಬ್ಬರೂ ಸಾರ್ವಜನಿಕವಾಗಿ ಈ ವಿಚಾರವನ್ನು ದೃಢಪಡಿಸಿಲ್ಲ. ಇಬ್ಬರೂ ಈ ಹಿಂದೆ ‘ಗೀತಾ ಗೋವಿಂದಂ’ ಮತ್ತು ‘ಡಿಯರ್ ಕಾಮ್ರೇಡ್’ ಚಿತ್ರಗಳಲ್ಲಿ ಒಟ್ಟಿಗೆ ಕೆಲಸ ಮಾಡಿದ್ದರು. ಅನೇಕ ಕಾರ್ಯಕ್ರಮಗಳಲ್ಲಿ ಇಬ್ಬರೂ ಆಗಾಗ ಒಟ್ಟಿಗೆ ಕಾಣಿಸಿಕೊಳ್ಳುತ್ತಿರುತ್ತಾರೆ.

ಏನೇ ಆದ್ರೂ, ರಶ್ಮಿಕಾ ನಿಗೂಢ ಛಾಯಾಗ್ರಾಹಕನ ಹೆಸರು ಬಹಿರಂಗಪಡಿಸದಿದ್ದರೂ, ನೆಟ್ಟಿಗರು ಮಾತ್ರ ದೇವರಕೊಂಡ ಅವರೇ ಆ ಛಾಯಾಗ್ರಾಹಕ ಎಂದು ಊಹಿಸಿದ್ದಾರೆ.



# ಸೋಷಿಯಲ್ ಮೀಡಿಯಾದಿಂದ ದೀಪಿಕಾ ದಾಸ್ ದಿಢೀರ್ ಬ್ರೇಕ್– ಫ್ಯಾನ್ಸ್‌ಗೆ ಶಾಕ್

‘ಬಿಗ್ ಬಾಸ್ ಕನ್ನಡ 7’ರ ಖ್ಯಾತಿಯ ದೀಪಿಕಾ ದಾಸ್ ಸೋಷಿಯಲ್ ಮೀಡಿಯಾದಲ್ಲಿ ಬ್ರೇಕ್ ತೆಗೆದುಕೊಳ್ಳೋದಾಗಿ ಪೋಸ್ಟ್ ಶೇರ್ ಮಾಡಿ ಫ್ಯಾನ್ಸ್‌ಗೆ ಶಾಕ್ ಕೊಟ್ಟಿದ್ದಾರೆ.

ತಮ್ಮ ಇನ್ಸ್ಟಾಗ್ರಾಂ ಖಾತೆಯಲ್ಲಿ, ನಾನು ಸೋಷಿಯಲ್ ಮೀಡಿಯಾದಿಂದ ಬ್ರೇಕ್ ತೆಗೆದುಕೊಳ್ಳುತ್ತಿದ್ದೇನೆ. ಧನ್ಯವಾದಗಳು ಎಂದು ನಟಿ ಬರೆದುಕೊಂಡಿದ್ದಾರೆ. ದಿಢೀರ್ ಎಂದು ನಟಿ ಹೀಗೆ ಪೋಸ್ಟ್ ಮಾಡಿದ್ದೇಕೆ ಎಂಬ ಪ್ರಶ್ನೆ ಅಭಿಮಾನಿಗಳಲ್ಲಿ ಮೂಡಿದೆ. ಕೆಲವರು ಕಾಮೆಂಟ್ ಬಾಕ್ಸ್‌ನಲ್ಲಿ ಏನಾದರೂ ಗುಡ್ ನ್ಯೂಸ್ ಕೊಡ್ತಿದ್ದೀರಾ, ತಾಯಿ ಆಗಿದ್ದೀರಾ ಎಂದು ನೇರವಾಗಿಯೇ ಪ್ರಶ್ನಿಸಿದ್ದಾರೆ. ನಟಿಗೆ ಏನಾಯ್ತು ಎಂದು ಕೆಲವರು ತಲೆ ಕೆಡಿಸಿಕೊಂಡಿದ್ದಾರೆ.

ಈ ವರ್ಷ ಜನವರಿ 31ರಂದು ದೀಪಿಕಾ ದಾಸ್ ನಟನೆಯ ‘ಪಾರು ಪಾರ್ವತಿ’ ಸಿನಿಮಾ ರಿಲೀಸ್ ಆಗಿತ್ತು. ಸಿನಿಮಾದಲ್ಲಿ ಅವರು ಪ್ರಮುಖ ಪಾತ್ರದಲ್ಲಿ ನಟಿಸಿದ್ದರು.

ನಾಗಿಣಿ, ಬಿಗ್ ಬಾಸ್ ಖ್ಯಾತಿಯ ದೀಪಿಕಾ ದಾಸ್ ಅವರು ಉದ್ಯಮಿ ದೀಪಕ್ ಜೊತೆ ಕಳೆದ ವರ್ಷ ಮಾರ್ಚ್‌ನಲ್ಲಿ ಹಸೆಮಣೆ ಏರಿದರು. ಕುಟುಂಬಸ್ಥರ ಸಮ್ಮುಖದಲ್ಲಿ ಗೋವಾದಲ್ಲಿ ಅದ್ಧೂರಿಯಾಗಿ ಮದುವೆಯಾದರು.



## ಆರ್‌ಸಿಬಿ ಕ್ವಾಲಿಫೈಯರ್ 1 ಎಂಟ್ರಿಗೆ ಕೊಡುಗೆ ನೀಡಿದ ಕೊಹ್ಲಿಗೆ

# ದಿನೇಶ್ ಕಾರ್ತಿಕ್ ವಿಶೇಷ ಗೌರವ

**ಮುಂಬೈ:** ಲಕ್ನೋ ವಿರುದ್ಧದ ಪಂದ್ಯದಲ್ಲಿ ಆರ್‌ಸಿಬಿ ವಿರೋಚಿತ ಗೆಲುವು ದಾಖಲಿಸಿ ಕ್ವಾಲಿಫೈಯರ್ 1ಗೆ ಲಗ್ಗೆಯಿಡುವಲ್ಲಿ ಪಾತ್ರ ವಹಿಸಿದ ವಿರಾಟ್ ಕೊಹ್ಲಿಗೆ ಬ್ಯಾಟಿಂಗ್ ಕೋಚ್ ದಿನೇಶ್ ಕಾರ್ತಿಕ್ ವಿಶೇಷ ಗೌರವ ಸಲ್ಲಿಸಿದ್ದಾರೆ.

ಲಕ್ನೋ ಸೂಪರ್ ಜೈಂಟ್ಸ್ ವಿರುದ್ಧ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವನ್ನು ಸ್ಮರಣೀಯ ಗೆಲುವಿನಲ್ಲಿ ಕೊಹ್ಲಿ ಪ್ರಮುಖ ಪಾತ್ರ ವಹಿಸಿದರು. ಅವರ 54 ರನ್‌ಗಳ ಆಟವು ಆರ್‌ಸಿಬಿ 228 ರನ್‌ಗಳನ್ನು ಯಶಸ್ವಿಯಾಗಿ ಬೆನ್ನಟ್ಟಿ ಕ್ವಾಲಿಫೈಯರ್ 1 ಕ್ಕೆ ತಲುಪಲು ಕಾರಣವಾಯಿತು. ಬ್ಯಾಟಿಂಗ್ ಕೋಚ್ ಮತ್ತು ಮಾರ್ಗದರ್ಶಕ ದಿನೇಶ್ ಕಾರ್ತಿಕ್, ಈ ಐಪಿಎಲ್ ಋತುಗಳಲ್ಲಿ ಕೊಹ್ಲಿಯ ಅಪ್ರತಿಮ ಸ್ಥಿರತೆಯನ್ನು ಹಾಡಿಹೊಗಳಿದ್ದಾರೆ.



ವಿರಾಟ್ ಕೊಹ್ಲಿ ಅವರ ಅರ್ಧಶತಕ ಮತ್ತು ಜಿತೇಶ್ ಶರ್ಮಾ ಅವರ ಅಬ್ಬರದ ಫಿನಿಶ್ ನೆರವಿನಿಂದ, ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವು ಲಕ್ನೋ ವಿರುದ್ಧ ಆರು ವಿಕೆಟ್‌ಗಳ ಜಯದೊಂದಿಗೆ ಐಪಿಎಲ್ 2025 ರ ಕ್ವಾಲಿಫೈಯರ್ 1 ರಲ್ಲಿ ಸ್ಥಾನ ಪಡೆದುಕೊಂಡಿತು. 228 ರನ್‌ಗಳ ಬೃಹತ್ ಗುರಿಯನ್ನು ಬೆನ್ನಟ್ಟಿದ ಆರ್‌ಸಿಬಿ, ತಮ್ಮ ಬ್ಯಾಟಿಂಗ್ ಕ್ರಮಾಂಕದಾದ್ಯಂತ ಪ್ರಮುಖ ಕೊಡುಗೆಗಳೊಂದಿಗೆ ಸ್ಕೋರ್‌ಬೋರ್ಡ್ ಒತ್ತಡವನ್ನು ಉತ್ತಮವಾಗಿ ನಿಭಾಯಿಸಿತು.

ಫಿಲ್ ಸಾಲ್ಟ್ ಜೊತೆಗೂಡಿ ಆರಂಭಿಕನಾಗಿ ಆಡಿದ ಕೊಹ್ಲಿ, ಹೆಚ್ಚಿನ ಗುರಿ ಬೆನ್ನಟ್ಟಲು ಉತ್ತಮ ರನ್ ಕೊಡುಗೆ ನೀಡಿದರು. 30 ಎಸೆತಗಳಲ್ಲಿ 54 ರನ್ ಗಳಿಸಿದರು. ಆಕ್ರಮಣಕಾರಿ ಸ್ಥಾನದೊಂದಿಗೆ ಇನ್ನಿಂಗ್ಸ್ ಅನ್ನು ಬಲಪಡಿಸಿದರು. ಕೊಹ್ಲಿ ಅರ್ಧಶತಕವು ಮಧ್ಯಮ ಕ್ರಮಾಂಕದ ಸ್ಫೋಟಕಕ್ಕೆ ಸೂಕ್ತವಾದ ವೇದಿಕೆ ಒದಗಿಸಿತು.

ಪಂದ್ಯದ ನಂತರ ಬ್ಯಾಟಿಂಗ್ ಕೋಚ್ ಮತ್ತು ಮಾರ್ಗದರ್ಶಕ ದಿನೇಶ್ ಕಾರ್ತಿಕ್ ಕೊಹ್ಲಿಯನ್ನು ಹೊಗಳಿದರು. 18 ಋತುಗಳಲ್ಲಿ ಅವರು ಕೊಹ್ಲಿ 9000 ರನ್‌ಗಳನ್ನು ಗಳಿಸಿದ್ದಾರೆ. ಅಂದರೆ ಒಂದು ಋತುವಿಗೆ 500 ರನ್‌ಗಳು. ಜನರು ಆ 12 ಋತುಗಳನ್ನು ಗಳಿಸುವಲ್ಲಿ ಯಶಸ್ವಿಯಾದರು. ಕ್ರೀಡೆಯಲ್ಲಿ ನೀವು ಕಳೆಯುವ ಪ್ರತಿ ನಿಮಿಷದೊಂದಿಗೆ ಉತ್ಸಾಹ, ಕಠಿಣ ಪರಿಶ್ರಮ, ಸಮರ್ಪಣೆ ಮನೋಭಾವ ಹೊಂದಿದ್ದೀರಿ ಎಂದು ಕೊಹ್ಲಿಯನ್ನು ಬಣ್ಣಿಸಿದ್ದಾರೆ.

ಕೊಹ್ಲಿ ಜೊತೆಗೆ ತಂಡದ ಗೆಲುವಿನಲ್ಲಿ ನಾಯಕ ಜಿತೇಶ್ ಶರ್ಮಾ ಕೂಡ ಉತ್ತಮ ಕೊಡುಗೆ ನೀಡಿದರು. ಜಿತೇಶ್ ಕೇವಲ 33 ಎಸೆತಗಳಲ್ಲಿ ಅಜೇಯ 85 ರನ್ ಗಳಿಸುವ ಮೂಲಕ ಗೆಲುವಿನ ಪ್ರಮುಖ ಪಾತ್ರ ವಹಿಸಿದರು.

## ಆರ್‌ಸಿಬಿ ವಿರುದ್ಧದ ಪಂದ್ಯದಲ್ಲಿ ನಾನಾ ಅವತಾರ

# ಪಂತ್ ಸೇರಿ ಎಲ್‌ಎಸ್‌ಜಿಗೆ ಬಿತ್ತು ಭಾರಿ ದಂಡ



**ಲಕ್ನೋ:** ಐಪಿಎಲ್ ಟೂರ್ನಿಯ ಆರ್‌ಸಿಬಿ ವಿರುದ್ಧದ ಪಂದ್ಯದಲ್ಲಿ ನೀತಿ ಸಂಹಿತೆ ಉಲ್ಲಂಘಿಸಿದ್ದಕ್ಕಾಗಿ ರಿಷಭ್ ಪಂತ್ ಸೇರಿ ಎಲ್‌ಎಸ್‌ಜಿ ತಂಡಕ್ಕೆ ಬಿಸಿಸಿಐ ದಂಡ ವಿಧಿಸಿದೆ.

ಮಂಗಳವಾರ ನಡೆದ ಲೀಗ್ ಹಂತದ ಕೊನೆ ಪಂದ್ಯದಲ್ಲಿ ಆರ್‌ಸಿಬಿ ವಿರುದ್ಧ ನಿಧಾನಗತಿಯ ಓವರ್ ದರ ಕಾಯ್ದುಕೊಂಡಿದ್ದಕ್ಕಾಗಿ ಎಲ್‌ಎಸ್‌ಜಿ ನಾಯಕ ರಿಷಭ್ ಪಂತ್ ಅವರಿಗೆ ದಂಡ ವಿಧಿಸಲಾಗಿದೆ ಎಂದು ಐಪಿಎಲ್ ಮಾಧ್ಯಮ ಸಲಹಾ ಸಂಸ್ಥೆ ತಿಳಿಸಿದೆ.

ಐಪಿಎಲ್‌ನ ಕನಿಷ್ಠ ಓವರ್ ದರ ಅಪರಾಧಗಳಿಗೆ ಸಂಬಂಧಿಸಿದಂತೆ ನೀತಿ ಸಂಹಿತೆಯ ಅಡಿಯಲ್ಲಿ ಮೂರನೇ ಬಾರಿಗೆ ನಿಯಮ ಉಲ್ಲಂಘಿಸಿದ್ದಾರೆ. ಹೀಗಾಗಿ, ರಿಷಭ್ ಪಂತ್‌ಗೆ 30 ಲಕ್ಷ ದಂಡ ವಿಧಿಸಲಾಗಿದೆ. ಇಂಪ್ಯಾಕ್ಟ್ ಪ್ಲೇಯರ್ ಸೇರಿದಂತೆ ಪ್ಲೇಯಿಂಗ್ ಎಕ್ಸ್‌ಐನ ಉಳಿದ ಸದಸ್ಯರಿಗೆ ತಲಾ 12 ಲಕ್ಷ ಅಥವಾ ಅವರ ಪಂದ್ಯ ಶುಲ್ಕದ ಶೇ.50 ರಷ್ಟು ದಂಡ ವಿಧಿಸಲಾಗಿದೆ.

ಮಂಗಳವಾರ ನಡೆದ ರೋಚಕ ಪಂದ್ಯದಲ್ಲಿ ಲಕ್ನೋ ವಿರುದ್ಧ ಆರ್‌ಸಿಬಿ ವಿಕೆಟ್‌ಗಳ ಸೋಲನುಭವಿಸಿತು. ಲಕ್ನೋ ತಂಡದ ಐಪಿಎಲ್ 2025 ಅಭಿಯಾನವು ಅವರ ತವರು ನೆಲದಲ್ಲಿ ಕಹಿ ಅನುಭವದೊಂದಿಗೆ ಕೊನೆಗೊಂಡಿತು.

ಪಂಜಾಬ್ ಅಂಕಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿಯೇ ಮುಂದುವರಿದಿದ್ದು, ಆರ್‌ಸಿಬಿ ಎರಡು ಹೆಚ್ಚುವರಿ ಅಂಕಗಳೊಂದಿಗೆ ಎರಡನೇ ಸ್ಥಾನಕ್ಕೆ ಏರಿದೆ. ಆರ್‌ಸಿಬಿ ಗುರುವಾರ ಕ್ವಾಲಿಫೈಯರ್ 1 ರಲ್ಲಿ ಪಂಜಾಬ್ ಕಿಂಗ್ಸ್ ವಿರುದ್ಧ ಪಂದ್ಯವನ್ನು ಆಡಲಿದೆ. ಇತ್ತ ಮೂರನೇ ಸ್ಥಾನಕ್ಕೆ ಕುಸಿದ ಗುಜರಾತ್ ಟೈಟಾನ್ಸ್ ಶುಕ್ರವಾರ ಎಲಿಮಿನೇಟರ್‌ನಲ್ಲಿ ಮುಂಬೈ ಇಂಡಿಯನ್ಸ್ ಅನ್ನು ಎದುರಿಸಲಿದೆ.

# ಆಪರೇಷನ್ ಸಿಂದೂರ್ ಕಾರ್ಯಚಾರಣೆ ಯಶಸ್ವಿಗೆ ‘ಜೈ ಹಿಂದ್’ ಎಂದ ಕಾಂಗ್ರೆಸ್

**ಬೆಂಗಳೂರು:** ಆಪರೇಷನ್ ಸಿಂದೂರ್ ಕಾರ್ಯಚಾರಣೆ ಯಶಸ್ವಿಯಾದ ಹಿನ್ನೆಲೆಯಲ್ಲಿ ರಾಜ್ಯ ಕಾಂಗ್ರೆಸ್ ಬೆಂಗಳೂರಿನ ಟೌನ್‌ಹಾಲ್‌ನಲ್ಲಿ ‘ಜೈಹಿಂದ್’ ಕಾರ್ಯಕ್ರಮ ಆಯೋಜಿಸಿದೆ. ಕಾರ್ಯಮವನ್ನು ಉದ್ದೇಶಿಸಿ ಮಾತನಾಡಿದ ಎಐಸಿಸಿ ಪ್ರಧಾನ ಕಾರ್ಯದರ್ಶಿ ವೇಣುಗೋಪಾಲ್, ದೇಶದ ಜನರಿಗೆ ಸೇನೆಯ ಮೇಲೆ ಗೌರವ, ನಂಬಿಕೆ, ಹೆಮ್ಮೆ ಇದೆ. ಶತ್ರುಗಳು ನಮ್ಮ ಭೂಮಿ ಮೇಲೆ ಕಾಲಿಡಲು ಸೇನೆ ಬಿಡುವುದಿಲ್ಲ. ಕಾರ್ಗಿಲ್ ಯುದ್ಧವೇ ಇರಲಿ, ಆಪರೇಷನ್ ಸಿಂದೂರ್ ಇರಲಿ, ನಮ್ಮ ಸೇನೆ ಪರಾಕ್ರಮವನ್ನು ತೋರಿಸಿದೆ. ಇಂದಿರಾ ಗಾಂಧಿ ಅವಧಿಯಲ್ಲೂ ಸೇನೆ ಪರಾಕ್ರಮವನ್ನು ತೋರಿಸಿದೆ ಎಂದು ಹೆಮ್ಮೆ ವ್ಯಕ್ತಪಡಿಸಿದರು.

ರಕ್ಷಣಾ ಇಲಾಖೆಯಲ್ಲಿ 1,78,100 ಹುದ್ದೆಗಳು ಖಾಲಿ ಇವೆ. 25 ಸಾವಿರಕ್ಕೂ ಹೆಚ್ಚು ಅಧಿಕಾರಿಗಳ ಮಟ್ಟದ ನೇಮಕಾತಿ ಬಾಕಿ ಇದೆ. ನೇಮಕಾತಿ ಮಾಡಲಿಲ್ಲ ಅಂದ್ರೆ ದೇಶದ ಸೇವೆ ಮಾಡುವುದು ಹೇಗೆ? ದೇಶದ ಭದ್ರತೆ ಮಾಡುವುದು ಹೇಗೆ ಎಂದು ಪ್ರಶ್ನಿಸಿದರು.

ನಾವೆಲ್ಲ ಕೇಂದ್ರ ಸರ್ಕಾರದ ನಿರ್ಧಾರಕ್ಕೆ ಬೆಂಬಲ ನೀಡಿದ್ದೇವೆ. ನಮ್ಮಲ್ಲಿ ರಾಜಕೀಯ ಭಿನ್ನಾಬಿಪ್ರಾಯಗಳು ಇರಬಹುದು. ಆದರೆ ನಮಗೆ ದೇಶ ಮೊದಲು ನಂತರ ಉಳಿದಿದ್ದು. ಪಾಕಿಸ್ತಾನದಲ್ಲಿ ಉಗ್ರರ ಕಾರ್ಖಾನೆ ಇದೆ. ಎರಡು ಭಾರಿ ಸರ್ವಪಕ್ಷ ಸಭೆಯನ್ನ ಕರೆಯಲಾಗಿತ್ತು. ಈ ಸಭೆಯಲ್ಲಿ ನಾವು ಕೇಂದ್ರ ಸರ್ಕಾರದ ನಿರ್ಧಾರ ಪರ ನಿಂತಿದ್ದೆವು. ಪಾಕಿಸ್ತಾನಕ್ಕೆ ನಮ್ಮ ಸೈನಿಕರು ತಕ್ಕ ಉತ್ತರ ಕೊಟ್ಟಿದ್ದಾರೆ. ವಿಶೇಷ ಸಂಸತ್ ಅಧಿವೇಶನ ಕರೆಯುವಂತೆ ಹೇಳಿದ್ದೆವು. ನಾವೆಲ್ಲಾ ಕೇಂದ್ರ ಸರ್ಕಾರ ಹಾಗೂ ಸೈನಿಕರ ಪರ ಇದ್ದೇವೆ ಎಂದರು.

ದೇಶದ ವಿಚಾರದಲ್ಲಿ ನಾವು ಯಾವುತ್ತು ರಾಜಕೀಯ ಮಾಡೋದಿಲ್ಲ. ಮುಂಬೈ ದಾಳಿ ನಡೆದಾಗ ಜಾಹೀರಾತಿನ ಮೂಲಕ ಟೀಕಾ ಟಿಪ್ಪಣಿಗಳನ್ನ ಮಾಡಿದ್ದರು. ಆದರೆ ನಾವು ಹಾಗೆ ಮಾಡಿಲ್ಲ. ಒಂದು ತಿಂಗಳಿನಿಂದ ದೇಶದ ಏಕತೆಗಾಗಿ ನಿಂತಿದ್ದೇವೆ, ಟೀಕೆ ಮಾಡಿಲ್ಲ. ಯಾಕೆ ಪಹಲ್ಗಾಮ್ ಘಟನೆಯಲ್ಲಿ ಗುಪ್ತಚರ ಇಲಾಖೆ ವಿಫಲವಾಯ್ತು ಇದಕ್ಕೆಲ್ಲಾ ಕೇಂದ್ರ ಸರ್ಕಾರ ಉತ್ತರ ಕೊಡಬೇಕು. 26 ಜನರನ್ನು ಹತ್ಯೆ ಮಾಡಿದ ಭಯೋತ್ಪಾದಕರು ಎಲ್ಲಿದ್ದಾರೆ ಎಂದು ಪ್ರಶ್ನಿಸಿದರು.




ಕದನ ವಿರಾಮ ಆಗಿದೆ, ನಾವು ಯುದ್ಧವನ್ನ ಬಯಸುವುದಿಲ್ಲ. ಕದನ ವಿರಾಮದ ಷರತ್ತುಗಳೇನು ಅಂತ ಪ್ರಧಾನಿಗಳು ಹೇಳಬೇಕು. ಅಮೇರಿಕಾ ಕದನ ವಿರಾಮ ಘೋಷಿಸುವಂತೆ ಒತ್ತಡ ಹಾಕಿದೆ. ನಮ್ಮ ವಿದೇಶಾಂಗ ನೀತಿಯು ವಾಷಿಂಗ್ಟನ್ ಡಿಸಿಯನ್ನು ಅವಲಂಬಿಸಿದೆಯಾ? ದೇಶ ಸಮಧಾನದ ಉತ್ತರವನ್ನ ಬಯಸುತ್ತಿದೆ ಎಂದು ಹೇಳಿದರು.

ಕದನ ವಿರಾಮದ ಷರತ್ತು ಏನು ಎಂಬುವುದನ್ನು ಯಾರೂ ಬಹಿರಂಗಪಡಿಸಿಲ್ಲ. ಮಾಜಿ ಪ್ರಧಾನಿ ಇಂದಿರಾ ಗಾಂಧಿ ಅವರ ಮೇಲೂ ಕೂಡ ಒತ್ತಡಗಳಿದ್ದವು. ಆದರೂ ಇಂದಿರಾ ಗಾಂಧಿ ಶಿಮ್ಲಾ ಒಪ್ಪಂದವನ್ನು ಮಾಡಿಕೊಂಡರು. ಈಗ ಪಾಕ್ ಜತೆ ಕದನ ವಿರಾಮ ಮಾಡಿಕೊಳ್ಳಲು ಷರತ್ತುಗಳೇನಾಗಿತ್ತು? ದೇಶದ ಸುರಕ್ಷತೆ ದೃಷ್ಟಿಯಿಂದ ಈ ಬಗ್ಗೆ ನಾವು ಪ್ರಶ್ನೆ ಎತ್ತಲೇಬೇಕಿದೆ ಎಂದು ಕರ್ನಾಟಕ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಹೇಳಿದರು.

ನಮ್ಮ ದೇಶದ ವಿಚಾರದಲ್ಲಿ ಮೂಗು ತೂರಿಸಲು ಅಮೇರಿಕದ ಅಧ್ಯಕ್ಷರು?. ನಮ್ಮ ಯುದ್ಧವನ್ನು ನಿಲ್ಲಿಸಲು ಡೋನಾಲ್ಡ್ ಟ್ರಂಪ್ ಯಾರು?. ನಮ್ಮ ಭೂಮಿಯ ವಿಚಾರದಲ್ಲಿ ನಿರ್ಣಯ ಕೈಗೊಳ್ಳಲು ಟ್ರಂಪ್ ಯಾರು? ಕದನ ವಿರಾಮದ ಷರತ್ತುಗಳು ಏನು?. ಕದನ ವಿರಾಮದ ಷರತ್ತು ಏನು ಎಂಬುವುದನ್ನು ಯಾರೂ ಬಹಿರಂಗಪಡಿಸಿಲ್ಲ ಎಂದು ಪ್ರಶ್ನಿಸಿದರು.

**ಇಂದಿರಾ ಗಾಂಧಿ ಫೋಟೋ ಹಾಕಿದ್ದಕ್ಕೆ ಮಾಜಿ ಸೈನಿಕರ ಆಕ್ರೋಶ**

‘ಜೈಹಿಂದ್’ ಕಾರ್ಯಕ್ರಮದಲ್ಲಿ ಮಾಜಿ ಪ್ರಧಾನಿ ಇಂದಿರಾ ಗಾಂಧಿ ಫೋಟೋ ಹಾಕಿದ್ದಕ್ಕೆ ಮಾಜಿ ಸೈನಿಕರು ಆಕ್ರೋಶ ವ್ಯಕ್ತಪಡಿಸಿದರು. ಅವರೇನು ಯುದ್ಧ ಮಾಡಲು ಹೋಗಿದ್ರಾ, ಎಂದು ಆಕ್ರೋಶ ವ್ಯಕ್ತಪಡಿಸಿದರು. ಆಕ್ರೋಶ ವ್ಯಕ್ತಪಡಿಸಿದ ಮಾಜಿ ಸೈನಿಕರನ್ನು ನಾಯಕರು ಸಮಾಧಾನ ಮಾಡಿದರು.

ಜೈ ಹಿಂದ್ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯ ಡಿ.ಕೆ.ಶಿವಕುಮಾರ್, ಕರ್ನಾಟಕ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಮತ್ತು ಎಐಸಿಸಿ ಪ್ರಧಾನ ಕಾರ್ಯದರ್ಶಿ ವೇಣುಗೋಪಾಲ್ ಸೇರಿ ಹಲವರು ಭಾಗಿಯಾಗಿದ್ದರು. ಮಾಜಿ ಸೈನಿಕರು ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರಿಗೆ ಗೌರವ ಸಲ್ಲಿಸಿದರು. ಮಾಜಿ ಸೈನಿಕರು ಗೌರವ ಪೂರ್ವಕವಾಗಿ ಆರ್ಮಿ ಜಾಕೆಟ್ ತೊಡಿಸಿದರು.

# ಬಿಎಂಟಿಸಿಯಿಂದ ‘ದಿವ್ಯ ದರ್ಶನ’ ವೀಕೆಂಡ್ ಟೂರ್ ಪ್ಯಾಕೇಜ್

**ಬೆಂಗಳೂರು:** ನಗರದ ಪ್ರಸಿದ್ಧ ದೇವಾಲಯಗಳ ದರ್ಶನಕ್ಕಾಗಿ ಸಾರ್ವಜನಿಕರಿಗೆ ಬಿಎಂಟಿಸಿ ಹೊಸ ವೀಕೆಂಡ್ ಟೂರ್ ಪ್ಯಾಕೇಜ್‌ನ್ನು ಘೋಷಣೆ ಮಾಡಿ, ಚಾಲನೆ ನೀಡಿದೆ.

8 ಪ್ರಸಿದ್ಧ ದೇವಾಲಯಗಳ ವೀಕ್ಷಣೆಯ ಒನ್ ಡೇ ಟೆಂಪಲ್ ಟೂರ್ ಯೋಜನೆಗೆ ಇಂದು ಸಾರಿಗೆ ಸಚಿವ ರಾಮಲಿಂಗರೆಡ್ಡಿ ಚಾಲನೆ ನೀಡಿದರು. ದಿವ್ಯ ದರ್ಶನ ಹೆಸರಿನಲ್ಲಿ ಬೆಂಗಳೂರಿನ ಗಾಳಿ ಆಂಜನೇಯ ಸ್ವಾಮಿ,



ರಾಜರಾಜೇಶ್ವರಿ ದೇವಸ್ಥಾನ, ಶೃಂಗಗಿರಿ ಷಣ್ಮುಖ ದೇವಾಸ್ಥಾನ, ಕುರುಮಾರಿಅಮ್ಮ ದೇವಾಲಯ, ಓಂಕಾರ ಹೀಲ್ಸ್, ಇಸ್ಕಾನ್ ವೈಕುಂಠ ದೇವಾಲಯ, ಆರ್ಟ್ ಆಫ್ ಲಿವಿಂಗ್, ಬನಶಂಕರಿ ದೇವಾಲಯ ದರ್ಶನ ಮಾಡಿಸಲಾಗುತ್ತದೆ.

ವಾರಾಂತ್ಯದಲ್ಲಿ ಬೆಳಿಗ್ಗೆ 6:30ಕ್ಕೆ ಮೆಜೆಸ್ಟಿಕ್‌ನಿಂದ ಎಸಿ ಬಸ್‌ನಲ್ಲಿ ಹೊರಟು ಸಂಜೆ 6:30ಕ್ಕೆ ಮತ್ತೆ ಮೆಜೆಸ್ಟಿಕ್‌ಗೆ ವಾಪಸ್ ಬಂದು ಸೇರಲಿದೆ. ವಯಸ್ಕರಿಗೆ 450 ರೂ., ಮಕ್ಕಳಿಗೆ 350 ರೂ. ದರ ನಿಗದಿ ಮಾಡಲಾಗಿದ್ದು, ಇದೇ ವಾರಾಂತ್ಯದಿಂದ ಪ್ಯಾಕೇಜ್ ಸೌಲಭ್ಯಗಳು ಸಿಗಲಿವೆ.

Printed, Published & Owned by N.Venugopal Krishna, Printed at Dashapramathi Mudranalaya, No.45, 4th Cross, Srigandhadakaval, Bengaluru-560079.
Published at No.45, 4th Cross, Srigandhadakaval, Bengaluru-560079. Editor: N.Venugopal Krishna, Mobile No.+91 94835 89085,
email: sanjemugilu@gmail.com, RNI No.KARKAN/2002/08054